01 May 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 160 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3


**ಭಾವನಾಂತರಂಗ**

ಅತಿಯಾದ ತಾಳ್ಮೆ, ಅತಿಯಾದ ಗೌರವ, ಅತಿಯಾದ ಮಾತು ಮತ್ತು ಮೌನ, ಎಲ್ಲವೂ ದುರ್ಬಳಕೆಯಾಗುವ ಸಾಧ್ಯತೆ ಇರುತ್ತದೆ!!

-ಸ್ನೇಹಾ ಆನಂದ್


ಒಳ ಮೀಸಲಾತಿ ನಿರ್ಧಾರ: ಗೊಂದಲಕ್ಕೆ ಆಸ್ಪದವಿಲ್ಲ : ಮುನಿಯಪ್ಪ ಪುಟ ಸಂ. 2


ಮಕ್ಕಳಿಗೆ ಆಧುನಿಕ ಶಿಕ್ಷಣದ ಜೊತೆಗೆ ಸಂಸ್ಕಾರ ಅಗತ್ಯ ಪುಟ ಸಂ. 3


ಗುಂಡ್ಲುಪೇಟೆ: ಕ್ವಾರಿಗೆ ಈಜಲು ಹೋಗಿದ್ದ ಯುವಕ ಸಾವು ಪುಟ ಸಂ. 4

# ಸದ್ಯಕ್ಕೆ ಸಿಎಂ ಬದಲಾವಣೆ ಇಲ್ಲ

## ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಘೋಷಣೆ | ಡಿಕೆಶಿ ಬಣದ ಚಟುವಟಿಕೆಗೆ ತಣ್ಣೀರು

**ಕಲಬುರಗಿ:** ರಾಜ್ಯದಲ್ಲಿ ಸದ್ಯಕ್ಕೆ ಮುಖ್ಯಮಂತ್ರಿ ಬದಲಾವಣೆ ಮಾಡುವುದಿಲ್ಲ. ಆದರೆ, ನಾಯಕತ್ವ ಬದಲಾವಣೆಯ ಗೊಂದಲ ಶೀಘ್ರದಲ್ಲಿಯೇ ಬಗೆಹರಿಯಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಘೋಷಿಸಿದ್ದಾರೆ.

ಈ ಮೂಲಕ ಕಳೆದ ಒಂದು ವರ್ಷದಿಂದ ಕೇಳಿಬರುತ್ತಿದ್ದ ಸಿಎಂ ಬದಲಾವಣೆ ಗೊಂದಲಕ್ಕೆ ಕಾಂಗ್ರೆಸ್ ಹೈಕಮಾಂಡ್ ತೆರೆ ಎಳೆದಿದೆ. ಆದರೆ ಸಚಿವ ಸಂಪುಟ ಪುನರ್ ರಚನೆಯ ಬಗ್ಗೆ ಖರ್ಗೆ ಅವರು ಮಾಹಿತಿ ನೀಡಲಿಲ್ಲ.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಗುರುವಾರ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಗೊಂದಲಗಳಿರುವುದು ನಿಜ. ಆದರೆ, ಅದು ಶೀಘ್ರವೇ ಬಗೆಹರಿಯಲಿದೆ. ನಾನು ಸಿಎಂ ಆಗಬೇಕೆಂದು ಕೆಲವರು ಹೇಳುತ್ತಾರೆ. ನೀವು ಮಾಧ್ಯಮದವರು ಕೂಡ ಆಗಾಗ ಆ ವಿಷಯ ಬಗ್ಗೆ ಮಾತನಾಡುತ್ತಿರುತ್ತೀರಿ. ಆದರೆ ಕಾಂಗ್ರೆಸ್ ಪಕ್ಷದಲ್ಲಿ ಸಿದ್ಧಾಂತ ಮತ್ತು ದಶಕಗಳ ದುಡಿಮೆ ಮುಖ್ಯ ಎಂದು ಹೇಳಿದರು.

ರಾಜ್ಯದಲ್ಲಿ ಪ್ರಸ್ತುತ ಮುಖ್ಯಮಂತ್ರಿಗಳಿದ್ದಾರೆ. ಚೆನ್ನಾಗಿ ಕೆಲಸ ಮಾಡಿಕೊಂಡು ಹೋಗುತ್ತಿದ್ದಾರೆ. ಹೀಗಾಗಿ ಸಿಎಂ ಬದಲಾವಣೆ ಚರ್ಚೆ ಸದ್ಯಕ್ಕೆ ಉದ್ಭವಿಸುವುದಿಲ್ಲ. ಒಂದು ವೇಳೆ ಅಂತಹ ಸಂದರ್ಭ ಬಂದರೆ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ. ಅದಕ್ಕೆ ಸ್ವಲ್ಪ ಸಮಯ ಹಿಡಿಯುತ್ತದೆ. ಆ ಸಮಯ ಬಂದಾಗ ನೋಡೋಣ ಎಂದು ಹೇಳಿದರು.

ಬೌರಿಂಗ್ ಆಸ್ಪತ್ರೆಯ ಕಂಪೌಂಡ್ ಕುಸಿತ ಪ್ರಕರಣ ಬಗ್ಗೆ ಮಾತನಾಡಿದ ಅವರು, ಅದು ಹಳೆಯ ಕಾಂಪೌಂಡ್ ಆಗಿತ್ತು. ಎರಡನೆಯದಾಗಿ, ಅದನ್ನು ಸರಿಯಾಗಿ ನಿರ್ಮಿಸಲಾಗಿರಲಿಲ್ಲ. ಕೆಲವೆಡೆ ಮಣ್ಣಿನ ಗೋಡೆಗಳು, ಇನ್ನೂ ಕೆಲವೆಡೆ ಇಟ್ಟಿಗೆಯ ಗೋಡೆಗಳು ಇರುವುದನ್ನು ನಾನು ಗಮನಿಸಿದ್ದೇನೆ. ಕಾಂಪೌಂಡ್‌ನ ಒಂದು ಭಾಗವನ್ನು ದುರಸ್ತಿಪಡಿಸಬೇಕು ಪಕ್ಕದಲ್ಲಿ ಕೂತು ವ್ಯಾಪಾರ ಮಾಡುತ್ತಿದ್ದವರಿಗೆ ತಕ್ಕ ಪರಿಹಾರ ನೀಡಬೇಕು ಎಂದರು.

ಮುಂದೆ ಯಾರೂ ಕಾಂಪೌಂಡ್‌ಗೆ ತಾಗಿಕೊಂಡೇ ಕೂತು ವ್ಯಾಪಾರ ಮಾಡಲು ಅವಕಾಶ ನೀಡಬಾರದು. ಬೆಂಗಳೂರಿನಲ್ಲಿ ನಡೆದಂತಹ ಘಟನೆ ನಾಳೆ ಇನ್ನೊಂದು ಕಡೆ ನಡೆಯಬಹುದು. ಸರ್ಕಾರ ಜಾಗ್ರತೆ ವಹಿಸಿಗಿಗ್ ಕಾರ್ಮಿಕರು ಅಥವಾ ಸಣ್ಣ ವ್ಯಾಪಾರಿಗಳಿಗೆ ಸಾಧ್ಯವಾದಷ್ಟು ಸಹಾಯ ಮಾಡಬೇಕು ಎಂದರು.



### ಸಂಪೂರ್ಣ ಸಂಪುಟ ಬದಲು?

**ಬೆಳಗಾವಿ:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆಯ ನಡುವೆ ಸಂಪುಟ ವಿಸ್ತರಣೆಯ ಚರ್ಚೆಯೂ ಜೋರಾಗಿದೆ. ಆದರೆ ನಾಯಕತ್ವ ಬದಲಾವಣೆ ಸದ್ಯಕ್ಕಿಲ್ಲ ಎಂದು ಖರ್ಗೆ ಹೇಳಿದ್ದರಿಂದ ಸಚಿವ ಸಂಪುಟ ಪುನರ್ ರಚನೆ ನಡೆಯಬಹುದೆಂಬ ಚರ್ಚೆ ಜೋರಾಗಿದೆ. ಅಲ್ಲದೆ, ಸಂಪೂರ್ಣವಾಗಿ ಸಚಿವ ಸಂಪುಟ ಬದಲಾಗಬಹುದು ಎನ್ನಲಾಗಿದೆ. ಪುಟ 2ಕ್ಕೆ

### ಪಕ್ಷದ ಸಿದ್ಧಾಂತದ ಪ್ರಕಾರ ಸೋನಿಯಾ ಗಾಂಧಿ ನಿರ್ಧಾರ

ಕರ್ನಾಟಕದಲ್ಲಿ ಸಿಎಂ ಬದಲಾವಣೆ ಮಾಡಬೇಕೆಂದು ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಅವರು ನಿರ್ಣಯ ತೆಗೆದುಕೊಂಡರೆ ಸಮಯ ಹಿಡಿಯುತ್ತದೆ.



ನಾನು ಸಿಎಂ ಆದರೆ ಉತ್ತಮ ಎಂದು ಕೆಲವರು ಹೇಳುತ್ತಾರೆ. ನೀವೂ ಹೇಳುತ್ತೀರಿ, ಮೇಲಿನವರೂ ಹೇಳುತ್ತಾರೆ. ಆದರೆ ನಮ್ಮ ಹಣೆಬರಹ ಅನ್ನುವುದಕ್ಕಿಂತ ಪಕ್ಷದ ಸಿದ್ಧಾಂತ ಪ್ರಕಾರ ನಿರ್ಣಯಗಳನ್ನು ತೆಗೆದುಕೊಳ್ಳುತ್ತಾರೆ. ಅದನ್ನು ಹೆಚ್ಚಾಗಿ ಸೋನಿಯಾ ಗಾಂಧಿ ನಿರ್ಧರಿಸುತ್ತಾರೆ ಎಂದು ಮಾರ್ಮಿಕವಾಗಿ ಖರ್ಗೆ ಮಾತನಾಡಿದರು.

ಪಂಚ ರಾಜ್ಯಗಳ ಚುನಾವಣೆ ಹಾಗೂ ಕರ್ನಾಟಕದಲ್ಲಿ ಉಪ ಚುನಾವಣೆ ಮುಗಿದು ಫಲಿತಾಂಶಕ್ಕೆ ದಿನಗಣನೆ ಆರಂಭವಾಗಿರುವ ಸಂದರ್ಭದಲ್ಲಿ ಕಾಂಗ್ರೆಸ್ ನಲ್ಲಿ ಕಳೆದೊಂದು ವಾರದಿಂದ ಚಟುವಟಿಕೆ ಗರಿಗೆದರಿದೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಬಣದ ಸಚಿವರು, ಶಾಸಕರು ಹೇಳಿಕೆಗಳನ್ನು ನೀಡುತ್ತಾ ಹೈಕಮಾಂಡ್ ಏನು ತೀರ್ಮಾನ ಕೈಗೊಳ್ಳುತ್ತದೆ ಎಂದು ಕಾತರದಿಂದ ಕಾಯುತ್ತಿದ್ದಾರೆ. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಖರ್ಗೆಯವರ ಹೇಳಿಕೆ ಮೇ 15ರೊಳಗೆ ಡಿ.ಕೆ ಶಿವಕುಮಾರ್ ಅವರ ಹುಟ್ಟುಹಬ್ಬಕ್ಕೆ ಹೈಕಮಾಂಡ್ ಗಿಫ್ಟ್ ನೀಡುತ್ತದೆ ಎಂದು ಆಸೆಪಟ್ಟವರಿಗೆ ತಣ್ಣೀರೆರಚಿದಂತಾಗಿದೆ.

---

### ಕಾರ್ಮಿಕರ ದಿನದ ಶುಭಾಶಯಗಳು



ವರ್ತಮಾನ ದಿನಪತ್ರಿಕೆಯ ಸಮಸ್ತ ಓದುಗರಿಗೆ, ಜಾಹೀರಾತುದಾರರಿಗೆ **ಕಾರ್ಮಿಕರ ದಿನಾಚರಣೆಯ ಶುಭಾಶಯಗಳು**

**ಬಿಡುವು**

ಕಾರ್ಮಿಕರ ದಿನಾಚರಣೆ ನಿಮಿತ್ತ ಶುಕ್ರವಾರ ಕಚೇರಿಗೆ ರಜೆ ಇರುವುದರಿಂದ ಶನಿವಾರದ ಸಂಚಿಕೆ ಪ್ರಕಟವಾಗುವುದಿಲ್ಲ.

### ಗೋಡೆ ಕುಸಿತ: ಇಇ ಅಮಾನತಿಗೆ ಸಿಎಂ ಆದೇಶ

**ಬೆಂಗಳೂರು:** ಬೌರಿಂಗ್ ಆಸ್ಪತ್ರೆ ಬಳಿ ಗೋಡೆ ಕುಸಿದು 7 ಮಂದಿ ಬಲಿಯಾದ ಪ್ರಕರಣದಲ್ಲಿ ಸಂಬಂಧಪಟ್ಟ ಎಂಜಿನಿಯರ್ ಅನ್ನು ಕೂಡಲೇ ಅಮಾನತು ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ನೀಡಿದ್ದಾರೆ.

ಬೌರಿಂಗ್ ಆಸ್ಪತ್ರೆ ಬಳಿ ಗೋಡೆ ಕುಸಿದು 7 ಜನರು ಸಾವು ಹಾಗೂ ಮಳೆ ಅವಾಂತರ ಸಂಬಂಧ ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸಿಎಂ ಸಭೆ ನಡೆಸಿದರು. ಈ ವೇಳೆ ಸಿಎಂ ಕೆಲವು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.



ಗೋಡೆಗೆ ಹಾನಿ ಆಗಲಿದೆ ಅಂತ ಗೊತ್ತಿದ್ದೂ ಕೂಡ ಕಾಮಗಾರಿ ಮಣ್ಣನ್ನು ಅಲ್ಲಿ ಸುರಿದಿದ್ದು ಯಾಕೆ ಎಂದು ಪ್ರಶ್ನಿಸಿ, ಸಂಬಂಧಪಟ್ಟ ಕಾರ್ಯಪಾಲಕ ಎಂಜಿನಿಯರ್ ಅನ್ನು ಅಮಾನತು ಮಾಡುವಂತೆ ಪುಟ 2ಕ್ಕೆ

### ಇಂಧನ ಬೆಲೆ ಏರಿಕೆ: ಕೇಂದ್ರ ಸರ್ಕಾರ ಉಲ್ಟಾ

**ನವದೆಹಲಿ:** ಹೆಚ್ಚುತ್ತಿರುವ ಇಂಧನ ದರವನ್ನು ಜನರ ಮೇಲೇ ವರ್ಗಾವಣೆ ಮಾಡುವುದು ಅನಿವಾರ್ಯ ಎಂದು ಕೇಂದ್ರ ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ.

ನವದೆಹಲಿಯಲ್ಲಿ ನಡೆದ ಮಾಸಿಕ ಆರ್ಥಿಕ ಪರಿಶೀಲನೆಯಲ್ಲಿ, ಹೆಚ್ಚಿದ ಇಂಧನದ ಬೆಲೆಗಳನ್ನು ಜನರು ಮತ್ತು ಉದ್ಯಮಗಳಿಗೆ ವರ್ಗಾಯಿಸುವುದು ತಪ್ಪಿಸಲಾಗದ ಕ್ರಮ. ಪೂರೈಕೆ ವ್ಯತ್ಯಯದ ಸಂದರ್ಭಗಳಲ್ಲಿ ಬೇಡಿಕೆ ನಿಯಂತ್ರಣ ಅಗತ್ಯವಾಗಿದೆ. ಇಲ್ಲದಿದ್ದರೆ ಇಂಧನಕ್ಕಾಗಿ ಇನ್ನಷ್ಟು ಹೆಚ್ಚಿನ ಬೆಲೆ ತೆರಬೇಕಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ. ಪುಟ 2ಕ್ಕೆ

### ರೂಪಾಯಿ ಮೌಲ್ಯ ಕುಸಿತ

**ನವದೆಹಲಿ:** ಗುರುವಾರದ ಆರಂಭಿಕ ವಹಿವಾಟಿನಲ್ಲಿ ರೂಪಾಯಿ ಅಮೆರಿಕನ್ ಡಾಲರ್ ಎದುರು 32 ಪೈಸೆ ಕುಸಿದು ಇತಿಹಾಸದಲ್ಲೇ ಕನಿಷ್ಠ ಮಟ್ಟವಾದ 95 ರೂಪಾಯಿ 20 ಪೈಸೆಗೆ ತಲುಪಿತು.



ಬ್ಯಾರೆಲ್‌ಗೆ ಸುಮಾರು 122 ಡಾಲರ್ ಮಟ್ಟದಲ್ಲಿ ಇರುವ ಬ್ರೆಂಟ್ ಕಚ್ಚಾ ತೈಲದ ಹೆಚ್ಚಿನ ಬೆಲೆ ಮತ್ತು ಬಲವಾದ ಅಮೆರಿಕನ್ ಕರೆನ್ಸಿಯ ಪರಿಣಾಮ ರೂಪಾಯಿಗೆ ಒತ್ತಡ ತಂದಿದೆ.

ಅಂತರ ಬ್ಯಾಂಕ್ ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ, ರೂಪಾಯಿ 95.01 ಮಟ್ಟದಲ್ಲಿ ಆರಂಭವಾಗಿ, ನಂತರ ಕುಸಿದು 95.20 ಮಟ್ಟವನ್ನು ತಲುಪಿತು. ಇದು ಹಿಂದಿನ ಮುಚ್ಚಿದ ಮಟ್ಟಕ್ಕಿಂತ 32 ಪೈಸೆ ಇಳಿಕೆಯಾಗಿತ್ತು. ಬುಧವಾರ ರೂಪಾಯಿ 20 ಪೈಸೆ ಕುಸಿದು 94.88 ಮಟ್ಟದಲ್ಲಿ ಮುಕ್ತಾಯಗೊಂಡಿತ್ತು. ಪುಟ 2ಕ್ಕೆ

---

## ಮೇನಲ್ಲಿ ಮತ್ತಷ್ಟು 'ಸೂರ್ಯ ಶಿಕಾರಿ'


### ಇನ್ನೂ 3–4 ಡಿಗ್ರಿ ಸೆಲ್ಸಿಯಸ್ ಬಿಸಿಲು ಹೆಚ್ಚಳ ಸಾಧ್ಯತೆ

**ಬೆಂಗಳೂರು:** ಏಪ್ರಿಲ್‌ನ ಬಿಸಿಲಿಗೆ ಕರುನಾಡು ಕಾದ ಕಾವಲಿಯಂತಾಗಿದೆ. ಆದರೆ ಬಿಸಿಲಿನ ಪ್ರತಾಪ ಅಸಲಿಗೆ ಇನ್ನೂ ಶುರುವಾಗಿಲ್ಲ. ಮೇ ತಿಂಗಳಲ್ಲಿ ಶುರುವಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಏಪ್ರಿಲ್ ತಿಂಗಳಲ್ಲೇ ನೆತ್ತಿ ಸುಡುವ ಸೂರ್ಯನ ಪ್ರತಾಪಕ್ಕೆ ಕರುನಾಡು ಹೈರಾಣಾಗಿದೆ. ಇದರ ಮಧ್ಯೆ ಮೇನಲ್ಲಿ ಸೂರ್ಯ ಇನ್ನೂ ಉಗ್ರ ಪ್ರತಾಪಿಯಾಗಲಿದ್ದಾನೆ. ಮೇನಲ್ಲಿ ಅಸಲಿ ಬಿಸಿಲಾಘಾತ ಶುರುವಾಗುತ್ತದೆ ಎಂದು ಇಲಾಖೆ ತಿಳಿಸಿದೆ.

ಇನ್ನು ದೇಶದಲ್ಲಿ ಹಿಂದೆಂದಿಗಿಂತಲೂ ಬಿಸಿಲ ತಾಪಮಾನ ಜಾಸ್ತಿ ಇದ್ದು, ಮೇ ಅಂತ್ಯದವರೆಗೂ ಮುಂದುವರಿಯುವ ಸಾಧ್ಯತೆ ಇದೆ. ಮುಂದಿನ ತಿಂಗಳು ಸ್ವಲ್ಪ ಮಳೆಯಾದರೆ, ತಾಪಮಾನ ಕಡಿಮೆ ಆಗಬಹುದು. ಇಲ್ಲದಿದ್ದರೆ ಇದೇ ಪರಿಸ್ಥಿತಿ ಮುಂದುವರೆಯಲಿದೆ ಎಂದು ಎಚ್ಚರಿಕೆ ಕೊಟ್ಟಿದೆ.

ಮೇ ತಿಂಗಳಲ್ಲಿ 3–4 ಡಿಗ್ರಿ ಸೆಲ್ಸಿಯಸ್ ಬಿಸಿಲು ಹೆಚ್ಚಳವಾಗಲಿದೆ. ಮೇ ಮೊದಲ ವಾರದಲ್ಲಿಯೇ ಬೆಂಗಳೂರು ಸೇರಿದಂತೆ ಕರ್ನಾಟಕ ಇನ್ನೂ ಸುಡಲಿದೆ. ಬೇಸಿಗೆಯಲ್ಲಿ ಆಗೊಮ್ಮೆ–ಈಗೊಮ್ಮೆ ಬರುತ್ತಿದ್ದ ಮಳೆ ಈ ವರ್ಷ ಕಾಣೆಯಾಗಿದೆ.



ಜಗತ್ತಿನ ಅತ್ಯಂತ ಹೆಚ್ಚಿನ ತಾಪಮಾನವಿರುವ 100 ನಗರಗಳಲ್ಲಿ ದೇಶದ 95 ನಗರಗಳಿವೆ ಎಂದು ರಾಷ್ಟ್ರೀಯ ಹವಾಮಾನ ಮುನ್ಸೂಚನಾ ಕೇಂದ್ರ ಮಾಹಿತಿ ನೀಡಿದೆ. ದೇಶದ ಬಹುಭಾಗದಲ್ಲಿನ ತಾಪಮಾನ ಸಾಮಾನ್ಯಕ್ಕಿಂತ 5 ಡಿಗ್ರಿ ಹೆಚ್ಚು ಹಾಗೂ ಅದಕ್ಕಿಂತ ಜಾಸ್ತಿ ಇದೆ ಎಂದು ಇಲಾಖೆ ಹೇಳಿದೆ.

ಬೆಂಗಳೂರು ಅಂತಾರಾಷ್ಟ್ರೀಯ ಏರ್‌ಪೋರ್ಟ್‌ನಲ್ಲಿ 38.2 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ಇದು ಏಪ್ರಿಲ್‌ನಲ್ಲಿ ಮೂರನೇ ಬಾರಿಗೆ

## 6 ಅಪರಾಧಿಗಳಿಗೆ ಗಲ್ಲು ಶಿಕ್ಷೆ

### ಬಿಜೆಪಿ ಮುಖಂಡ ವೆಂಕಟೇಶ ಕೊಲೆ ಪ್ರಕರಣದಲ್ಲಿ ತೀರ್ಪು

**ಕೊಪ್ಪಳ:** ಬಿಜೆಪಿ ಯುವ ಮುಖಂಡ ವೆಂಕಟೇಶ ಕುರುಬರ್ ಅಲಿಯಾಸ್ ಜೆ.ಎನ್ ವೆಂಕಿ ಕೊಲೆ ಪ್ರಕರಣದಲ್ಲಿ ಆರು ಜನ ಅಪರಾಧಿಗಳಿಗೆ ಗಲ್ಲು ಶಿಕ್ಷೆ ವಿಧಿಸಿ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮಹತ್ವದ ತೀರ್ಪು ನೀಡಿದೆ.

ರವಿ, ಮೈಲಾರಿ, ಧನರಾಜ್, ಭೀಮಾ, ಸಲೀಂ ಮತ್ತು ಗಂಗಾಧರ ಗೌಳಿ ಶಿಕ್ಷೆಗೊಳಗಾದ ಅಪರಾಧಿಗಳು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್ ಅವರು ತೀರ್ಪು ಪ್ರಕಟಿಸಿದರು.

ಮೊದಲಿಗೆ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಟಿವಿಯ ಫೂಟೇಜ್ ಗಳನ್ನು ಪರಿಶೀಲಿಸಿದ ನ್ಯಾಯಾಧೀಶರು, ಅಪರಾಧಿಗಳು ಈ ಹಿಂದೆ ವಿವಿಧ ಪ್ರಕರಣಗಳಲ್ಲಿ ಭಾಗಿಯಾದ ಹಿನ್ನೆಲೆ ಬಗ್ಗೆಯೂ ಪರಿಶೀಲನೆ ನಡೆಸಿದರು. ಗಂಗಾವತಿ ರೈಲ್ವೆ ನಿಲ್ದಾಣದ ಬಳಿ ನಡೆದಿದ್ದ ಮಾರುತಿ ಎಂಬ ಯುವಕನ ಕೊಲೆ ಪ್ರಕರಣದಲ್ಲಿ ವೆಂಕಟೇಶ ಪ್ರತ್ಯಕ್ಷ ಸಾಕ್ಷಿಯಾಗಿದ್ದರು. ಮಾರುತಿ ಚಿಕಿತ್ಸೆಗೆ ಕೊನೆಯವರೆಗೂ ಬೆಂಬಲವಾಗಿ ನಿಂತಿದ್ದ ಎಂಬ ಕಾರಣಕ್ಕೆ ವೆಂಕಟೇಶನನ್ನು ಕೊಲೆ ಮಾಡಲಾಗಿತ್ತು. ನಾಗರಿಕ ಸಮಾಜದ ಇಂತಹ ಕೃತ್ಯಗಳನ್ನು ಒಪ್ಪುವುದಿಲ್ಲ. ಅಪರಾಧ ಕೃತ್ಯಗಳ ಹಿನ್ನೆಲೆ



ಪರಿಗಣಿಸಿ ಗಲ್ಲು ಶಿಕ್ಷೆ ವಿಧಿಸಲಾಗಿದೆ ಎಂದು ನ್ಯಾಯಾಧೀಶರು ತೀರ್ಪು ಪ್ರಕಟಿಸಿದರು.

ವೆಂಕಟೇಶ್ ಅವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದ ಪ್ರಕರಣ ಸಂಬಂಧ ಆರು ಜನ ಆರೋಪಿಗಳನ್ನು ದೋಷಿ ಎಂದು ಘೋಷಿಸಿದ್ದ ಕೋರ್ಟ್ ಶಿಕ್ಷೆ ಪ್ರಮಾಣ ಕಾಯ್ದಿರಿಸಿತ್ತು. ಇಂದು ಆರು ಜನರಿಗೆ ಮರಣದಂಡನೆ ವಿಧಿಸಿ ತೀರ್ಪು ನೀಡಿದ್ದಾರೆ.

ಅಕ್ಟೋಬರ್ 7 2025ರ ತಡರಾತ್ರಿ ಊಟ ಮುಗಿಸಿಕೊಂಡು ಸ್ನೇಹಿತರೊಂದಿಗೆ ದ್ವಿಚಕ್ರ

## 'ಜನಿವಾರ್' ಸಂತ್ರಸ್ತರಿಗೆ ಸಿಇಟಿ ಮರು ಪರೀಕ್ಷೆ

**ಬೆಂಗಳೂರು:** ಸಿಇಟಿ ಪರೀಕ್ಷೆ ವೇಳೆ ಜನಿವಾರ ವಿವಾದದಿಂದ ಸಮಸ್ಯೆಗೆ ಒಳಗಾದ ಪರೀಕ್ಷಾರ್ಥಿಗಳಿಗೆ ಮರು ಪರೀಕ್ಷೆ ನಡೆಸುವುದಾಗಿ ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ತಿಳಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾಲ್ವರು ಪರೀಕ್ಷಾರ್ಥಿಗಳಿಗೆ ಪರೀಕ್ಷಾ ಕೇಂದ್ರದಲ್ಲಿ ಸಮಸ್ಯೆ ಆಗಿದೆ. ಆ ವಿದ್ಯಾರ್ಥಿಗಳಿಗೆ ಮಾತ್ರ ಮರುಪರೀಕ್ಷೆ ನಡೆಸಲು ನಿರ್ಧಾರ ಮಾಡಲಾಗಿದೆ ಎಂದರು.

ಜನಿವಾರ ಹಾಗೂ ಹಿಜಬ್‌ಗೆ ಸಂಬಂಧಿಸಿದಂತೆ ಬೆಂಗಳೂರು ಮತ್ತು ಚಿಕ್ಕಬಳ್ಳಾಪುರ ಎರಡು ಪರೀಕ್ಷಾ ಕೇಂದ್ರದಲ್ಲಿ ಗೊಂದಲ ಆಗಿತ್ತು. ಪರೀಕ್ಷಾರ್ಥಿಗಳು ಮರು ಪರೀಕ್ಷೆಗೆ ಮನವಿ ಮಾಡಿದ್ದರು. ಹೀಗಾಗಿ ತೊಂದರೆಗೆ ಒಳಗಾದ ಪರೀಕ್ಷಾರ್ಥಿಗಳಿಗೆ ಮಾತ್ರ ಅನ್ವಯ ಆಗುವಂತೆ ಮರುಪರೀಕ್ಷೆ ನಡೆಸುತ್ತೇವೆ ಎಂದು ಸಚಿವರು ತಿಳಿಸಿದರು.

ಪರೀಕ್ಷೆ ಗೊಂದಲಕ್ಕೆ ಒಳಗಾದ ಪರೀಕ್ಷಾರ್ಥಿಗಳಿಗೆ ಪುಟ 2ಕ್ಕೆ

## ಕೊಡಲಿಯಿಂದ ಕೊಚ್ಚಿ ಪತ್ನಿ ಕೊಲೆ

**ಮೈಸೂರು:** ತನ್ನ ಪತ್ನಿಯನ್ನು ಕೊಡಲಿಯಿಂದ ಕೊಚ್ಚಿ ಕೊಲೆ ಕೊಲೆ ಮಾಡಿರುವ ಪತಿ ಬಳಿಕ ಪೊಲೀಸರಿಗೆ ಶರಣಾದ ಭೀಕರ ಘಟನೆ ನಗರದ ಹಳೆ ಕೆಸರೆಯಲ್ಲಿ ನಡೆದಿದೆ.



ಆರೋಪಿ ಮಹೇಶ್ ತನ್ನ ಪತ್ನಿ ಪುಷ್ಪ (24) ಪ್ರತಿ ದಿನ ಕೆಲಸ ಮುಗಿಸಿ ಮನೆಗೆ ತಡವಾಗಿ ಬರುತ್ತಿದ್ದಾಳೆ ಎಂಬ ಕಾರಣಕ್ಕೆ ಆಕೆಯನ್ನು ಕೊಡಲಿಯಿಂದ ಹೊಡೆದು, ಬಳಿಕ ದಿಂಬಿನಿಂದ ಉಸಿರುಗಟ್ಟಿಸಿ ಕ್ರೂರವಾಗಿ ಹತ್ಯೆ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೈಸೂರಿನ ದೇವರಾಜ ಅರಸು ರಸ್ತೆಯ ಖಾಸಗಿ ಬಟ್ಟೆ ಅಂಗಡಿಯೊಂದರಲ್ಲಿ ಪುಷ್ಪ ಕೆಲಸ ಮಾಡುತ್ತಿದ್ದರು. ಪ್ರತಿದಿನ ರಾತ್ರಿ ಮನೆಗೆ ತಡವಾಗಿ ಬರುತ್ತಿದ್ದರು. ಈ ವಿಚಾರಕ್ಕೆ ಪುಷ್ಪ ಮತ್ತು ಮಹೇಶ್ ನಡುವೆ ಪ್ರತಿದಿನ ಗಲಾಟೆ ನಡೆಯುತ್ತಿತ್ತು. ಹೆಂಡತಿ ಮನೆಗೆ ತಡವಾಗಿ ಬರುವ ವಿಚಾರಕ್ಕೆ ಮಹೇಶ್ ಆಕೆಯ ಮೇಲೆ ಅನುಮಾನ ಪಡುತ್ತಿದ್ದ ಎನ್ನಲಾಗಿದೆ.

ಎಂದಿನಂತೆ ಪುಷ್ಪ ಕೆಲಸ ಮುಗಿಸಿ ಮನೆಗೆ ತಡವಾಗಿ ಬಂದಾಗ ಇದೇ ವಿಚಾರವಾಗಿ ಇಬ್ಬರ ನಡುವೆ ಜಗಳ ನಡೆದಿದೆ. ಜಗಳ ವಿಕೋಪಕ್ಕೆ ತಿರುಗಿ ಆಕ್ರೋಶಗೊಂಡ ಮಹೇಶ್ ಮನೆಯಲ್ಲಿದ್ದ ಕೊಡಲಿಯಿಂದ ಪುಷ್ಪ ತಲೆಗೆ ಜೋರಾಗಿ ಹೊಡೆದಿದ್ದಾನೆ. ಪುಷ್ಪ ಕೆಳಗೆ ಪುಟ 2ಕ್ಕೆ

## ಪ್ರೀವೆಡ್ಡಿಂಗ್ ಫೋಟೋ ಶೂಟ್: ಕಾರು ಅಪಘಾತದಲ್ಲಿ ವರ ಸಾವು

**ಹಾಸನ:** ಪ್ರೀವೆಡ್ಡಿಂಗ್ ಫೋಟೋ ಶೂಟ್‌ಗಾಗಿ ವಧುವನ್ನು ಕರೆತರಲು ಹೋಗುತ್ತಿದ್ದ ವೇಳೆ ಭೀಕರ ಅಪಘಾತ ಸಂಭವಿಸಿ ಸ್ಥಳದಲ್ಲೇ ವರ ಸಾವನ್ನಪ್ಪಿರುವ ದಾರುಣ ಘಟನೆ ಹಾಸನದಲ್ಲಿ ನಡೆದಿದೆ.



ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಮೂಗಲಿ ಗ್ರಾಮದಲ್ಲಿ ಘಟನೆ ನಡೆದಿದೆ. ಬೇಲೂರು ತಾಲ್ಲೂಕಿನ ಲಕ್ಕುಂದ ಗ್ರಾಮದ ದರ್ಬಾರ್ ಪೇಟೆ ನಿವಾಸಿ ಮನು ಎಲ್.ಎನ್. (29) ಮೃತಪಟ್ಟ ವರ.

ಆಲೂರು ತಾಲೂಕು ತೊಗರನಹಳ್ಳಿ ಗ್ರಾಮದ ಕಾಂಚನ ಜೊತೆ ಮನು ಅವರ ಮದುವೆ ಮೇ 10ರಂದು ಆಲೂರು ಬೈರಾಪುರ ರಸ್ತೆಯಲ್ಲಿರುವ ಶ್ರೀ ವೀರಶೈವ ಕಲ್ಯಾಣ ಮಂಟಪದಲ್ಲಿ ನಿಗದಿಯಾಗಿತ್ತು. ಮದುವೆ ಸಂಭ್ರಮಕ್ಕೆ ಭರದಿಂದ ಸಿದ್ಧತೆಗಳು ನಡೆಯುತ್ತಿದ್ದವು. ಆದರೆ ಗುರುವಾರ ಬೆಳಿಗ್ಗೆ ಮನು ಪ್ರೀವೆಡ್ಡಿಂಗ್ ಶೂಟಿಂಗ್‌ಗಾಗಿ ವಧುವನ್ನು ಪುಟ 2ಕ್ಕೆ

---

# ಅರಣ್ಯ ಹಂಗಾಮಿ ನೌಕರರ ಮುಷ್ಕರ

## ಹೊರಗುತ್ತಿಗೆ ರದ್ದುಪಡಿಸಿ ಇಲಾಖೆಯಿಂದಲೇ ವೇತನಕ್ಕೆ ಆಗ್ರಹ

**ಗುಂಡ್ಲುಪೇಟೆ:** ಹೊರಗುತ್ತಿಗೆ ರದ್ದುಪಡಿಸಿ ಅರಣ್ಯ ಇಲಾಖೆಯಿಂದಲೇ ವೇತನ ನೀಡುವುದು ಸೇರಿದಂತೆ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ವನ್ಯಜೀವಿ ವಿಭಾಗದ ಹಂಗಾಮಿ ನೌಕರರು ಗುರುವಾರ ಬಂಡೀಪುರದಲ್ಲಿ ಮುಷ್ಕರ ಆರಂಭಿಸಿದ್ದಾರೆ.

ರಾಜ್ಯದಲ್ಲಿ ವನ್ಯಜೀವಿ, ಪ್ರಾದೇಶಿಕ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿಸುತ್ತಿರುವ 4,000ಕ್ಕೂ ಅಧಿಕ ಹಂಗಾಮಿ ನೌಕರರು ಕಳೆದ ನವೆಂಬರ್‌ನಲ್ಲಿ ಪ್ರತಿಭಟನೆ ನಡೆಸಿದ್ದರು. ಆಗ ನೌಕರರ ಬೇಡಿಕೆಗಳನ್ನು ಈಡೇರಿಸುವ ಭರವಸೆಯನ್ನು ಸರ್ಕಾರ ನೀಡಿತ್ತು. ಆದರೆ, ಇದುವರೆಗೂ ಸರ್ಕಾರದಿಂದ ಸ್ಪಂದನೆ ಸಿಗದ ಕಾರಣ ಮುಷ್ಕರ ಬಂಡೀಪುರದಲ್ಲಿ ಗುರುವಾರ ಮುಷ್ಕರ ಆರಂಭಿಸಿದರು.

ಅರಣ್ಯ ಸಚಿವರು ಬೇಡಿಕೆ ಈಡೇರಿಸಲು ಸ್ಪಂದಿಸಿದರೂ ಹಿರಿಯ ಅಧಿಕಾರಿಗಳು ಪೂರಕವಾಗಿಲ್ಲ. ಈ ಹಿಂದೆ ಎರಡು ಬಾರಿ ಪ್ರತಿಭಟನೆ ನಡೆಸಿದರೂ ಬರೀ ಭರವಸೆ ಬಿಟ್ಟರೆ ಏನೂ ಬದಲಾವಣೆ ಆಗಿಲ್ಲ. ಸರ್ಕಾರದಿಂದ ಲಿಖಿತ ಭರವಸೆ ಸಿಗುವವರೆಗೂ ಈ ಬಾರಿ ಮುಷ್ಕರ ನಿಲ್ಲಿಸಲ್ಲ ಎಂದು ರಾಜ್ಯ ಅರಣ್ಯ ಇಲಾಖೆ ವನ್ಯಜೀವಿ ಘಟಕಗಳ ದಿನಗೂಲಿ, ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಎ.ಎಂ.ನಾಗರಾಜು ತಿಳಿಸಿದರು.




ಮೊದಲು ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಹಂಗಾಮಿ ನೌಕರರಿಗೆ ವೇತನ ಹಾಗೂ ಸೌಲಭ್ಯ ನೀಡಲಾಗುತ್ತಿತ್ತು. 2017ರಲ್ಲಿ ಅದನ್ನು ಬದಲಾಯಿಸಿ ಟೆಂಡರ್ ಮೂಲಕ ಏಜೆನ್ಸಿಗಳಿಂದ ವೇತನ ನೀಡಲಾಗುತ್ತಿದೆ. ಇದರಿಂದ ಸರಿಯಾಗಿ ವೇತನವೂ ಸಿಗುತ್ತಿಲ್ಲ. ಸೌಲಭ್ಯಗಳನ್ನು ಪಡೆಯುವುದು ಕಷ್ಟವಾಗಿದೆ. ಹೀಗಾಗಿ, ಇದನ್ನು ಬದಲಾಯಿಸಿ ಎಂಬುದು ಪ್ರಮುಖ ಬೇಡಿಕೆಯಾಗಿದೆ.


ಹಿಂದೆ ಪ್ರತಿಭಟನೆ ನಡೆಸಿದಾಗ ಅರಣ್ಯ ಪುಟ 2ಕ್ಕೆ

## ಅಧಿಕಾರಿಗಳ ವಿರುದ್ಧ ಸುಮೊಟೋ ಕೇಸ್

### 7 ಜನರ ಸಾವು ಪ್ರಕರಣ: ನ್ಯಾ.ಬಿ.ಎಸ್.ಪಾಟೀಲ್ ಘೋಷಣೆ

**ಬೆಂಗಳೂರು:** ನಗರದಲ್ಲಿ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಏಳು ಅಮಾಯಕರು ಬಲಿಯಾದ ಪ್ರಕರಣವನ್ನು ಲೋಕಾಯುಕ್ತ ನ್ಯಾ.ಬಿ.ಎಸ್ ಪಾಟೀಲ್ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದಾರೆ.

ಘಟನಾ ಸ್ಥಳಕ್ಕೆ ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ನ್ಯಾ.ಬಿ ಎಸ್ ಪಾಟೀಲ್, ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯದ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಘಟನೆಗೆ ಸಂಬಂಧಿಸಿದಂತೆ ಸ್ವಯಂಪ್ರೇರಿತ ಪ್ರಕರಣ ದಾಖಲಿಸುವುದಾಗಿ ಘೋಷಿಸಿದ್ದಾರೆ.



ಈ ಪ್ರಕರಣದಲ್ಲಿ ಉನ್ನತ ಮಟ್ಟದ ಅಧಿಕಾರಿಗಳನ್ನೂ ಹೊಣೆಗಾರರನ್ನಾಗಿ ಮಾಡಬೇಕು. ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸೇರಿದಂತೆ ಪ್ರಮುಖ ಅಧಿಕಾರಿಗಳನ್ನು ಆರೋಪಿಗಳನ್ನಾಗಿ ಮಾಡಲಾಗುವುದು ಎಂದು ತಿಳಿಸಿದರು.

ಕಾಂಪೌಂಡ್‌ನ ಅಡಿಪಾಯ ಅತ್ಯಂತ ದುರ್ಬಲವಾಗಿದ್ದೇ ದುರಂತಕ್ಕೆ ಪ್ರಮುಖ ಕಾರಣ. ಪ್ರತಿ ವರ್ಷ ಮಳೆ ಬರುತ್ತದೆ ಎಂಬುದು ಗೊತ್ತಿದ್ದರೂ ಇಂತಹ ದುರ್ಬಲ ಗೋಡೆಗಳ ಪಕ್ಕದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಅವಕಾಶ ನೀಡಿರುವುದು ಅಧಿಕಾರಿಗಳ ಬೇಜವಾಬ್ದಾರಿ ತೋರಿಸುತ್ತದೆ. ಕೇವಲ ಒಂದು ಗಂಟೆ ಮಳೆ ಬಂದಿದ್ದಕ್ಕೆ ಗೋಡೆ ಕುಸಿಯುತ್ತಿದೆ ಎಂದರೆ ಕಾಮಗಾರಿ ಗುಣಮಟ್ಟ ಎಷ್ಟಿರಬಹುದು ಯೋಚಿಸಿ ಎಂದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವೈದ್ಯಕೀಯ ಶಿಕ್ಷಣ ಇಲಾಖೆ ಆಯುಕ್ತ, ಅಪರ ಕಾರ್ಯದರ್ಶಿ, 5 ಪಾಲಿಕೆಗಳ ವಲಯ ಆಯುಕ್ತರ ವಿರುದ್ಧ ಕೂಡ ಕೇಸು ದಾಖಲಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

ಮೊದಲ ಪುಟದಿಂದ

## ಹಂಗಾಮಿ ನೌಕರರ ಮುಷ್ಕರ

ಸಚಿವ ಈಶ್ವರ ಖಂಡ್ರೆ, ಮುಖ್ಯಮಂತ್ರಿ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ, ಹಿರಿಯ ಅಧಿಕಾರಿಗಳು ಮನವಿಗೆ ಸ್ಪಂದಿಸುವುದಾಗಿ ಹೇಳಿದ್ದರು. ಸಮಿತಿ ರಚಿಸಿದರೂ ಸೂಕ್ತ ತೀರ್ಮಾನ ಆಗುತ್ತಿಲ್ಲ. ಸರ್ಕಾರದ ಹಂತದಲ್ಲಿಯೇ ಇದು ಆಗಬೇಕು ಎಂದು ಕೈ ಚೆಲ್ಲುತ್ತಿದ್ದಾರೆ. ಏಪ್ರಿಲ್ 1ರಿಂದ ಮುಂದಿನ ಒಂದು ವರ್ಷದ ಗುತ್ತಿಗೆ ಕರಾರಿಗೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಇದು ಜಾರಿಯಾದರೆ ನಮ್ಮ ಪ್ರಮುಖ ಸಮಸ್ಯೆ ಬಗೆಹರಿಯವುದಿಲ್ಲ. ಈಗಲೇ ಸೂಕ್ತ ತೀರ್ಮಾನ ಆಗಬೇಕು ಎಂದು ಸಂಘದ ಉಪಾಧ್ಯಕ್ಷ ಎಸ್.ಎಸ್. ಹರೀಶ್ ಹೇಳಿದರು.

## ಕೊಡಲಿಯಿಂದ ಕೊಚ್ಚಿ ಕೊಲೆ

ಬಿದ್ದ ನಂತರ, ದಿಂಬಿನಿಂದ ಆಕೆಯ ಮುಖವನ್ನು ಒತ್ತಿ ಹಿಡಿದು ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ. ಪತ್ನಿಯನ್ನು ಕೊಂದ ನಂತರ ಮಹೇಶ್ ತಾನೇ ನೇರವಾಗಿ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾನೆ. ವಿಷಯ ತಿಳಿಯುತ್ತಿದ್ದಂತೆಯೇ ನರಸಿಂಹರಾಜ ಠಾಣೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

## ಕೇಂದ್ರ ಸರ್ಕಾರ ಉಲ್ಟಾ

ಆದರೆ, ಚುನಾವಣೆಗೂ ಮುನ್ನ ಮೂರು ದಿನಗಳ ಹಿಂದೆ ಹೇಳಿಕೆ ನೀಡಿದ್ದ ಕೇಂದ್ರ ಸರ್ಕಾರ ಚುನಾವಣೆ ಮುಗಿದ ನಂತರ ಇಂಧನ, ಗ್ಯಾಸ್ ದರ ಏರಿಕೆ ಮಾಡಲಾಗುತ್ತಿದೆ ಎಂಬ ವದಂತಿ ಸುಳ್ಳು. ಸದ್ಯಕ್ಕೆ ದರ ಏರಿಕೆ ಮಾಡಲ್ಲ ಎಂದು ಭರವಸೆ ನೀಡಿತ್ತು. ಆದರೆ, ನಿನ್ನೆ ಚುನಾವಣೆ ಮುಗಿದ ತಕ್ಷಣವೇ ಕೇಂದ್ರ ಉಲ್ಟಾ ಹೊಡಿದಿದೆ.

## ಕಾರು ಅಪಘಾತದಲ್ಲಿ ವರ ಸಾವು

ಕರೆತರಲು ಕಾರಿನಲ್ಲಿ ಹೊರಟಿದ್ದರು. ಮೂಗಲಿ ಗ್ರಾಮದ ಬಳಿ ನಿಯಂತ್ರಣ ತಪ್ಪಿದ ಕಾರು ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದೆ. ಮನು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

## ಇಇ ಅಮಾನತಿಗೆ ಸಿಎಂ ಆದೇಶ

ಸೂಚಿಸಿದ್ದಾರೆ. 1ಇದೇ ವೇಳೆ ಮಣ್ಣು ಸುರಿದಿದ್ದರೂ ಕೂಡ ನೀವು ಯಾಕೆ ನೋಡಿಕೊಳ್ಳಲಿಲ್ಲ ಎಂದು ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಈ ಸಂಬಂಧ ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರಿಗೆ ನೋಟಿಸ್ ನೀಡಲು ಸಿಎಂ ಆದೇಶಿಸಿದ್ದಾರೆ. ಬೆಂಗಳೂರಿನಲ್ಲಿ ಸುರಿದ ಮಳೆಯಲ್ಲಿ ಸಾಕಷ್ಟು ಹಾನಿಯಾಗಿದ್ದು, 250ಕ್ಕೂ ಹೆಚ್ಚು ಮರಗಳು ಬಿದ್ದಿವೆ. ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು.

## ಮತ್ತಷ್ಟು 'ಸೂರ್ಯ ಶಿಕಾರಿ'

ದಾಖಲೆಯಾಗಿರುವ ಬಿಸಿಲಾಗಿದೆ. 2014ರಲ್ಲಿ 38.3 ಡಿಗ್ರಿ ಸೆಲ್ಸಿಯಸ್ ಹಾಗೂ 2024ರಲ್ಲಿ 38.4 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು. ಇನ್ನು, ಉತ್ತರ ಕರ್ನಾಟಕದಲ್ಲಿ ಸೂರ್ಯಶಿಕಾರಿ ಹೇಳತೀರದಾಗಿದೆ.


## ಚೆಸ್ಕಾಂ ಎದುರು ಪ್ರತಿಭಟನೆ

ಮೈಸೂರು: ಹಗಲಿನ ಸಮಯದಲ್ಲಿ ಅಡಚಣೆರಹಿತವಾಗಿ 7 ಗಂಟೆ ವಿದ್ಯುತ್ ನೀಡುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಮೈಸೂರು ತಾಲೂಕು ಘಟಕದ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.

ವಿಜಯನಗರ 2ನೇ ಹಂತದಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ಪ್ರಧಾನ ಕಚೇರಿ ಎದುರು ಪ್ರತಿಭಟನೆ ನಡೆಸಿದ ರೈತ ಸಂಘದ ಪದಾಧಿಕಾರಿಗಳು, ವಿದ್ಯುತ್ ಅಭಾವದಿಂದ ರೈತರಿಗೆ ಸಾಕಷ್ಟು ತೊಂದರೆ ಆಗುತ್ತಿದ್ದು, ಕೃಷಿ ಪಂಪ್ ಸೆಟ್‌ಗಳಿಗೆ ಸಮರ್ಪಕವಾಗಿ ವಿದ್ಯುತ್ ನೀಡದೆ ರೈತರು ಕಂಗಾಲಾಗಿದ್ದಾರೆ. ಇದರಿಂದಾಗಿ ಬಹುತೇಕ ಬೆಳೆಗಳು ಹಾಳಾಗುತ್ತಿವೆ. ಗ್ರಾಮೀಣ ಭಾಗದ ಅನೇಕ ರೈತರು ಕೃಷಿಯನ್ನೇ ಅವಲಂಬಿಸಿದ್ದು, ಬೆಳೆ ನಾಶದಿಂದಾಗಿ ತೊಂದರೆಗೆ ಸಿಲುಕುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾತ್ರಿ ವೇಳೆಯಲ್ಲಿ ವಿದ್ಯುತ್ ಪೂರೈಕೆ ಮಾಡಿದರೆ ಕಾಡು ಪ್ರಾಣಿಗಳ ಹಾವಳಿಯಿಂದ ಜಮೀನುಗಳಿಗೆ ಹೋಗಲು ಸಾಧ್ಯವಿಲ್ಲ. ಆದ್ದರಿಂದ ಹಗಲಿನ ವೇಳೆಯಲ್ಲಿ ಸರ್ಕಾರದ ಆದೇಶದಿಂದ 7 ಗಂಟೆಗಳು ಅಡಚಣೆರಹಿತವಾಗಿ ವಿದ್ಯುತ್ ಪೂರೈಕೆ ಮಾಡಬೇಕಿದೆ. ಅಲ್ಲದೆ ಕೆಟ್ಟು ಹೋಗಿರುವ ಟ್ರಾನ್ಸ್‌ಫಾರ್ಮರ್‌ಗಳನ್ನು 24 ಗಂಟೆಯೊಳಗೆ ದುರಸ್ಥಿ ಮಾಡಬೇಕು. ಕೃಷಿ ಪಂಪ್ ಸೆಟ್‌ಗಳಿಗೆ ಸೋಲಾರ್ ಅಳವಡಿಸಲು ಆದ್ಯತೆ ನೀಡುವ ಮೂಲಕ ಈಗಾಗಲೇ ನೋಂದಾಯಿಸಿರುವ ರೈತರಿಗೆ ಹಣ ಪಾವತಿಸಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದರು.

ಅಲ್ಲದೇ ವಿದ್ಯುತ್ ಖಾಸಗೀಕರಣಕ್ಕೆ ಅವಕಾಶ ನೀಡದೆ ಸರ್ಕಾರದ ಅಧೀನದಲ್ಲೇ ಇರಬೇಕು. ಜೋತು ಬಿದ್ದಿರುವ ವಿದ್ಯುತ್ ಕಂಬಗಳು, ವೈಯರ್‌ಗಳನ್ನು ಕೂಡಲೇ ದುರಸ್ಥಿ ಮಾಡಬೇಕು. ಈ ಹಿಂದಿನ ರೀತಿಯಲ್ಲೇ ಕೃಷಿ ಪಂಪ್‌ಸೆಟ್‌ಗಳ ಅಕ್ರಮ-ಸಕ್ರಮಗೊಳಿಸುವ ಮೂಲಕ ಹಿಂದಿನ ಠೇವಣಿ ದರವನ್ನೇ ಮುಂದುವರಿಸಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಇದೇ ವೇಳೆ ಸ್ಥಳಕ್ಕಾಗಮಿಸಿದ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕಿ ಎಂ.ಎಸ್.ಅರ್ಚನ ಪ್ರತಿಭಟನಾಕಾರರ ಸಮಸ್ಯೆಗಳನ್ನು ಆಲಿಸಿ, ಬೇಡಿಕೆಗಳ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸೆಸ್ಕ್ ಮೈಸೂರು ವೃತ್ತದ ಅಧೀಕ್ಷಕ ಇಂಜಿನಿಯರ್ ಸುನೀಲ್, ಮುಖ್ಯ ಇಂಜಿನಿಯರ್ ಎಲ್. ಲೋಕೇಶ್ ಇದ್ದರು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊಸೂರು ಕುಮಾರ್, ಪ್ರಧಾನ ಕಾರ್ಯದರ್ಶಿ ಮರಂಕಯ್ಯ, ಪೈ.ವೆಂಕಟೇಶ್, ಆನಂದೂರು ಪ್ರಭಾಕರ್, ಮಂಡಕಳ್ಳಿ ಮಹೇಶ್ ಇತರರಿದ್ದರು.



# ಕೆಪಿಎಸ್ ಮ್ಯಾಗ್ನೆಟ್ ಶಾಲೆ ಆರಂಭ ಶಿಕ್ಷಣ ವ್ಯವಸ್ಥೆಯ ಅವನತಿ



ಮೈಸೂರು: ರಾಜ್ಯ ಸರ್ಕಾರ ಶಿಕ್ಷಣ ತಜ್ಞರು, ವಿದ್ವಾಂಸರು ಮತ್ತು ಶಿಕ್ಷಕರ ವರದಿಯನ್ನು ಧಿಕ್ಕರಿಸಿ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಪ್ರಾರಂಭ ಮಾಡಲು ಮುಂದಾಗಿರುವುದು ಶಿಕ್ಷಣ ವ್ಯವಸ್ಥೆಯ ಅವನತಿಗೆ ಕಾರಣ ಎಂದು ಶಿಕ್ಷಣ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಆರ್.ಮಹದೇವಪ್ಪ ಅಭಿಪ್ರಾಯಿಸಿದರು.

ನಗರದ ಇನ್ಸಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಗುರುವಾರ ಕರ್ನಾಟಕ ದಲಿತ ಸಂಘರ್ಷ ಸಮಿತಿ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ "ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಬಡಮಕ್ಕಳ ಶಿಕ್ಷಣ ಕಸಿಯುತ್ತಿರುವ ಸರ್ಕಾರ" ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು. ರಾಜ್ಯ ಸರ್ಕಾರ ತನ್ನ 8 ನೇ ಗ್ಯಾರಂಟಿ ಎಂದು ಕೆಪಿಎಸ್ ಮ್ಯಾಗ್ನೆಟ್ ಶಾಲೆ ಆರಂಭದ ಕುರಿತು ಪತ್ರಿಕೆಗಳಲ್ಲಿ ದೊಡ್ಡ ದೊಡ್ಡ ಜಾಹೀರಾತು ನೀಡುತ್ತಿದೆ. ವಿಕೇಂದ್ರಿಕರಣ ಗೊಳ್ಳಬೇಕಾದ ಶಿಕ್ಷಣ ಇಂದು ಕೇಂದ್ರೀಕರಣವಾಗುತ್ತಿರುವುದು ನಮ್ಮ ದುರದೃಷ್ಟಕರ ಎಂದು ಹೇಳಿದರು. ಪ್ರತಿಯೊಬ್ಬರು ಶಿಕ್ಷಣ ಪಡೆಯುವ ಮೂಲಕ ಜಾಗೃತರಾಗಬೇಕು ಎಂಬ ಆಶಯ ಹೊಂದಿದ್ದ ಅಂಬೇಡ್ಕರ್ ಅವರು ಪ್ರತಿಯೊಂದು ಊರಿನಲ್ಲೂ ಶಾಲೆಗಳು ಇರಬೇಕು ಎಂದು ಹೇಳಿದ್ದರು. ಯಾರು ಅಂಬೇಡ್ಕರ್ ಆಶಯ ಈಡೇರಿಸುತ್ತಾರೆ ಎಂದುಕೊಂಡಿದ್ದೆವೂ ಅವರೇ ಇಂದು ಶಿಕ್ಷಣ ವ್ಯವಸ್ಥೆಯನ್ನು ಹಾಳು ಮಾಡಲು ಮುಂದಾಗಿದ್ದಾರೆ. ಊರುಗಳಲ್ಲಿದ್ದ ಶಾಲೆಗಳನ್ನು ಮುಚ್ಚಿ ಖಾಸಗಿ ಸಹಭಾಗಿತ್ವದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಶಾಲೆ ತೆರಯಲು ಮುಂದಾಗಿರುವುದು ಖಂಡನೀಯ ಎಂದರು.

ಕೆಪಿಎಸ್ ಮ್ಯಾಗ್ನೆಟ್ ಶಾಲೆಯಲ್ಲಿ 6 ನೇ ತರಗತಿ ಮಕ್ಕಳಿಗೆ ಕೌಶಲ್ಯ ತರಬೇತಿ ನೀಡುವುದಾಗಿ ತಮ್ಮ ಜಾಹೀರಾತಿನಲ್ಲಿ ತಿಳಿಸಲಾಗಿದೆ. ಎಲ್ಲಾದರೂ 6 ನೇ ತರಗತಿ ಮಕ್ಕಳಿಗೆ ಕೌಶಲ್ಯ ತರಬೇತಿ ನೀಡುವುದುಂಟೆ? ಇನ್ನೂ ಸಾಹಿತ್ಯ, ಸಂಸ್ಕೃತಿ ತಿಳುವಳಿಕೆಯೇ ಇಲ್ಲದ ಮಕ್ಕಳಿಗೆ ಕೌಶಲ್ಯ ತರಬೇತಿ ನೀಡುತ್ತೇವೆ ಎಂದು ಹೇಳುವುದು ನಾಚಿಗೆಟ್ಟ ವಿಚಾರವಾಗಿದೆ. ಸಣ್ಣ ಮಕ್ಕಳು ಓದು ಕಲಿತು ಐ.ಎ.ಎಸ್, ಮೆಡಿಕಲ್, ಇಂಜಿನಿಯರಿಂಗ್ ಸೇರಿದಂತೆ ಉನ್ನತ ಮಟ್ಟದ ವ್ಯಾಸಾಂಗದ ಬಗ್ಗೆ ಆಸಕ್ತಿ ಇಟ್ಟುಕೊಳ್ಳಬೇಕು. ಅದರ ಬದಲು ಈಗಲೇ ಕೌಶಲ್ಯ ತರಬೇತಿ ನೀಡಲು ಮುಂದಾಗುವುದು ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುವ ಹುನ್ನಾರವಾಗಿದೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ತನ್ನ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬರಬೇಕು. ಹಳ್ಳಿ ಮಕ್ಕಳ, ಹಾಡಿ ಮಕ್ಕಳ ಕಷ್ಟ ಅವರ ಹಾಗು ಹೋಗುಗಳು ಶಿಕ್ಷಣ ಸಚಿವರಿಗೆ ಗೊತ್ತೇ ಇಲ್ಲ. ಇಂತಹ ವ್ಯಕ್ತಿಗಳನ್ನು ಶಿಕ್ಷಣ ಸಚಿವರನ್ನಾಗಿ ಮಾಡಿದರೆ ಇದೇ ವ್ಯವಸ್ಥೆ ಉದ್ಭವವಾಗಲಿದೆ ಎಂದರು.

ಶಿಕ್ಷಣ, ಆರೋಗ್ಯ ಮತ್ತು ಕೃಷಿ ಇಲಾಖೆಗಳನ್ನು ತಿಳುವಳಿಕೆ ಇರುವವರಿಗೆ ನೀಡಿದರೆ ಮಾತ್ರ ಏನಾದರೂ ಸುಧಾರಣೆ ತರಲು ಸಾಧ್ಯ, ಯಾವುದೇ ಶಾಲೆಯಲ್ಲಿ 1,2,3 ಮಕ್ಕಳಿದ್ದರೂ ಅಲ್ಲಿ ಶಾಲೆ ಇರಬೇಕು ಆಗ ಮಾತ್ರ ಶಿಕ್ಷಣದ ಅರಿವು ಇರಲಿದೆ ಎಂದರು. ದಸಂಸ ಜಿಲ್ಲಾ ಸಂಚಾಲಕ ಚೋರನಹಳ್ಳಿ ಶಿವಣ್ಣ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿ ಉಪಾಧ್ಯಕ್ಷ ವಿ.ಎನ್.ರಾಜಶೇಖರ್ ವಿಷಯ ಮಂಡನೆ ಮಾಡಿದರು. ಮೈಸೂರು ವಿವಿ ನಿವೃತ್ತ ಹಿರಿಯ ಪ್ರಾಧ್ಯಾಪಕ ಪ್ರೊ.ಡಿ.ಆನಂದ್, ಎ.ಐ.ಡಿ.ಎಸ್.ಓ ಜಿಲ್ಲಾಧ್ಯಕ್ಷೆ ಚಂದ್ರಕಲಾ, ದಸಂಸ ಜಿಲ್ಲಾ ಸಂಚಾಲಕ ಎಡದೊರೆ ಮಹದೇವಯ್ಯ ಅತಿಥಿಗಳಾಗಿ ಆಗಮಿಸಿದ್ದರು. ಮೈಸೂರು ವಿವಿ ಸಂಶೋಧಕ ಕಾರ್ತಿಕ್ ಪ್ರಾಸ್ತಾವಿಕ ನುಡಿಗಳನ್ನಾಡಿದರೆ ನಂದೀಶ್ ಗಾಗೇನಹಳ್ಳಿ ನಿರೂಪಿಸಿದರು.

# ಸಂವಿಧಾನ ಆಶಯಗಳಿಗೆ ಇಂದಿಗೂ ಸಂದಿಗ್ಧ ಪರಿಸ್ಥಿತಿ

## ರಾಜ್ಯ ಮಾಹಿತಿ ಆಯೋಗದ ಆಯುಕ್ತ ಕೆ.ಹರೀಶ್‌ಕುಮಾರ್ ಕಳವಳ



ಮೈಸೂರು: ಭಾರತದ ಸಂವಿಧಾನ ಜಾರಿಗೆ ಬಂದು 75 ವರ್ಷಗಳಾದರೂ ಸಹ ಸಂವಿಧಾನದ ಆಶಯಗಳು ಇಂದಿಗೂ ಸಂದಿಗ್ಧ ಪರಿಸ್ಥಿತಿ ಎದುರಿಸುತ್ತಿವೆ ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತ ಕೆ.ಹರೀಶ್‌ಕುಮಾರ್ ತಿಳಿಸಿದರು.

ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಮೈಸೂರು ಜಿಲ್ಲಾ ಬಿ.ಸಿ.ಎಂ. ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದವತಿಯಿಂದ ನಡೆದ ಡಾ. ಬಿ.ಆರ್.ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್ ರಾಂ ರವರ ಜನ್ಮದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಅಂಬೇಡ್ಕರ್ ಮತ್ತು ಬಾಬು ಜಗಜೀವನ್‌ರಾಮ್ ರವರ ಹೋರಾಟದಿಂದ ಈ ದೇಶದ ತಳಸಮುದಾಯಗಳು ಘನತೆಯಿಂದ ಬದುಕಲು ಸಾಧ್ಯವಾಯಿತು. ತಳಸಮುದಾಯಗಳು ಶೋಷಣೆಗೆ ಒಳಗಾಗುವುದನ್ನು ಬದಲಾವಣೆ ಮಾಡಿದ್ದು ಸಂವಿಧಾನ. ಸಾಂವಿಧಾನಿಕ ಚೌಕಟ್ಟಿನಲ್ಲಿ ನಿರ್ಮಿಸಿದ್ದ ಸಂಸ್ಥೆಗಳನ್ನು ಜಗಜೀವನರಾಂ ಬಲಪಡಿಸಿದ್ದರು. ನಮ್ಮ ದೇಶದಲ್ಲಿ ಎಲ್ಲಾ ಸಂದರ್ಭಗಳಲ್ಲಿಯೂ ಪಟ್ಟಭದ್ರ ಹಿತಾಶಕ್ತಿಗಳು ಕೆಲಸ ಮಾಡುತ್ತಿವೆ. ಇದಕ್ಕೆ ಪೂರಕವಾಗಿ ತಳಸಮುದಾಯಗಳು ಚಿಂತನೆ ನಡೆಸಬೇಕು ಎಂದರು.

ಚಿಂತಕರಾದ ವಿಕಾಸ್ ಆರ್.ಮೌರ್ಯ ಮಾತನಾಡಿ ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್‌ರವರ ಸಿದ್ಧಾಂತಗಳು ಈ ದೇಶವನ್ನು ಮುನ್ನೆಡೆಸಿವೆ. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಇಬ್ಬರೂ ಸಹ ಜಾತಿ ವಿನಾಶವಾಗಬೇಕು ಎಂದು ಬಯಸಿದ್ದರು. ಅಂಬೇಡ್ಕರ್‌ರವರು ರಾಜಕೀಯದ ಜೊತೆಗೆ ಸಾಮಾಜಿಕ ಮತ್ತು ಆರ್ಥಿಕ ಸಮಾನತೆ ಇರಬೇಕು ಎಂದು ಬಯಸಿದ್ದರು ಎಂದರು.

ಹಿರಿಯ ಕೆ.ಎ.ಎಸ್. ಅಧಿಕಾರಿ ಡಾ.ಪಿ.ಶಿವರಾಜು ಮಾತನಾಡಿ ನಾವೆಲ್ಲರೂ ಜಾತಿ ಪದ್ಧತಿ, ಧರ್ಮದ ಸಂಕೋಲೆ, ಅಸಮಾನತೆ, ಮೇಲುಕೀಳು ಎಂಬ ಮನೋಭಾವನೆಗಳನ್ನು ಬಿಟ್ಟು ನಾವೆಲ್ಲರೂ ಸಮಾನರು. ನಾವು ಮಾನವರು ನಮಗಿಂತ ದೇಶ ದೊಡ್ಡದು ಎಂದು ತಿಳಿದುಕೊಂಡು ನಮ್ಮ ಸುತ್ತಮುತ್ತ ಇರುವವರನ್ನು ಶಿಕ್ಷಿತರನ್ನಾಗಿ ಮಾಡೋಣ. ಇಲ್ಲಿ ಯಾರೂ ಮೇಲಲ್ಲ, ಯಾರು ಕೀಳಲ್ಲ ಎಂದು ತಿಳಿದು ಮಹಾನೀಯರ ಆದರ್ಶಗಳನ್ನು ಮೈಗೂಡಿಸಿಕೊಳ್ಳೋಣ ಸಮಸಮಾಜ ನಿರ್ಮಾಣ ಮಾಡೋಣ ಎಂದರು.

ಮೈಸೂರು ಜಿಲ್ಲಾ ಬಿ.ಸಿ.ಎಂ. ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಹಾಗೂ ಕೆ.ಎಂ.ಎಫ್. ನ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಮಾತನಾಡಿ ಶೋಷಿತರನ್ನು ಸಮಾಜದಲ್ಲಿ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಅಂಬೇಡ್ಕರ್ ಹಾಗೂ ಬಾಬು ಜಗಜೀವನ್‌ರಾಮ್ ಶ್ರಮಪಟ್ಟಿದ್ದಾರೆ. ತಮಗಾದ ಸಂಕಟ, ನೋವು, ಅಪಮಾನ, ಅಸಹಕಾರವನ್ನು ತಳಸಮುದಾಯದ ಜನರು ಅನುಭವಿಸಬಾರದು ಎಂದು ಹೋರಾಟ ನಡೆಸಿದ್ದಾರೆ. ಈ ಕಾರ್ಯಕ್ರಮದ ಉದ್ದೇಶ ಒಬ್ಬರು ಮೇಲು, ಒಬ್ಬರು ಕೀಳು ಎನ್ನುವುದಲ್ಲ. ಇಬ್ಬರೂ ಮಹನೀಯರ ಕೊಡುಗೆಗಳನ್ನು ಅನುಭವಿಸಿಕೊಂಡು ಪಾಲಿಸಿಕೊಂಡು ಬೆಳೆದಿದ್ದೇವೆ. ಐಕ್ಯತೆ ಇದ್ದರೆ ಮಾತ್ರ ಇನ್ನೂ ಹೆಚ್ಚಿನ ಹೋರಾಟ ಮಾಡಿ ನಮಗೆ ದೊರೆಯಬೇಕಾದ ಸವಲತ್ತುಗಳನ್ನು ಪಡೆಯಬಹುದು. ಯುವ ವಿದ್ಯಾರ್ಥಿಗಳು ಇದನ್ನು ಅರ್ಥ ಮಾಡಿಕೊಂಡು ಮಹನೀಯರ ಆದರ್ಶಗಳನ್ನು ಪಾಲಿಸಿಕೊಂಡು ಜೀವನದಲ್ಲಿ ಯಶಸ್ಸನ್ನು ಕಾಣಬೇಕು ಎಂದರು. ಸಮಾರಂಭದಲ್ಲಿ ಸಿಂಡಿಕೇಟ್ ಸದಸ್ಯರಾದ ಮಹೇಶ್ ಸೋಸಲೆ, ನಟರಾಜ್ ಶಿವಣ್ಣ, ಅಹಿಂದ ಜವರಪ್ಪ, ಜೀರಹಳ್ಳಿ ರಮೇಶ್ ಗೌಡ, ಹುಣಸೂರು ತಹಸೀಲ್ದಾರ್ ಮಂಜುನಾಥ್, ಕೆ.ಎ.ಎಸ್. ಅಧಿಕಾರಿ ಚೈತ್ರಾ ಶಿವಸ್ವಾಮಿ, ಕಾರ್ಯದರ್ಶಿ ರಾಜೇಶ್ ಬಿ.ಪಿ., ಖಜಾಂಚಿ ರುಕ್ಮಾಂಗದ, ಹರಿಹರ ಆನಂದಸ್ವಾಮಿ, ಮಹೇಶ್ ದಳಪತಿ, ಪೂರ್ಣಾನಂದ ಉಪಸ್ಥಿತರಿದ್ದರು.

ಮೊದಲ ಪುಟದಿಂದ

## ಸಂಪುಟ ಬದಲು?

ಸಂಪುಟದ ಸುಮಾರು 30 ಸಚಿವರನ್ನು ಕೈಬಿಟ್ಟು 3-4 ಬಾರಿ ಶಾಸಕರಾಗಿರುವರಿಗೆ ಆದ್ಯತೆ ನೀಡಲು ನಿರ್ಧರಿಸಲಾಗಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಸಚಿವ ಸ್ಥಾನದ ಆಕಾಕ್ಷಿಗಳು ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಿ ಒತ್ತಡ ಹಾಕುತ್ತಿದ್ದಾರೆ. ಹೈಕಮಾಂಡ್ ಹೊಸ ಮುಖಗಳಿಗೆ ಅವಕಾಶ ನೀಡುವ ಭರವಸೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ 30 ಸಚಿವರನ್ನು ಬದಲಾಯಿಸಬಹುದು ಮತ್ತು ಮುಂಬರುವ ಸಂಪುಟ ಪುನಾರಚನೆಯಲ್ಲಿ ಪ್ರಸ್ತುತ ಸಂಪುಟದ ನಾಲ್ವರು ಹಿರಿಯ ಸಚಿವರನ್ನು ಮಾತ್ರ ಉಳಿಸಿಕೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ.

## 6 ಅಪರಾಧಿಗಳಿಗೆ ಗಲ್ಲು

ವಾಹನದಲ್ಲಿ ವೆಂಕಟೇಶ ತೆರಳುತ್ತಿದ್ದ ಸಂದರ್ಭದಲ್ಲಿ ಕಾರಿನಲ್ಲಿ ಹಿಂಬಾಲಿಸಿದ ಯುವಕರ ಗುಂಪು, ದ್ವಿಚಕ್ರ ವಾಹನಕ್ಕೆ ಗುದ್ದಿ ಬೀಳಿಸಿದ್ದರು. ಬಳಿಕ ಕೆಳಕ್ಕೆ ಬಿದ್ದ ವೆಂಕಟೇಶನ ಮೇಲೆ ಮಾರಕಾಯುಧಗಳಿಂದ ದಾಳಿ ಮಾಡಿ ಮನಬಂದಂತೆ ಕೊಚ್ಚಿ ಕೊಲೆ ಮಾಡಿದ್ದರು.

## 'ಜನಿವಾರ್' ಸಂತ್ರಸ್ತರಿಗೆ ಸಿಇಟಿ ಮರು ಪರೀಕ್ಷೆ

ಗ್ರೇಸ್ ಅಂಕ ಕೊಡೋದು ಸಮಂಜಸ ಅಲ್ಲ. ಹಾಗಾಗಿ ಮರು ಪರೀಕ್ಷೆ ಮಾಡುತ್ತೇವೆ. ಈ ಬಗ್ಗೆ ಚರ್ಚೆ ಮಾಡಿ ತೀರ್ಮಾನ ತೆಗೆದುಕೊಳ್ಳುತ್ತೇವೆ. ಕಳೆದ ಬಾರಿ ಕೂಡ ಗೊಂದಲ ಆಗಿತ್ತು. ಈ ಬಾರಿ ಮರು ಪರೀಕ್ಷೆ ಮಾಡುವುದು ಸೂಕ್ತ ಅಂತ ನಿರ್ಧಾರ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

## ರೂಪಾಯಿ ಮೌಲ್ಯ ಕುಸಿತ

ಅಮೆರಿಕದ ಫೆಡ್ ರಿಸರ್ವ್ ಬ್ಯಾಂಕ್ ಬಡ್ಡಿ ದರಗಳನ್ನು ಉಳಿಸಿದ ನಂತರ ಡಾಲರ್ ಮತ್ತಷ್ಟು ಬಲಗೊಂಡಿದೆ. ಅಮೆರಿಕ ಮತ್ತು ಇರಾನ್ ನಡುವಿನ ಮತ್ತೊಂದು ರಾಜತಾಂತ್ರಿಕ ಹಿನ್ನಡೆಯಿಂದ ಸುರಕ್ಷಿತ ಹೂಡಿಕೆಗಳ ಬೇಡಿಕೆಯೂ ಹೆಚ್ಚಾಗಿದೆ.

ಪ್ರಚಾರದಲ್ಲಿ ಇರಬೇಕೆಂಬ ಕಾರಣಕ್ಕಾಗಿ ವಿವಾದ

# ನಟಚೇತನ್ ವಿಕೃತ ಮನಸ್ಸಿನ ವ್ಯಕ್ತಿ: ರಘು ಕೌಟಿಲ್ಯ



ಮೈಸೂರು: ಚೇತನ್ ಅಹಿಂಸ ವಿಕೃತ ಮನಸ್ಸಿನ ವ್ಯಕ್ತಿ. ಪ್ರಚಾರದಲ್ಲಿ ಇರಬೇಕೆಂಬ ಕಾರಣಕ್ಕಾಗಿ ಈ ರೀತಿಯ ವಿವಾದ ಹುಟ್ಟುಹಾಕಿದ್ದಾನೆ ಎಂದು ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಕಿಡಿಕಾರಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವರನಟ ಡಾ. ರಾಜಕುಮಾರ್ ಅವರ ಸ್ಮಾರಕ ನಿರ್ಮಾಣಕ್ಕೆ ಸರ್ಕಾರ ಜಾಗ ನೀಡಿರುವುದಕ್ಕೆ ನಟ ಚೇತನ್ ಅಹಿಂಸಾ ಆಕ್ಷೇಪ ವ್ಯಕ್ತಪಡಿಸಿರುವ ಕುರಿತು ಮೇಲಿ ನಂತೆ ಪ್ರತಿಕ್ರಯಿಸಿದರು. ಚೇತನ್ ಮುಂದೊಂದು ದಿನ ಕರ್ನಾಟಕ ಎಂದು ಏಕೆ ಹೆಸರಿಟ್ಟಿದ್ದಾರೆ ಎಂದರೂ ಅಚ್ಚರಿಯಿಲ್ಲ. ಬೇರೊಂದು ಭಾಷೆಯನ್ನು ಆಡಳಿತ ಭಾಷೆ ಮಾಡಿ ಎಂದು ಕೂಡ ಹೇಳುತ್ತಾನೆ. ಈತನ ಇತ್ತೀಚಿನ ಹೇಳಿಕೆಯಿಂದ ಅಣ್ಣಾವ್ರು ಮಾಡಿರುವ ಕೆಲಸಗಳ ಬಗ್ಗೆ ಜಾಲತಾಣಗಳ ಮೂಲಕ ಜನರಿಗೆ ತಿಳಿಯುವಂತಾಗಿದೆ ಎಂದರು.

ಮೈಸೂರು ನಗರ ಅಪರಾಧ ಚಟುವಟಿಕೆಗಳ ತಾಣವಾಗಿದೆ. ಮಾಫಿಯಾಗಳಿಗೆ ದೊಡ್ಡ ಆಶ್ರಯ ತಾಣವಾಗಿದೆ. ಸಿಎಂ ಸಿದ್ದರಾಮಯ್ಯ ತವರು ಜಿಲ್ಲೆಯಾಗಿದ್ದು, ಲಕ್ಷಾಂತರ ಪ್ರವಾಸಿಗರು ಆಗಮಿಸುತ್ತಾರೆ. ಅಡವಿಟ್ಟ ಚಿನ್ನವನ್ನು ಬಿಡಿಸಿಕೊಡುವ ಭರವಸೆ ನೀಡಿ ಚಿನ್ನದ ದರೋಡೆ ನಡೆಯುತ್ತಿದೆ. ಮೋಸಕ್ಕೆ ಒಳಗಾದ ಅಮಾಯಕರು ಧ್ವನಿ ಎತ್ತಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಎಸ್ ಡಿಜೆ ಗೋಲ್ಡ್ ಎಂಬ ಸಂಸ್ಥೆಯಿಂದ ಅಮಾಯಕರಿಗೆ ವಂಚನೆಯಾಗುತ್ತಿದೆ. ಅಡವಿಟ್ಟ ಚಿನ್ನ ಬಿಡಿಸಿಕೊಳ್ಳಿ ಎಂಬ ಜಾಹಿರಾತು ನೀಡಿ ಚಿನ್ನ ದರೋಡೆ ಮಾಡಿರುವ ಪ್ರಕರಣವನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಬೇಕು. ಇದುವರೆಗೂ ಸಾವಿರಾರು ಕೋಟಿ ಅವ್ಯವಹಾರ ನಡೆದಿದೆ. ಇದರ ಹಿಂದೆ ಯಾರ್ಯಾರ ಕೈವಾಡ ಇದೆ ಎಂಬುದನ್ನು ಪತ್ತೆ ಹಚ್ಚಬೇಕು. ಚಿನ್ನ ದರೋಡೆಕೋರ ಚಿನ್ನತಂಬಿ ಎಂಬಾತನನ್ನು ಪೊಲೀಸರು ವಶಕ್ಕೆ ತೆಗೆದುಕೊಂಡು ಕಾನೂನು ಕ್ರಮ ಕೈಗೊಳ್ಳಬೇಕೆಂದರು. ಅಡವಿಟ್ಟ ಚಿನ್ನ ಬಿಡಿಸಿಕೊಡುತ್ತೇವೆಂಬ ಜಾಹಿರಾತಿಗೆ ಜನರು ಮರುಳಾಗಬಾರದು. ಬಡ ಮಧ್ಯಮ ವರ್ಗದ ಜನರಿಗೆ ಸಾವಿರಾರು ಕೋಟಿ ದೋಖಾ ಆಗಿದೆ. ರಾಜ್ಯ ಸರ್ಕಾರ ಕೂಡ ಈ ವಿಚಾರದಲ್ಲಿ ಮಧ್ಯೆ ಪ್ರವೇಶಿಸಬೇಕು. ಈ ಪ್ರಕರಣ ವನ್ನು ಮೈಸೂರು ಪೊಲೀಸರು ಹಗುರವಾಗಿ ಪರಿಗಣಿಸಿದ್ದಾರೆ. ಈ ಬಗ್ಗೆ ಜಾರಿ ನಿರ್ದೇಶನಾ ಲಯಕ್ಕೂ ಪತ್ರ ಬರೆಯುತ್ತೇನೆ. ರಾಜ್ಯ ಪೊಲೀಸ್ ಮಹಾನಿರ್ದೇಶಕರ ಗಮನಕ್ಕೆ ತಂದು ವಿಶೇಷ ತನಿಖೆಗೆ ಒತ್ತಾಯಿಸಲಾಗುವುದು. ಮೈಸೂರಿನಲ್ಲಿ ದುಷ್ಟರ ಜಾಲ ಬೇರೂರಿದೆ. ಮೋಸ ಹೋಗಿರುವವರು ನೀಡುವ ದೂರನ್ನು ಸ್ವೀಕರಿಸಿ ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಬೇಕು. ದಂತ ಚೋರ ವೀರಪ್ಪನ್ ನಂತೆ ಚಿನ್ನ ಚೋರ ಚಿನ್ನ ತಂಬಿ ಆಗಿದ್ದಾನೆ. ಈ ಬಗ್ಗೆ ತನಿಖೆಯಾದರೆ ಬಹುದೊಡ್ಡ ಕರ್ಮಕಾಂಡ ಬೆಳಕಿಗೆ ಬರಲಿದೆ ಎಂದು ತಿಳಿಸಿದರು. ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಧ್ಯಮ ವಕ್ತಾರ ಮಹೇಶ್ ರಾಜೇ ಅರಸ್ ಸುದ್ದಿಗೋಷ್ಠಿಯಲ್ಲಿದ್ದರು.

# ಒಳ ಮೀಸಲಾತಿ ನಿರ್ಧಾರ: ಗೊಂದಲಕ್ಕೆ ಆಸ್ಪದವಿಲ್ಲ : ಮುನಿಯಪ್ಪ



ಪಿರಿಯಾಪಟ್ಟಣ : ವಿಪಕ್ಷಗಳು ಒಳ ಮೀಸಲಾತಿ ಕುರಿತಂತೆ ಸರ್ಕಾರ ಕೈಗೊಂಡ ನಿರ್ಧಾರಕ್ಕೆ ಇಲ್ಲಸಲ್ಲದ ಆರೋಪ ಮಾಡಿ ರಾಜಕೀಯ ಮಾಡುತ್ತಿದ್ದಾರೆ. ಯಾರು ಯಾವುದೇ ಗೊಂದಲಕ್ಕೆ ಅವಕಾಶ ನೀಡದೆ ಎಡ ಮತ್ತು ಬಲಗೈ ಸಮುದಾಯ ಒಗ್ಗಟ್ಟಿನಿಂದ ಸಾಗಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆಎಚ್ ಮುನಿಯಪ್ಪ ಹೇಳಿದರು.

ಪಟ್ಟಣದ ಕಾಂಗ್ರೆಸ್ ಭವನದ ಆವರಣದಲ್ಲಿ ಕರ್ನಾಟಕ ಮಾದರ ಮಹಾಸಭಾ ಮತ್ತು ಆದಿ ಜಾಂಬವ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಗುರುವಾರ ನಡೆದ ಡಾ. ಜಗಜೀವನ್ ರಾಮ್ ರವರ 119ನೇ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನ ಶಿಲ್ಪಿ ಡಾ.ಬಿಆರ್ ಅಂಬೇಡ್ಕರ್ ಅವರು ವಿಶ್ವವೇ ಮೆಚ್ಚಿಕೊಳ್ಳುವಂತಹ ಸಂವಿಧಾನ ನೀಡಿದ್ದಾರೆ. ಆದರೆ ಅವರ ಆಸೆಗಳನ್ನು ತಮ್ಮ ಅಧಿಕಾರದ ಅವಧಿಗಳಲ್ಲಿ ಜಾರಿಗೆ ತಂದ ಏಕೈಕ ರಾಜಕಾರಣಿ ಡಾ.ಬಾಬು ಜಗಜೀವನ್ ರಾಂ,ಬಾಬೂಜಿ ಮತ್ತು ಅಂಬೇಡ್ಕರ್ ಇಬ್ಬರು ನಾಯಕರು ಒಂದು ವರ್ಗಕ್ಕೆ ಸೇರಿದವರಲ್ಲ ಇವರಿಬ್ಬರು ಈ ದೇಶದ ಎರಡು ಕಣ್ಣುಗಳು.ಅಂಬೇಡ್ಕರ್ ಈ ದೇಶಕ್ಕೆ ಸಂವಿಧಾನದ ಮೂಲಕ ಎಲ್ಲರಿಗೂ ಸಮಾನವಾದ ಹಕ್ಕು ನೀಡುವಂತೆ ಮಾಡಿದರೆ, ಬಾಬೂಜಿ ಈ ದೇಶಕ್ಕೆ ಅನ್ನ ನೀಡಿದ ಹಸಿರು ಕ್ರಾಂತಿಯ ಹರಿಕಾರ ಎಂದು ಬಣ್ಣಿಸಿದ್ದರು. ಅಲ್ಲದೆ ರಾಜ್ಯದಲ್ಲಿ ಸಮರ್ಪಕವಾಗಿ ಬಗೆಹರಿಯದೇ ಇರುವ ಒಳ ಮೀಸಲಾತಿ ವಿಷಯದಲ್ಲಿ ವಿಪಕ್ಷಗಳು ಗೊಂದಲ ಸೃಷ್ಟಿಸಲು ಮುಂದಾಗಿವೆ.

ಅದಕ್ಕೆಲ್ಲ ಕಿವಿಗೊಡದೆ ನಾವೆಲ್ಲ ಸಂಘಟಿರಾಗಬೇಕು. ಸಚಿವ ಮಹದೇವಪ್ಪರವರ ನೇತೃತ್ವದಲ್ಲಿ ಸೇರ್ಪಡೆಯಾಗಿರುವ ನೂರೊಂದು ಜಾತಿಗಳನ್ನು ಆದರಿಸಿ ಪ್ರತಿಯೊಂದು ಲೆಕ್ಕಾಚಾರವಾಗಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದವರನ್ನು ಒಳಗೊಂಡಂತೆ ಇದ್ದ ಒಳ ಮೀಸಲಾತಿ ವಿವಾದವನ್ನು ಸಂಪೂರ್ಣವಾಗಿ ಬಗೆಹರಿಸಲಾಗಿದೆ. ಸಮುದಾಯವು ಎಂದಿನಂತೆ ಒಗ್ಗಟ್ಟಿನಿಂದ ಇರಬೇಕು ಎಂದು ಸಲಹೆ ನೀಡಿದರು.

ರೇಷ್ಮೆ ಹಾಗೂ ಪಶುಸಂಗೋಪನೆ ಸಚಿವ ಕೆ ವೆಂಕಟೇಶ್ ಮಾತನಾಡಿ ಬಾಬು ಜಗಜೀವನ್ ರಾಮ್ ರವರು ಈ ದೇಶದ ಆರ್ಥಿಕತೆ ಬಗ್ಗೆ ಹೆಚ್ಚು ಕಾಳಜಿ ವಹಿಸಿದ್ದರು.ಜನರ ಪರವಾಗಿ ಬಡವರಿಗೆ ಬದುಕು ರೂಪಿಸಿ ಕೊಟ್ಟ ಒಬ್ಬ ಅಗ್ರಗಣ್ಯ.ಇವರು ನಾಡಿಗೆ ದೇಶಕ್ಕೆ ಅನ್ನ ನೀಡಿದ ಮೂಲಕ ರೈತರ ಬಾಳಲ್ಲಿ ಹಸನಾದವರು. ದೇಶದ ಉಪ ಪ್ರಧಾನಿಯಾಗಿ ಕಾರ್ಯನಿರ್ವಹಿಸಿ ದೇಶದ ಬೆಳವಣಿಗೆಗೆ ಅಪಾರ ಕೊಡುಗೆ ನೀಡಿದ್ದಾರೆ ಅವರ ಆದರ್ಶ ಗುಣಗಳನ್ನು ನಾವು ಪಾಲಿಸಿ ಸಾಗೋಣ ಎಂದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರ ನೇತೃತ್ವದಲ್ಲಿ ನಡೆಯುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರದ ಪ್ರಗತಿಯನ್ನು ಸಹಿಸಿಕೊಳ್ಳದೆ ಬಿಜೆಪಿ ನಾಯಕರು ಇಲ್ಲಸಲ್ಲದನ್ನು ನೆಪಹೊಡ್ಡಿ ಮೀಸಲಾತಿ ವಿಚಾರದಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ ಆದ್ದರಿಂದ ಯಾರು ಕಿವಿ ಕೊಡಬಾರದು ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಡಾ.ಡಿ ತಿಮ್ಮಯ್ಯ, ಸಿ ರಮೇಶ್, ಮಾಜಿ ಮಹಾ ಪೌರ ನಾರಾಯಣ್, ಮೈಸೂರು ಬಣ್ಣ ಮತ್ತು ಅರಗು ನಿಗಮ ಅಧ್ಯಕ್ಷ ಎಚ್ ಡಿ ಗಣೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮತ್ ಜಾನ್ ಬಾಬು,ಕೆಪಿಸಿಸಿ ಸದಸ್ಯ ಎಚ್ ಟಿ ಅನಿಲ್ ಕುಮಾರ್, ಕೆಪಿಸಿಸಿ ವಕ್ತಾರ ಲಕ್ಷ್ಮಣ್,ಹರಳಯ್ಯ



ಮಠದ ಅರ್ಚಕ ಜಯಣ್ಣ,ತಾ.ಗ್ಯಾರಂಟಿ ಅನುಷ್ಠಾನ ಅಧ್ಯಕ್ಷ ನಿತಿನ್ ವೆಂಕಟೇಶ್, ಜಿಲ್ಲಾ ಕಾಂಗ್ರೆಸ್ ಗ್ರಾ.ಅಧ್ಯಕ್ಷ ಬಿಜೆ ಜಯಕುಮಾರ್,ಬೆಂ.ದೂರದರ್ಶನ ನಿವೃತ್ತ ಅಧಿಕಾರಿ ಕೆ ಆರ್ ರಾಜಪ್ಪ, ಮೈ.ವಿ.ಆದಿ ಜಾಂಬವ ಸಂಘದ ಅಧ್ಯಕ್ಷ ಎಡತೊರೆ ಎಂ ನಿಂಗರಾಜು, ಕ. ಮಾದರ ಮಹಾಸಭಾ ತಾ. ಅಧ್ಯಕ್ಷ ಸೀಗೂರು ವಿಜಯ್ ಕುಮಾರ್,ಆದಿ ಜಾಂಬವ ಮಾದಿಗ ಸಂಘಟನೆಗಳ ಒಕ್ಕೂಟದ ಮುಖಂಡ ಡಿ ಕುಮಾರ್ ಮಾತನಾಡಿದರು. ಭೂತನಹಳ್ಳಿ ಶಿವಣ್ಣ. ಬೇಗೂರು ಮಾದೇವ್. ನರಸಿಂಹಮೂರ್ತಿ. ಶಿವಕುಮಾರ್. ಬಸವರಾಜ್. ಜಯಸ್ವಾಮಿ. ನಾರಾಯಣ. ವಿಷ್ಣು. ಮುತ್ತೂರು ಕುಮಾರ್. ಬೇಗೂರು ಕುಮಾರ್ ಮತ್ತಿತರರು ಹಾಜರಿದ್ದರು.

# ಆದೇಶ ವಾಪಾಸ್ ಪಡೆಯದಿದ್ದರೆ ಹೋರಾಟ



ಮೈಸೂರು: ರಾಜ್ಯದೆಲ್ಲೆಡೆಯಂತೆ ಏಕ ಕಾಲದಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡರೂ ಮೈಸೂರು ವಿವಿ ವ್ಯಾಪ್ತಿಯಲ್ಲಿ ಮಾತ್ರ ಇವರನ್ನು ಮೂರು ತಿಂಗಳು ಮೊದಲೇ ಸೇವೆಯಿಂದ ಬಿಡುಗಡೆಗೊಳಿಸುವ ಆದೇಶ ವಾಪಸು ಪಡೆಯದಿದ್ದರೆ ಪರೀಕ್ಷೆ ಹಾಗೂ ಮೌಲ್ಯ ಮಾಪನ ಕಾರ್ಯ ಬಹಿಷ್ಕರಿಸಲಾಗುವುದು ಎಂದು ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಮನ್ವಯ ಸಮಿತಿ ಉಪಾಧ್ಯಕ್ಷ ಡಾ. ದಿವಾಕರ್ ಎಚ್ಚರಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2025–26 ನೇ ಶೈಕ್ಷಣಿಕ ಸಾಲಿನಲ್ಲಿ ಸುಮಾರು 10 ಸಾವಿರ ಮಂದಿ ಅತಿಥಿ ಉಪನ್ಯಾಸಕರನ್ನು ಏಕ ಕಾಲಕ್ಕೆ ನೇಮಕ ಮಾಡಿಕೊಳ್ಳಲಾಗಿದೆ. ಇದು 10 ತಿಂಗಳ ಅವಧಿಯದ್ದಾಗಿದೆ. ಆದರೆ ಮೈಸೂರು ವಿವಿಯಲ್ಲಿ ಶೈಕ್ಷಣಿಕ ಸಾಲು ಶೀಘ್ರ ಮುಕ್ತಾಯಗೊಳ್ಳಲಿದೆ ಎಂಬ ಕಾರಣ ನೀಡಿ ಮೂರು ತಿಂಗಳು ಮೊದಲೇ ಸೇವೆಯಿಂದ ಬಿಡುಗಡೆಗೊಳಿಸಲಾಗುತ್ತಿದೆ. ನಾವು ಪರೀಕ್ಷೆ, ಮೌಲ್ಯ ಮಾಪನ ಮೊದಲಾದವುಗಳಲ್ಲಿ ಪಾಲ್ಗೊಳ್ಳುತ್ತಿದ್ದರೂ ಈ ಕ್ರಮ ಕೈಗೊಳ್ಳುತ್ತಿರುವುದು ಸರಿಯಲ್ಲ. ಇದರಿಂದಾಗಿ ಸೇವಾ ಮೆರಿಟ್ ಇತರೆ ಜಿಲ್ಲೆಗಳ ಅತಿಥಿ ಉಪನ್ಯಾಸಕರಿಗೆ ಹೋಲಿಸಿದಲ್ಲಿ ಕಡಿತಗೊಳ್ಳಲಿದೆ. ಜೊತೆಗೆ, ಕುಟುಂಬವನ್ನು ಆರ್ಥಿಕವಾಗಿ ನಡೆಸುವುದೂ ಕಷ್ಟವಾಗುತ್ತದೆ.

ಆದ್ದರಿಂದ ರಾಜ್ಯದ ಇತರೆಡೆಯಂತೆಯೇ ಇಲ್ಲಿಯೂ ಒಂದೇ ಅವಧಿಯಲ್ಲಿ ಬಿಡುಗಡೆಗೊಳಿಸಬೇಕೆಂದು ಒತ್ತಾಯಿ ಸಿದರು. ಜೊತೆಗೆ, ಪರೀಕ್ಷೆಗಳಿಗೂ ಮುನ್ನ ಈ ಕುರಿತ ಆದೇಶ ವಾಪಸು ಪಡೆಯದಿದ್ದರೆ ಪರೀಕ್ಷೆ ಹಾಗೂ ಮೌಲ್ಯಮಾಪನ ಕಾರ್ಯ ಬಹಿಷ್ಕರಿಸುವು ದಾಗಿ ಎಚ್ಚರಿಸಿದರು. ಜಿಲ್ಲಾಧ್ಯಕ್ಷ ಹನುಮಂತೇಶ್, ಡಾ.ಜೆ.ಸಿ. ರವೀಂದ್ರ, ಡಾ. ಶಿವೇಗೌಡ ಇದ್ದರು.

# ರಾಮಸ್ವಾಮಿ ರಮ್ಮನಹಳ್ಳಿಗೆ ವರ್ಗಾವಣೆಗೊಳ್ಳಲು ಪ್ರಭಾವ




ಮೈಸೂರು: ಹೂಟಗಳ್ಳಿ ನಗರಸಭೆಯ ಕಂದಾಯ ನಿರೀಕ್ಷಕ ಸಿ.ರಾಮಸ್ವಾಮಿರನ್ನು ಲೋಕಾಯುಕ್ತರ ಶಿಫಾರಸ್ಸಿನ ಮೇರೆಗೆ ಅಮಾನತ್ತಿನಲ್ಲಿಡದೇ ಅಥವಾ ಮದ್ದೂರು ಪುರಸಭೆಗೆ ವರ್ಗಾವಣೆ ಮಾಡದೇ ರಮ್ಮನಹಳ್ಳಿ ಪಟ್ಟಣ ಪಂಚಾಯತಿಗೆ ವರ್ಗಾವಣೆ ಮಾಡಲು ರಾಜಕೀಯ ಪ್ರಭಾವ ಕಾರಣವಾಗಿದೆ ಎಂದು ಪ್ರೊ.ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಎಸ್. ಮಂಜುನಾಥ್ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರಾಮಸಾಮಿ ಸತ್ಯವನ್ನು ಮರೆಮಾಚಿ ಮುಖ್ಯಮಂತ್ರಿಗಳಿಗೆ ತಪ್ಪು ಮಾಹಿತಿ ನೀಡುವ ಮೂಲಕ ರಾಜಕೀಯ ಪ್ರಭಾವವನ್ನು ಬಳಸಿ ರಮ್ಮನಹಳ್ಳಿ ಪಟ್ಟಣ ಮಾಡಿಸಿಕೊಂಡಿರುವುದನ್ನು ಪಂಚಾಯಿತಿಗೆ ವರ್ಗಾವಣೆಗೊಂಡಿರುವುದು ಖಂಡನೀಯ. ಈ ಹಿಂದೆ ಹೂಟಗಳ್ಳಿ ನಗರಸಭೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ರೆವಿನ್ಯೂ ಜಾಗಗಳಿಗೆ ಅಧಿಕೃತ ಖಾತೆ ಮೊದಲಾದ ಅಕ್ರಮಗಳಲ್ಲಿ ತೊಡಗಿದ್ದರು. ಹೀಗಾಗಿ ಇವರ ಮೇಲೆ ಹಲವಾರು ದೂರುಗಳ ಆಧಾರದ ಮೇಲೆ ಸರ್ಕಾರ ತನಿಖೆಗೆ ಒಳಪಡಿಸಿದ್ದು ಹಾಗೂ ಲೋಕಾಯುಕ್ತರಿಂದಲೂ ಇವರ ವಾಸದ ಮನೆ, ಕರ್ತವ್ಯ ನಿರ್ವಹಿಸುತ್ತಿರುವ ಕಚೇರಿ ಮತ್ತು ಇತರೆ ಸ್ಥಳಗಳಲ್ಲಿ ಪಂಚಸಾಕ್ಷಿಗಳ ಸಮಕ್ಷಮ ದಾಖಲಾತಿಗಳನ್ನು ಪರಿಶೀಲನೆ ಮಾಡಿ ಪ್ರಾಥಮಿಕ ತನಿಖೆಯಿಂದ ಇವರು ತಮ್ಮ ಆದಾಯಕ್ಕಿಂತ ಹೆಚ್ಚು ಅಕ್ರಮ ಸಂಪತ್ತನ್ನು ಗಳಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿತ್ತು ಎಂದರು.

ಈ ಕಾರಣದಿಂದಾಗಿ ಇವರು ಮೈಸೂರು ಜಿಲ್ಲೆಯಲ್ಲಿಯೇ ಮುಂದುವರಿದರೆ ಸಾಕ್ಷ?ಯ ನಾಶಗೊಳಿಸಬಹುದೆಂಬ ಶಂಕೆಯಿಂದ ಕ್ರಮಕ್ಕೆ ಆದೇಶಿಸಲಾಗಿತ್ತು. ಆದರೆ ಇವರು ಮದ್ದೂರು ಪುರಸಭೆಗೆ ವರದಿ ಮಾಡಿಕೊಳ್ಳದೇ ಮುಖ್ಯಮಂತ್ರಿಗಳಿಗೆ ತಪ್ಪು ಮಾಹಿತಿ ನೀಡಿ, ರಾಜಕೀಯ ಪ್ರಭಾವವನ್ನು ಬಳಸಿ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಗೆ ವರ್ಗಾವಣೆ ಮಾಡಿಸಿಕೊಂಡಿರುವುದು ಹಲವು ಅನುಮಾನಗಳಿಗೆ ಹೆಡೆಮಾಡಿಕೊಟ್ಟಿದೆ ಎಂದರು. ಹೀಗಾಗಿ ಈ ಕೂಡಲೇ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಗೆ ಆಗಿರುವ ವರ್ಗಾವಣೆ ಈ ಕೂಡಲೇ ಸರ್ಕಾರ ಹಿಂಪಡೆದು ಅಮಾನತ್ತಿನಲ್ಲಿಡಬೇಕು ಅಥವಾ ಮದ್ದೂರು ಪುರಸಭೆಗೆ ಆಗಿರುವ ವರ್ಗಾವಣೆಯನ್ನು ಪರಿಗಣಿಸಿ ಈ ಕೂಡಲೇ ರಾಮಸ್ವಾಮಿಯವರನ್ನು ವರ್ಗಾವಣೆಗೊಳಿಸಬೇಕೆಂದು ಒತ್ತಾಯಿಸಿದರು. ಇನ್ನಿತರ ಪದಾಧಿಕಾರಿಗಳಾದ ಎ.ಪಿ.ರಮೇಶ್, ಬಿ.ಕೆ.ಸಿದ್ದರಾಜು, ಕೆ.ಸುಬ್ರಮಣ್ಯ ಇದ್ದರು.

# ಶ್ರೀ ಶಂಕರಾಚಾರ್ಯರ ಜಯಂತಿ

## ಭಾವಚಿತ್ರದ ಮೆರವಣಿಗೆಗೆ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ಚಾಲನೆ



ಚಾಮರಾಜನಗರ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಶ್ರೀ ಶಂಕರಾಚಾರ್ಯರ ಜಯಂತಿ ಆಚರಣೆ ಕಾರ್ಯಕ್ರಮವು ನಗರದಲ್ಲಿ ಅರ್ಥಪೂರ್ಣವಾಗಿ ನಡೆಯಿತು.

ಮೊದಲಿಗೆ ನಗರದ ಚಾಮರಾಜೇಶ್ವರ ದೇವಾಲಯದ ಬಳಿ ಶಂಕರಾಚಾರ್ಯರ ಭಾವಚಿತ್ರದ ಮೆರವಣ ಗೆಗೆ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ಚಾಲನೆ ನೀಡಿದರು.

ಬಳಿಕ ವರನಟ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ವೇದಿಕೆ ಕಾರ್ಯಕ್ರಮವನ್ನು ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ ಅವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಮ್ಮದ್ ಅಸ್ಗರ್ ಮುನ್ನಾ ಅವರು ಶಂಕರಾಚಾರ್ಯರು ನಾಲ್ಕು ದಿಕ್ಕಿನಲ್ಲೂ ಪರ್ಯಟನೆ ಮಾಡಿ ನಾಲ್ಕು ಮಠಗಳನ್ನು ಸ್ಥಾಪಿಸಿ ಧರ್ಮ ಪ್ರಚಾರ ಕೈಗೊಂಡರು. ಚಿಕ್ಕ ವಯಸ್ಸಿನಲ್ಲಿಯೇ ಆಸೆ ಆಕಾಂಕ್ಷೆಗಳನ್ನು ತೊರೆದು ರಾಷ್ಟ್ರ, ಜನತೆ ಹಾಗೂ ಧರ್ಮದ ಬಗ್ಗೆ ಸುಧೀರ್ಘವಾದ ಚಿಂತನೆ ನಡೆಸಿದವರು ಎಂದರು.

ಶಂಕರಾಚಾರ್ಯರ ವಿಚಾರಧಾರೆಗಳನ್ನು ಮುಂದಿನ ಪೀಳಿಗೆಗೂ ತಿಳಿಯಬೇಕಿದೆ. ದಾರ್ಶನಿಕರು, ಮಹಾಪುರುಷರ ಜಯಂತಿ ಆಚರಣೆ ಕಾರ್ಯಕ್ರಮಗಳಲ್ಲಿ ಎಲ್ಲರು ಭಾಗವಹಿಸುವಂತಾಗಬೇಕು ಎಂದು ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ ಅವರು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರು ಶಂಕರಾಚಾರ್ಯರು ಭಾರತ ಕಂಡ ಶ್ರೇಷ್ಠ ತತ್ವಜ್ಞಾನಿ ದಾರ್ಶನಿಕರು. ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಸಂಚರಿಸಿ ತಮ್ಮ ವಿದ್ವತ್ ಪ್ರತಿಭೆಯಿಂದ ಅದ್ವೈತ ಧ್ವಜವನ್ನು ಎತ್ತಿ ಹಿಡಿದವರು ಎಂದರು.

ಅದ್ವೈತ ಸಿದ್ಧಾಂತ ಪ್ರತಿಪಾದಕರಾದ ಶಂಕರಾಚಾರ್ಯರು ಅದ್ವೈತ ಎಂದರೆ ಜೀವಾತ್ಮ ಪರಮಾತ್ಮ ಬೇರೆ ಅಲ್ಲ, ಎರಡೂ ಒಂದೆ. ಮನುಷ್ಯ ಆತ್ಮಸಾಕ್ಷಾತ್ಕಾರ ಮಾಡಿಕೊಂಡರೆ ಭಗವಂತನಲ್ಲಿ ಲೀನವಾಗಬಲ್ಲನು ಎಂದು ವ್ಯಾಖ್ಯಾನಿಸಿದರು. ಮನುಷ್ಯ ತನ್ನ ಅಜ್ಞಾನವನ್ನು ಕಳಚಿಕೊಳ್ಳಬೇಕು. ಲೌಖಿಕ ಸುಖವನ್ನು ತೊರೆದು ಆಧ್ಯಾತ್ಮಿಕ ಸುಖವನ್ನು ಅನುಭವಿಸಬೇಕು ಎಂದು ಸಾರಿಸಿದರು ಶಂಕರಾಚಾರ್ಯರೆಂದು ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ಹೇಳಿದರು. ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರು ಹಾಗೂ ಉಪನ್ಯಾಸಕರಾದ ಸುರೇಶ್ ಎನ್. ಋಗ್ವೇದಿ ಅವರು ಮಾತನಾಡಿ ಶಂಕರಾಚಾರ್ಯರು ಭಾರತದ ಸನಾತನ ಧರ್ಮದ ಸಂರಕ್ಷರಣೆಗಾಗಿ ಅಖಂಡ ಭಾರತದ ವೈವಿಕ ಪರಂಪರೆಯನ್ನು ಪ್ರಖರ ಪ್ರದೀಪಗೊಳಿಸಿದರು. ಬಾಲ್ಯದಲ್ಲಿಯೇ ಪವಾಡ ಸೃಷ್ಟಿಸಿ ಚಿಕ್ಕ ವಯಸ್ಸಿನಲ್ಲಿಯೇ ನಾಲ್ಕು ವೇದಗಳನ್ನು ದಿವ್ಯ ಶಕ್ತಿಯಿಂದ ಅರ್ಥೈಸಿಕೊಂಡಿದ್ದರು ಎಂದರು. ಶಂಕರಾಚಾರ್ಯರು 16ನೇ ವಯಸ್ಸಿನಲ್ಲಿ ಭಗವದ್ಗೀತೆ, ಉಪನಿಷತ್ತು, ಬ್ರಹ್ಮಸೂತ್ರಗಳಿಗೆ ಭಾಷ್ಯ ಬರೆದ ಮೊದಲಿಗರು. ಜ್ಞಾನ ಮಾರ್ಗದ ಮೂಲಕ ಮಾನವ ಏಳಿಗೆ ಸಾಧಿಸಬೇಕು. ಭಗವಂತನನ್ನು ಅರಿಯಬೇಕು. ದ್ವೇಷ ಅಸೂಯೆ, ಮೇಲು ಕೀಳು ಭಾವನೆ ತೊರೆದು ವಿವೇಕವಂತರಾಗಬೇಕೆಂದು ಶಂಕರಾಚಾರ್ಯರು ಪ್ರತಿಪಾದಿಸಿದರು ಎಂದು ಸುರೇಶ್ ಎನ್. ಋಗ್ವೇದಿ ಅವರು ತಿಳಿಸಿದರು.

ಸಮುದಾಯದ ಮುಖಂಡರಾದ ಜಿ.ಎಂ. ಹೆಗಡೆ ಮಾತನಾಡಿದರು. ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಬಿ.ಎಸ್. ರಾಜು, ಮುಖಂಡರಾದ ಬಾಲಸುಬ್ರಹ್ಮಣ್ಯ, ಚಾ.ರಂ. ಶ್ರೀನಿವಾಸಗೌಡ, ಮಮತ ಬಾಲಸುಬ್ರಹ್ಮಣ್ಯ, ಗಾಯತ್ರಿ ಚಂದ್ರಶೇಖರ್, ಶಾಂತಲ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ನರಸಿಂಹ ಜಯಂತಿ ಅಂಗವಾಗಿ ಸಾರ್ವಜನಿಕರಿಗೆ ಮಜ್ಜಿಗೆ ವಿತರಣೆ

ಚಾಮರಾಜನಗರ, ನರಸಿಂಹ ಜಯಂತಿ ಪ್ರಯುಕ್ತ ನಗರದ ಚಾಮರಾಜೇಶ್ವರ ದೇವಸ್ಥಾನ ಸಮೀಪದ ಲಕ್ಷ್ಮೀ ಸ್ಟುಡಿಯೋ ಬಳಿ ಸಾರ್ವಜನಿಕರಿಗೆ ಮಜ್ಜಿಗೆ ವಿತರಿಸುವ ಕಾರ್ಯಕ್ರಮ ನಡೆಯಿತು.

ಬೇಸಿಗೆ ತಾಪಮಾನದಿಂದ ಹೈರಣರಾದ ಸಾರ್ವಜನಿಕರು ಮಜ್ಜಿಗೆಯನ್ನು ಕುಡಿದು ದೇಹದ ದಣಿವಾರಿಸಿಕೊಂಡರು. ಕಾರ್ಯಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಲಕ್ಷ್ಮೀ ಸ್ಟುಡಿಯೋ ಮಾಲೀಕ ಶೇಖರ್, ಫ್ರೆಂಡ್ಸ್ ಮೊಬೈಲ್ ಸರ್ವಿಸ್ ಮಾಲೀಕ ರಾಘವ, ಇಂಚರ ಸ್ಟುಡಿಯೋದ ಕುಮಾರ್, ಪ್ರಕಾಶ್, ಹರ್ಷ ಗ್ರಾಫಿಕ್ಸ್ ಮಾಲೀಕರು ಹಾಗೂ ಮೋಹನ್ ಭಾಗವಹಿಸಿ ಮಜ್ಜಿಗೆಯನ್ನು ವಿತರಿಸಿದರು.



## ಕಲಾವಿದರಿಗೆ ಡಾ. ರಾಜಕುಮಾರ್ ದೇವರಿದ್ದಂತೆ.



ಚಾಮರಾಜನಗರ, ಕನ್ನಡ ನಾಡು–ನುಡಿ, ಜಲ, ಭಾಷೆಗೆ ಹೋರಾಟ ನಡೆಸುವ ಹೋರಾಟಗಾರರು ಹಾಗೂ ಕಲಾವಿದರಿಗೆ ಡಾ. ರಾಜಕುಮಾರ್ ದೇವರಿದ್ದಂತೆ. ಕನ್ನಡಿಗರ ಸಾರ್ವಭೌಮ ವರನಟ ಡಾ. ರಾಜಕುಮಾರ್ ಮರೆಯಲಾಗದ ವ್ಯಕ್ತಿತ್ವ ಎಂದು ಹಿರಿಯ ಕನ್ನಡ ಚಳುವಳಿಗಾರ ಶಾ. ಮುರಳಿ ತಿಳಿಸಿದರು.

ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ. ರಾಜಕುಮಾರ್ ಜನ್ಮದಿನ ಹಾಗೂ ಅವರ ಕೊಡುಗೆಗಳ ಕುರಿತು ಮಾತನಾಡುತ್ತಾ ಕೋಟ್ಯಾಂತರ ಕನ್ನಡಿಗರಿಗೆ ಹಾಗೂ ಕಲೆಯನ್ನು ಪ್ರೀತಿಸುವ ಜನತೆಗೆ ಡಾ.ರಾಜಕುಮಾರ್ ಅವರು ಸದಾ ಕಾಲ ಸ್ಫೂರ್ತಿದಾಯಕರು. ರಾಜಕುಮಾರ್ ಅವರು ಜಗತ್ತು ಕಂಡ ಅದ್ಭುತ ನಟ. ಅವರ ವಿನಯ, ಸರಳತೆ, ಸೌಜನ್ಯ, ಪ್ರೀತಿ ವಿಶ್ವಾಸ ಕನ್ನಡಿಗರಿಗೆ ಬಹುದೊಡ್ಡ ಶಕ್ತಿ ಎಂದು ತಿಳಿಸಿ ಕನ್ನಡ ಚಲನಚಿತ್ರರಂಗ ಇಡೀ ಭಾರತ ಚಿತ್ರರಂಗಕ್ಕೆ ಅಮೂಲ್ಯವಾದ ಚಲನಚಿತ್ರಗಳನ್ನು ರಾಜಕುಮಾರ್ ರವರ ಮೂಲಕ ನೀಡಿದೆ. ಕನ್ನಡದ ಜ್ವಲಂತ ಸಮಸ್ಯೆಯಾಗಿದ್ದ ಗೋಕಾಕ್ ಚಳುವಳಿಯಲ್ಲಿ ಭಾಗವಹಿಸಿ ಲಕ್ಷಾಂತರ ಕನ್ನಡಿಗ ಹೋರಾಟಗಾರರನ್ನು ಸೃಷ್ಟಿಸಿದವರು. ನಾಡು ನುಡಿ ಜಲ ಭಾಷೆಯ ವಿಚಾರದಲ್ಲಿ ಯಾವುದೇ ರಾಜಿಯಾಗದ ಏಕೈಕ ಶ್ರೇಷ್ಠ ವ್ಯಕ್ತಿ ರಾಜಕುಮಾರ್ ಎಂದು ತಿಳಿಸಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಡಾ. ರಾಜಕುಮಾರ್ ಅವರು ವಿಶ್ವ ಶ್ರೇಷ್ಠ ನಟರು ಅವರ ಅಭಿನಯ ಮರೆಯಲಾಗದು. ಅವರ ಚಲನಚಿತ್ರದ ವಿಷಯಗಳು, ನಟನೆ ಜೀವಂತಿಕೆಯ ಪ್ರತೀಕವಾಗಿತ್ತು. ಚಾಮರಾಜನಗರವೆಂದರೆ ರಾಜಕುಮಾರ್ ಅವರಿಗೆ ಸ್ವರ್ಗದ ಬಾಗಿಲಾಗಿತ್ತು. ಕನ್ನಡ ಚಿತ್ರರಂಗವನ್ನು ಸದಾ ಕಾಲ ಪ್ರೀತಿಸಿದ ರಾಜಕುಮಾರ ಅವರು ಶಾಶ್ವತವಾಗಿ ಹೃದಯದಲ್ಲಿ ನೆಲೆಸಿದ್ದಾರೆ. ಎಂದು ತಿಳಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಪದ್ಮ ಪುರುಷೋತ್ತಮ್ ಮಾತನಾಡಿದರು.

ಕನ್ನಡ ಚಳುವಳಿಗಾರ ರಾಜಗೋಪಾಲ್ ಕಾರ್ಯಕ್ರಮವನ್ನು ಉದ್ಘಾಟಿಸಿ ಶುಭ ಕೋರಿದರು. ಕನ್ನಡ ಸಾಹಿತ್ಯ ಪರಿಷತ್ತಿನ ರವಿಚಂದ್ರಪ್ರಸಾದ್ ಕಹಳೆ ರಾಜಕುಮಾರ್ ಕುರಿತು ಕವನವನ್ನು ವಾಚಿಸಿದರು. ಡಾ. ರಾಜಕುಮಾರ್ ಅವರ ಗೀತ ಗಾಯನವನ್ನು ಏರ್ಪಡಿಸಲಾಗಿತ್ತು. ಕನ್ನಡ ಸಾಹಿತ್ಯ ಪರಿಷತ್ತಿನ ಶಿವಲಿಂಗ ಮೂರ್ತಿ, ಬಿಕೆ ಆರಾಧ್ಯ, ಸುರೇಶ್ ಗೌಡ, ಸರಸ್ವತಿ, ಗೀತಾ, ಲಕ್ಷ್ಮೀನರಸಿಂಹ, ವಿಜಯಲಕ್ಷ್ಮಿ, ಅರುಣ್ ಮುಂತಾದವರು ಉಪಸ್ಥಿತರಿದ್ದರು.

## ಮೇ 1ಕ್ಕೆ ಎಸ್.ಎಂ.ಕೃಷ್ಣ ಜನ್ಮ ದಿನ

ಮೈಸೂರು: ಹೆಬ್ಬಾಳು ಫೌಂಡೇಷನ್ ಹಾಗೂ ಎಸ್.ಎಂ.ಕೃಷ್ಣ ಅಭಿಮಾನಿಗಳ ಬಳಗದ ವತಿಯಿಂದ ಮೇ 1 ರ ಬೆಳಗ್ಗೆ 9.30ಕ್ಕೆ ಗೋಕುಲಂ 2 ನೇ ಹಂತ ಇಂಟರ್ ನ್ಯಾಷನಲ್ ಯೂತ್ ಹಾಸ್ಟೆಲ್‌ನಲ್ಲಿ ಎಸ್.ಎಂ. ಕೃಷ್ಣ ಅವರ 94 ನೇ ಜನ್ಮದಿನಾಚರಣಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಫೌಂಡೇಷನ್ ಅಧ್ಯಕ್ಷ ಕೆ.ಎಂ. ಬಸವೇಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸೋಮೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ಎಂಎಲ್ಸಿ ಅಡಗೂರು ಎಚ್. ವಿಶ್ವನಾಥ್ ಅಧ್ಯಕ್ಷತೆ ವಹಿಸುವರು, ಮಾಜಿ ಶಾಸಕ ಮರಿತಿಬ್ಬೇಗೌಡ ಅತಿಥಿಗಳಾಗಿರುವರು ಎಂದರು. ನಾಡು ಕಂಡ ಧೀಮಂತ ರಾಜಕಾರಣಿಗಳಲ್ಲಿ ದಿ.ಎಸ್.ಎಂ. ಕೃಷ್ಣ ಒಬ್ಬರಾಗಿದ್ದಾರೆ. ತಮ್ಮ 50– 60 ವರ್ಷಗಳ ಸುದೀರ್ಘ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅನೇಕ ಹುದ್ದೆ ಅಲಂಕರಿಸಿದ್ದರು, ರಾಜ್ಯ ಹಾಗೂ ಕೇಂದ್ರದ ನಾಲ್ಕೂ ಸದನಗಳಲ್ಲಿ ಸದಸ್ಯರಾಗಿದ್ದ ಕೆಲವೇ ಮಂದಿಯಲ್ಲಿ ಇವರೂ ಒಬ್ಬರು. ವಿರೋಧ ಪಕ್ಷ, ಆಡಳಿತ ಪಕ್ಷಗಳಲ್ಲಿಯೂ ಇದ್ದುದಲ್ಲದೆ, ಡಿಸಿಎಂ, ಸಿಎಂ ಆಗಿ ರಾಜ್ಯ ರಾಜಕಾರಣವನ್ನು ಎತ್ತರಕ್ಕೆ ಕೊಂಡೊಯ್ದರು. ಬೆಂಗಳೂರ ಸಿಲಿಕಾನ್ ಸಿಟಿ ಎಂಬ ಮಾದರಿ ನಗರವಾಗಿ ರೂಪುಗೊಳ್ಳಲು ಕಾರಣರಾದರು ಎಂದು ವಿವರಿಸಿದರು.

ಬೆಳಗೊಳ ಸುಬ್ರಹ್ಮಣ್ಯ, ಲಿಂಗರಾಜೇಗೌಡ, ವೆಂಕಟಸುಬ್ಬಯ್ಯ ಇದ್ದರು.

# ಚಾ.ನಗರ ನಗರಸಭೆ ವಿರುದ್ಧ ಪ್ರತಿಭಟನೆ




ಚಾಮರಾಜನಗರ, ನಗರಸಭೆಯ ಅಧಿಕಾರಿಗಳ ನಿರ್ಲಕ್ಷ್ಯ ದಿಂದ ಕುಡಿಯುವ ನೀರು, ಸ್ವಚ್ಛತೆ ಸೇರಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳು ಸಂಪೂರ್ಣವಾಗಿ ನೆನೆಗುದಿಗೆ ಬಿದ್ದಿದೆ ಎಂದು ಆರೋಪಿಸಿ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು

ಲ್ಲಿನ ನಗರಸಭೆಯಲ್ಲಿ ಕುಡಿಯುವ ನೀರು, ಸ್ವಚ್ಛತೆ ಹಾಗೂ ನಗರಸಭೆಯ ಕೆಲಸ ಕಾರ್ಯಗಳು ಸಂಪೂರ್ಣ ಕುಂಠಿತಗೊಂಡಿದ್ದು ಇದನ್ನು ಸರಿಪಡಿಸುವಂತೆ ಒತ್ತಾಯಿಸಿ ವಿವಿಧ ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ನಗರಸಭೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜನಗರ ನಗರಸಭೆಯಲ್ಲಿ ಸಾರ್ವಜನಿಕರ ಕೆಲಸಕಾರ್ಯಗಳು ಬೇಗನೆ ಆಗದೆ, ಸಾರ್ವಜನಿಕರು ತತ್ತರಿಸಿ ಹೋಗಿದ್ದಾರೆ. ಪಟ್ಟಣದ 31 ವಾರ್ಡ್ ಗಳಲ್ಲೂ ಚರಂಡಿಗಳಲ್ಲಿ ಮತ್ತು ರಸ್ತೆಗಳಲ್ಲಿ ಸ್ವಚ್ಛತೆ ಇಲ್ಲದೆ ಚಾಮರಾಜನಗರ ಪಟ್ಟಣ ಸಂಪೂರ್ಣ ಹದಗೆಟ್ಟಿದೆ ಮತ್ತು ಕುಡಿಯುವ ನೀರಿನ ಸಮಸ್ಯೆಯು ಪ್ರತಿಯೊಂದು ವಾರ್ಡ್‌ಗಳಲ್ಲೂ ತೀವ್ರ ಸ್ವರೂಪ ಪಡೆದಿದ್ದು ಜನರು ತೀರಾ ತೊಂದರೆಗೆ ಸಿಲುಕಿದ್ದಾರೆ ಮತ್ತು ನಗರಸಭೆ ಕಛೇರಿಯಲ್ಲಿ ಸಾರ್ವಜನಿಕರ ಕೆಲಸಗಳು ಅರ್ಜಿ ಕೊಟ್ಟು ವರ್ಷಗಳು ಆದರೂ ಸಹ ಕೆಲಸಗಳು ಆಗುತ್ತಿಲ್ಲ. ಸಾರ್ವಜನಿಕರಿಗೆ ಅವರ ಆಸ್ತಿಗಳಿಗೆ ಕಂದಾಯ ಪಾವತಿಸಿದರೂ ಸಹ ಅದನ್ನು ಕಛೇರಿಯ ಕಡತದಲ್ಲಿ ದಾಖಲು ಮಾಡಿಕೊಳ್ಳುತ್ತಿಲ್ಲ ಮತ್ತು ತಾಂತ್ರಿಕ ವಿಭಾಗದಲ್ಲೂ ಸಹ ಸಾರ್ವಜನಿಕರು ಎಷ್ಟೇ ದೂರನ್ನು ಕೊಟ್ಟರೂ ಸಹ ಯಾವುದೇ ಕೆಲಸ ಕಾರ್ಯಗಳು ಆಗುತ್ತಿಲ್ಲ ಮತ್ತು ಸಾರ್ವಜನಿಕರು ತಮ್ಮ ಆಸ್ತಿಗಳನ್ನು ಖಾತೆ ಬದಲಾವಣೆ ಮಾಡಿಕೊಂಡು ಇ–ಸ್ವತ್ತು ಪಡೆಯಲು ನಗರಸಭೆಯ ಕಛೇರಿಗೆ ಸುತ್ತಿ ಸುತ್ತಿ ನರಕ ಯಾತನೆಯನ್ನು ಅನುಭವಿಸುತ್ತಿದ್ದಾರೆ ಮತ್ತು ಕಛೇರಿಯಲ್ಲಿನ ಯಾವುದೇ ಅಧಿಕಾರಿಗಳು ಸಾರ್ವಜನಿಕರಿಗೆ ಗೌರವವನ್ನು ಕೊಡದೆ ದುರಹಂಕಾರದಿಂದ ವರ್ತಿಸುತ್ತಿದ್ದಾರೆ ಎಂದರು

# ಕೆಡಿ ಬಿಡುಗಡೆ: ಅಭಿಮಾನಿಗಳ ಸಂಭ್ರಮ



ಚಾಮರಾಜನಗರ, ಧ್ರುವ ಸರ್ಜಾ ನಟನೆಯ ಕೆಡಿ ಚಿತ್ರ ಇಂದು ರಾಜ್ಯಾದ್ಯಂತ ತೆರೆ ಕಂಡ ಹಿನ್ನೆಲೆಯಲ್ಲಿ ನಗರದಲ್ಲಿ ಧ್ರುವ ಸರ್ಜಾ ಅಭಿಮಾನಿಗಳು ಸಂಭ್ರಮಾಚರಣೆ ಮಾಡಿದರು.

ನಗರದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿರುವ ಶ್ರೀಬಸವೇಶ್ವರ ಚಿತ್ರಮಂದಿರದಲ್ಲಿ ಧ್ರುವ ಫ್ಯಾನ್ಸ್ ಅಯೋಸಿಯೇಷನ್ ವತಿಯಿಂದ ಅಭಿಮಾನಿಗಳು ಕೆಡಿ ಚಿತ್ರದ ಫ್ಲೆಕ್ಸ್, ಕಟೌಟ್ ಹಾಕಿ ಅಲಂಕಾರ ಮಾಡಿ ಚಿರಂಜೀವಿ ಸರ್ಜಾ ಭಾವಚಿತ್ರವಿಟ್ಟು ಪೂಜೆ ಸಲ್ಲಿಸಿ, 2 ನಿಮಿಷಗಳ ಕಾಲ ಮೌನಾಚರಣೆ ಮಾಡಿದರು. ನಂತರ ಸಾರ್ವಜನಿಕರು ಅನ್ನಸಂತರ್ಪಣೆ ಮಾಡಿದರು. ಧ್ರುವ ಫ್ಯಾನ್ಸ್ ಅಯೋಸಿಯೇಷನ್ ಅಧ್ಯಕ್ಷ ಸುನೀಲ್, ಧ್ರುವ ಸರ್ಜಾ ನಟನೆಯ ಕೆಡಿ ಚಿತ್ರವು ಇಂದು ರಾಜ್ಯಾದ್ಯಂತ ತೆರೆ ಕಂಡ ಹಿನ್ನೆಲೆಯಲ್ಲಿ ಅಭಿಮಾನಿಗಳು ರಾಜ್ಯಾದ್ಯಂತ ಅದ್ದೂರಿಯಾಗಿ ಸಂಭ್ರಮಾಚರಣೆ ಮಾಡುತ್ತಿದ್ದಾರೆ ಅದೇ ರೀತಿಯಲ್ಲಿ ಚಾಮರಾಜನಗರ ದಲ್ಲೂ ಕೂಡ ಕೆಡಿ ಚಿತ್ರ ಪ್ರದರ್ಶನಗೊಳ್ಳುತ್ತಿರುವ ಶ್ರೀ ಬಸವೇಶ್ವರ ಚಿತ್ರಮಂದಿರದ ಮುಂಭಾಗದಲ್ಲಿ ಅಯೋಸಿಯೇಷನ್ ವತಿಯಿಂದ ಚಿರಂಜೀವಿ ಸರ್ಜಾ ್ಅವರ ಭಾವಚಿತ್ರವನ್ನಿಟ್ಟು ಪೂಜೆ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಧ್ರುವ ಸರ್ಜಾ ನಟನೆಯ ಕೆಡಿ ಚಿತ್ರವು ಶತಮಾನೋತ್ಸವ ಆಚರಿಸಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಧ್ರುವ ಪ್ಯಾನ್ಸ್ ಅಯೋಸಿಯೇಷನ್ ನ ಗುರು, ಪ್ರಭು, ಮಲ್ಲು, ಮನೋಜ್, ಅರ್ಜುನ, ಮಣಿರಾಜು, ಮುರುಳಿ, ಪ್ರೇಮ್, ವಿಶ್ವ, ಇತರರು ಹಾಜರಿದ್ದರು.

## ಮೇ 2ರಂದು ವಿಚಾರ ಸಂಕಿರಣ

ಮೈಸೂರು: ಕೆ.ಆರ್. ಮೊಹಲ್ಲಾದಲ್ಲಿರುವ ನರೆಡ್ಕೋ ವತಿಯಿಂದ ಮೇ 2 ರ ಸಂಜೆ 6.30ಕ್ಕೆ ನಗರದ ಸದರ್ನ್ ಸ್ಟಾರ್ ಹೋಟೆಲ್‌ನಲ್ಲಿ ಟಿಡಿಆರ್ ಮತ್ತು ಬಫರ್ ಝೋನ್ ಕುರಿತ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಡಾ.ಎಂ.ಡಿ. ರಾಘವೇಂದ್ರ ಪ್ರಸಾದ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರಾಜ್ಯ ಸರ್ಕಾರದ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ಹೆಚ್ಚುವರಿ ನಿರ್ದೇಶಕರಾದ ಎಂ.ಸಿ. ಶಶಿಕುಮಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಈ ಕುರಿತು ಅರಿವು ಮೂಡಿಸಲಿದ್ದಾರೆ. ತಾವು. ವಿ.ಸಿ. ರವಿಕುಮಾರ್, ಎ.ಪಿ. ನಾಗೇಶ್, ಪಿ.ಎಸ್. ಗಗನ್ ದೀಪ್, ಡಾ.ಎಸ್. ಎಚ್. ಜಗದೀಶ್, ಪಿ. ನಂಜುಂಡಸ್ವಾಮಿ ಇನ್ನಿತರರು ಹಾಜರಿರುವರು. ಆಸಕ್ತರು ಪಾಲ್ಗೊಂಡು ಟಿಡಿಆರ್ ಮತ್ತು ಬಫರ್ ಝೋನ್ ಕುರಿತ ಇರುವ ಗೊಂದಲ ಪರಿಹರಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು. ಪದಾಧಿಕಾರಿಗಳಾದ ವಿ.ಸಿ. ರವಿಕುಮಾರ್, ಎಸ್.ಎಚ್. ಜಗ ದೀಶ್, ಮ.ವಿ. ರಾಮ್‌ಪ್ರಸಾದ್, ಎಚ್.ಎಸ್.ವಿನೋದ್ ರಾಶಿಂಕರ್ ಇದ್ದರು.




### ಆರ್.ಟಿ.ಓ ಮಲ್ಲಿಕಾರ್ಜುನ್ ಹೇಳಿಕೆ

# ಮಕ್ಕಳಿಗೆ ಆಧುನಿಕ ಶಿಕ್ಷಣದ ಜೊತೆಗೆ ಸಂಸ್ಕಾರ ಅಗತ್ಯ



ಕೆ.ಆರ್.ಪೇಟೆ ತಾಲ್ಲೂಕಿನ ಕಿಕ್ಕೇರಿ ಹೋಬಳಿ ಬೆಡದಹಳ್ಳಿ ಗ್ರಾಮದ ಶ್ರೀ ಪಂಚಭೂತೇಶ್ವರ ಮಠದಲ್ಲಿ ಆಯೋಜಿಸಲಾಗಿದ್ದ ವಸತಿ ಸಹಿತ 'ಸಂಸ್ಕಾರ ಜ್ಞಾನ ಶಿಬಿರ'ದ ಸಮಾರೋಪ ಸಮಾರಂಭವು ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್, "ಇಂದಿನ ಮಕ್ಕಳು ಮೊಬೈಲ್ ಮತ್ತು ಟಿವಿಗೆ ದಾಸರಾಗುತ್ತಿದ್ದು, ಬಾಲ್ಯದ ನೈಜ ಸೌಂದರ್ಯ ನಶಿಸುತ್ತಿದೆ. ಈ ಸಂದರ್ಭದಲ್ಲಿ ಮಠವು ಮಕ್ಕಳಿಗೆ ಕಲೆ, ಸಾಹಿತ್ಯ ಹಾಗೂ ಸಂಸ್ಕಾರದ ಅರಿವು ಮೂಡಿಸುತ್ತಿರುವುದು ಶ್ಲಾಘನೀಯ. ಇಂತಹ ಸೃಜನಾತ್ಮಕ ಚಟುವಟಿಕೆಗಳು ಸದೃಢ ಸಮಾಜದ ನಿರ್ಮಾಣಕ್ಕೆ ಪೂರಕ," ಎಂದರು.

ಮಠದ ಪೀಠಾಧ್ಯಕ್ಷರಾದ ಶ್ರೀ ರುದ್ರಮುನಿಸ್ವಾಮಿಗಳು ಆಶೀರ್ವಚನ ನೀಡಿ, "ಕೇವಲ ಶಾಲಾ ಶಿಕ್ಷಣದಿಂದ ಜೀವನ ಪೂರ್ಣವಾಗುವುದಿಲ್ಲ. ಮಕ್ಕಳಿಗೆ ಸನಾತನ ಧರ್ಮ, ಸಂಸ್ಕೃತಿ ಹಾಗೂ ತಂದೆ–ತಾಯಿಯನ್ನು ಗೌರವಿಸುವ ಸಂಸ್ಕಾರ ನೀಡುವುದು ಇಂದಿನ ಅಗತ್ಯವಾಗಿದೆ," ಎಂದು ತಿಳಿಸಿದರು.

ಪ್ರಾಂಶುಪಾಲ ಯತೀಶ್ ಮಾತನಾಡಿ, "ಭಾರತೀಯ ಜೀವನ ಪದ್ಧತಿಯಲ್ಲಿ ಅಂಕ ಮತ್ತು ಹಣಕ್ಕಿಂತ ಗುಣಗಳೇ ಶ್ರೇಷ್ಠ. ಸಂಸ್ಕಾರವಂತ ವ್ಯಕ್ತಿಗಳೇ ಸಮಾಜದ ನಿಜವಾದ ಆಸ್ತಿ," ಎಂದರು.

ಶಿಬಿರದಲ್ಲಿ ಪಾಲ್ಗೊಂಡ ಮಕ್ಕಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಅಧ್ಯಕ್ಷ ಸುಜೇಂದ್ರ ಕುಮಾರ್, ಮಾಜಿ ಅಧ್ಯಕ್ಷ ಸುಬ್ರಮಣ್ಯ, ಹಿರಿಯ ಪತ್ರಕರ್ತ ಹರಿಚರಣ ತಿಲಕ್ ಸೇರಿದಂತೆ ಹಲವು ಗಣ್ಯರು ಪೋಷಕರು ಉಪಸ್ಥಿತರಿದ್ದರು.

# ಸಿಲಿಂಡರ್ ಸ್ಫೋಟ: ಶಾಸಕ ಶ್ರೀವತ್ಸರಿಂದ ಪರಿಹಾರದ ಭರವಸೆ



ಮೈಸೂರು: ನಿನ್ನೆ ತಡರಾತ್ರಿ ವಾರ್ಡ್ ನಂಬರ್ 43ರ ಟಿ.ಕೆ.ಲೇಔಟ್ ನ ನಾಲ್ಕನೇ ಕ್ರಾಸ್ ನ ಮನೆಯೊಂದರಲ್ಲಿ ಸಿಲಿಂಡರ್ ಸ್ಫೋಟಗೊಂಡು ಹಾನಿಯಾಗಿರುವ ವಿಷಯ ತಿಳಿದು ಸ್ಥಳಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಜಿಲ್ಲಾಧಿಕಾರಿಗಳ ಜತೆಗೂಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಹಾನಿಗೊಳಗಾದ ಮನೆಯ ನಿವಾಸಿ ಅಮೃತ್ ಹಾಗೂ ಅವರ ಕುಟುಂಬದ ಸದಸ್ಯರಿಗೆ ಧೈರ್ಯ ಹೇಳಿ ಸರ್ಕಾರದಿಂದ ಯಾವ ರೀತಿಯ ಸಹಾಯ ಮಾಡಬಹುದು. ಆ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಶಾಸಕ ಶ್ರೀವತ್ಸ ತಿಳಿಸಿದರು. ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಸಹ ಪರಿಹಾರ ಕಲ್ಪಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯರಾದ ಗೋಪಿ, ಜಗದೀಶ್, ಬಿಜೆಪಿ ಅಧ್ಯಕ್ಷ ಗೋಪಾಲ್ ರಾಜೇ ಅರಸ್, ಮುಖಂಡರಾದ ಪೂರ್ಣಿಮಾ ಚಂದ್ರಪ್ಪ, ಕೆಂಚ ಮಧು, ಬಸವರಾಜು, ರಮೇಶ್ ಕಣ್ಣು, ಲೋಹಿತ್ ಶರ್ಮಾ, ಅರುಣ್, ವಲಯ ಕಚೇರಿ 3ರ ಸಹಾಯಕ ಆಯುಕ್ತ ಸಂದೀಪ್, ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ ಇದ್ದರು.

# ಮೇ 1ಕ್ಕೆ ಎಸ್.ಎಂ.ಕೃಷ್ಣ ಜನ್ಮ ದಿನಾಚರಣೆ

ಮೈಸೂರು: ಹೆಬ್ಬಾಳು ಫೌಂಡೇಷನ್ ಹಾಗೂ ಎಸ್.ಎಂ.ಕೃಷ್ಣ ಅಭಿಮಾನಿಗಳ ಬಳಗದ ವತಿಯಿಂದ ಮೇ 1 ರ ಬೆಳಗ್ಗೆ 9.30ಕ್ಕೆ ಗೋಕುಲಂ 2 ನೇ ಹಂತ ಇಂಟರ್ ನ್ಯಾಷನಲ್ ಯೂತ್ ಹಾಸ್ಟೆಲ್‌ನಲ್ಲಿ ಎಸ್.ಎಂ. ಕೃಷ್ಣ ಅವರ 94 ನೇ ಜನ್ಮದಿನಾಚರಣಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಫೌಂಡೇಷನ್ ಅಧ್ಯಕ್ಷ ಕೆ.ಎಂ. ಬಸವೇಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸೋಮೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ಎಂಎಲ್ಸಿ ಅಡಗೂರು ಎಚ್. ವಿಶ್ವನಾಥ್ ಅಧ್ಯಕ್ಷತೆ ವಹಿಸುವರು, ಮಾಜಿ ಶಾಸಕ ಮರಿತಿಬ್ಬೇಗೌಡ ಅತಿಥಿಗಳಾಗಿರುವರು ಎಂದರು. ನಾಡು ಕಂಡ ಧೀಮಂತ ರಾಜಕಾರಣಿಗಳಲ್ಲಿ ದಿ.ಎಸ್.ಎಂ. ಕೃಷ್ಣ ಒಬ್ಬರಾಗಿದ್ದಾರೆ. ತಮ್ಮ 50–60 ವರ್ಷಗಳ ಸುದೀರ್ಘ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅನೇಕ ಹುದ್ದೆ ಅಲಂಕರಿಸಿದ್ದರು, ರಾಜ್ಯ ಹಾಗೂ ಕೇಂದ್ರದ ನಾಲ್ಕೂ ಸದನಗಳಲ್ಲಿ ಸದಸ್ಯರಾಗಿದ್ದ ಕೆಲವೇ ಮಂದಿಯಲ್ಲಿ ಇವರೂ ಒಬ್ಬರು. ವಿರೋಧ ಪಕ್ಷ, ಆಡಳಿತ ಪಕ್ಷಗಳಲ್ಲಿಯೂ ಇದ್ದುದಲ್ಲದೆ, ಡಿಸಿಎಂ, ಸಿಎಂ ಆಗಿ ರಾಜ್ಯ ರಾಜಕಾರಣವನ್ನು ಎತ್ತರಕ್ಕೆ ಕೊಂಡೊಯ್ದರು. ಬೆಂಗಳೂರ ಸಿಲಿಕಾನ್ ಸಿಟಿ ಎಂಬ ಮಾದರಿ ನಗರವಾಗಿ ರೂಪುಗೊಳ್ಳಲು ಕಾರಣರಾದರು. ಹೀಗಾಗಿ ವಿರ ಸ್ಮರಣೆ ಹಿನ್ನೆಲೆಯಲ್ಲಿ ಪ್ರತಿ ವರ್ಷದಂತೆ ಈ ಬಾರಿಯೂ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವಿವರಿಸಿದರು.

ಬೆಳಗೊಳ ಸುಬ್ರಹ್ಮಣ್ಯ, ಲಿಂಗರಾಜೇಗೌಡ, ವೆಂಕಟಸುಬ್ಬಯ್ಯ ಇದ್ದರು.




# ಮೇ 3 ರ ಸಂಜೆ ಸಂಗೀತ ಕಾರ್ಯಕ್ರಮ

ಮೈಸೂರು: ಆರ್‌ಎಂಪಿ ಕ್ವಾಟ್ರಸ್ ಹತ್ತಿರದ ಅರುಣ ರಾಗ ಕ್ರಿಯೇಷನ್ಸ್ ವತಿಯಿಂದ ಡಾ.ರಾಜ್‌ಕುಮಾರ್ ಹಾಗೂ ಡಾ.ಪುನೀತ್ ರಾಜ್‌ಕಮಾರ್ ಹುಟ್ಟುಹಬ್ಬ ಪ್ರಯುಕ್ತ ಮೇ 3 ರ ಸಂಜೆ 4.30ಕ್ಕೆ ರಾಜ್ ಸಂಗಮ, ಗಿರಿಕನ್ಯೆ ಸಂಭ್ರಮ ಕೊರೋಕೆ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಡಾ. ರೇಖಾ ಅರುಣ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ವೇಳೆ ಡಾ. ರಾಜ್‌ಕುಮಾರ್, ಡಾ. ಪುನೀತ್ ರಾಜ್‌ಕುಮಾರ್ ಹಾಗೂ ಡಾ. ಜಯಮಾಲಾ ಅವರ ಚಿತ್ರಗಳ ಗೀತೆ ಹಾಡಲಾಗುವುದು. ಕಾರ್ಯಕ್ರಮ ಮೈಸೂರು ಬಿಲ್ರ?ಸ್ ಅಸೋಸಿಯೇಷನ್‌ನಲ್ಲಿ ನಡೆಯಲಿದೆ. ಡಾ. ಜಯಮಾಲಾ ಉದ್ಘಾಟಿಸಲಿದ್ದಾರೆ. ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇನ್ನಿತರರು ಅತಿಥಿಗಳಾಗಿರುವರು. ತಾವು, ಗುರುರಾಜ್, ಜಗದೀಶ್, ಸೋಮಶೇಖರ್, ಮನ್‌ಮೋಹನ್ ರಾಜ್, ಡಾ. ಗಣೇಶ್, ಡಾ. ಸುದೀಂಧ್ರ, ಪ್ರೇಮ್, ವಿನಯ್, ವಾದಿರಾಜ್, ನಾರಾಯಣಸ್ವಾಮಿ ಪ್ರಿಯಾ, ಅಪೂರ್ವ, ಶಾಂತಕುಮಾರಿ ಹಾಡಲಿದ್ದಾರೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದರು. ಎಸ್. ಪ್ರಿಯಾ, ಲಯನ್ ಪ್ರಮೀಳಾ, ಗೋಲ್ಡ್ ಸುರೇಶ್, ಮಿಮಿಕ್ರಿ ಶ್ಯಾಂ, ಅಜಯ್ ಶಾಸ್ತ್ರಿ ಇದ್ದರು.



# ಮಳೆಗೆ ಬಾಳೆ ಬೆಳೆ ನಾಶ

ಗುಂಡ್ಲುಪೇಟೆ, ಏ.30–ತಾಲೂಕಿನಲ್ಲಿ ದಿಢೀರನೆ ಬೀಸಿದ ಗಾಳಿ ಮತ್ತು ಮಳೆಯ ಆರ್ಭಟಕ್ಕೆ ರೈತರೊಬ್ಬರ ಆಸೆಯ ಗೋಪುರ ಕುಸಿದು ಬಿದ್ದಿದೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ಬಾಳೆ ಬೆಳೆ ನೆಲಸಮವಾಗಿದೆ.

ತಾಲೂಕಿನ ಬೊಮ್ಮಲಾಪುರ ಗ್ರಾಮದಲ್ಲಿ ಈ ದುರ್ಘಟನೆ ಸಂಭವಿಸಿದೆ. ಗ್ರಾಮದ ರೈತ ರಾಜಪ್ಪ ಎಂಬುವವರಿಗೆ ಸೇರಿದ ಬಾಳೆ ತೋಟ ಭಾರಿ ಗಾಳಿ–ಮಳೆಗೆ ಸಿಲುಕಿ ಸಂಪೂರ್ಣವಾಗಿ ಹಾನಿಯಾಗಿದೆ.

### ಅಪಾರ ನಷ್ಟ

ಸುಮಾರು 3,000ಕ್ಕೂ ಹೆಚ್ಚು ಬಾಳೆ ಗಿಡಗಳು ಗಾಳಿಯ ರಭಸಕ್ಕೆ ನೆಲಕ್ಕುರುಳಿವೆ. ಬೆಳೆ ಕಟಾವಿಗೆ ಬರುವ ಹಂತದಲ್ಲಿದ್ದಾಗಲೇ ಈ ಅವಘಡ ಸಂಭವಿಸಿದ್ದು, ರೈತ ರಾಜಪ್ಪ ಅವರಿಗೆ ಲಕ್ಷಾಂತರ ರೂ. ಆರ್ಥಿಕ ನಷ್ಟವುಂಟಾಗಿದೆ.

### ರೈತನ ಅಳಲು

ಬಹಳ ಕಷ್ಟಪಟ್ಟು ಸಾಲ–ಸೋಲ ಮಾಡಿ ಬೆಳೆ ಬೆಳೆಸಿದ್ದೆವು. ಇನ್ನೇನು ಫಸಲು ಕೈಗೆ ಬರಬೇಕಿತ್ತು, ಅಷ್ಟರಲ್ಲೇ ಪ್ರಕೃತಿ ಮುನಿದು



ಎಲ್ಲವನ್ನೂ ಮಣ್ಣುಪಾಲು ಮಾಡಿದೆ ಎಂದು ರೈತ ಕಣ್ಣೀರು ಹಾಕಿದ್ದಾರೆ.

### ರೈತರ ಒತ್ತಾಯ

ಕಳೆದ ಕೆಲವು ದಿನಗಳಿಂದ ಜಿಲ್ಲೆಯ ಹಲವೆಡೆ ಅಕಾಲಿಕ ಮಳೆಯಾಗುತ್ತಿದ್ದು, ಬೊಮ್ಮಲಾಪುರ ಭಾಗದಲ್ಲಿ ಗಾಳಿಯ ವೇಗ ಹೆಚ್ಚಾಗಿದ್ದರಿಂದ ಬಾಳೆ ಬೆಳೆಗಾರರು ತತ್ತರಿಸಿಹೋಗಿದ್ದಾರೆ. ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ, ಬೆಳೆ ಹಾನಿಯ ವರದಿ ಸಿದ್ಧಪಡಿಸಿ ಶೀಘ್ರವಾಗಿ ಪರಿಹಾರ ಒದಗಿಸಬೇಕೆಂದು ಗ್ರಾಮಸ್ಥರು ಹಾಗೂ ರೈತರು ಒತ್ತಾಯಿಸಿದ್ದಾರೆ.

# ಬೌರಿಂಗ್ ಅವಘಡ ಎಚ್ಚರಿಕೆ ಗಂಟೆ: ಕೆವಿಎಂ

ಮೈಸೂರು: ಬೆಂಗಳೂರಿನ ಬೌರಿಂಗ್ ಕಾಂಪೌಂಡ್ ಕಟ್ಟಡ ಕುಸಿದು 7 ಮಂದಿ ಸಾವಿಗೀಡಾದ ಘಟನೆ ಮೈಸೂರು ನಗರಕ್ಕೆ ಎಚ್ಚರಿಕೆಯ ಗಂಟೆಯಾಗಿದೆ ಎಂದು ಮಾಜಿ ಪಾಲಿಕೆ ಸದಸ್ಯ ಕೆ.ವಿ.ಮಲ್ಲೇಶ್ ತಿಳಿಸಿದರು.



ನಗರದ ಪಾರಂಪರಿಕ ಕಟ್ಟಡಗಳು ನಿರ್ವಹಣೆಯ ಕೊರತೆಯಿಂದ ಅಪಾಯಕ್ಕೆ ಗುರಿಯಾಗುತ್ತಿದ್ದು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಒಳಚರಂಡಿ, ಮಳೆ ನೀರು ಕಾಲುವೆಗಳ ದುರವಸ್ಥೆಯಿಂದ ಮಳೆಗಾಲದಲ್ಲಿ ನೀರು ನಿಲ್ಲುವ ಸಮಸ್ಯೆ ಹೆಚ್ಚಾಗುತ್ತಿದೆ ಎಂದರು. ಇದೇ ವೇಳೆ, ಒಣಗಿದ ಮರಗಳು ಹಾಗೂ ಅಪಾಯಕಾರಿಯಾದ ಕೊಂಬೆಗಳನ್ನು ತೆರವುಗೊಳಿಸಿ, ರಸ್ತೆ ಗುಂಡಿಗಳು, ಪಾದಚಾರಿ ಮಾರ್ಗದ ದುರಸ್ತಿ ಕಾರ್ಯಗಳನ್ನು ಯುದ್ಧೋಪಾದಿಯಲ್ಲಿ ಕೈಗೊಳ್ಳಬೇಕು ಎಂದು ಹೇಳಿದರು.

ಇಲ್ಲವಾದರೆ ಮುಂದಿನ ದಿನಗಳಲ್ಲಿ ಮತ್ತೊಂದು ದುರ್ಘಟನೆ ಸಂಭವಿಸುವ ಸಾಧ್ಯತೆ ಇದ್ದು, ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕಾಗಿದೆ.

ನಗರದ ಬಹುತೇಕ ರಸ್ತೆಗಳಲ್ಲಿನ ಒಳಚರಂಡಿ, ಮಳೆ ನೀರು ಚರಂಡಿ ಮತ್ತು ರಾಜಕಾಲುವೆಗಳಲ್ಲಿ ಕಸ, ಕಡ್ಡಿ, ಮಣ್ಣು ತುಂಬಿದ್ದು, ಮಳೆ ನೀರು ಸರಾಗವಾಗಿ ಹರಿಯಲು ಸಾಧ್ಯವಾಗದಂತಿದೆ. ಬೇಸಿಗೆಯಲ್ಲಿ ಅವುಗಳ ನಿರ್ವಹಣೆ ಮಾಡಿ, ಮಳೆಗಾಲಕ್ಕೆ ಸಜ್ಜಾಗಬೇಕಾದ ನಗರಪಾಲಿಕೆ ಮೈ ಮರೆತುಕುಳಿತಿದೆ. ರಸ್ತೆಗಳು ಗುಂಡಿ ಬಿದ್ದಿದ್ದು, ಸಾರ್ವಜನಿಕರು ಬಿದ್ದು ಸಾವು–ನೋವುಗಳು ಸಂಭವಿಸಿರುವ ಉದಾಹರಣೆಗಳು ಸಾಕಷ್ಟಿವೆ. ಇದನ್ನೆಲ್ಲ ನೋಡಿಯೂ ನೋಡದಂತೆ, ಜಾಣ ಕುರುಡರಂತೆ ವರ್ತಿಸುತ್ತಿರುವ ಅಧಿಕಾರಿಗಳನ್ನು ತಿವಿದು, ಎಚ್ಚರಿಸುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬೇಕು. ಮುಂದೆ ಅನಾಹುತ ಸಂಭವಿಸಿದರೆ ಬೇಜವಾಬ್ದಾರಿ ಅಧಿಕಾರಿಗಳನ್ನೇ ನೇರ ಹೊಣೆ ಮಾಡಬೇಕೆಂದು ನಾಗರಿಕರ ಪರವಾಗಿ ಆಗ್ರಹಿಸುವುದಾಗಿ ಹೇಳಿದರು.

# ಸಮರ್ಪಕ ಕಾರ್ಯನಿರ್ವಹಣೆಗೆ ಸೂಚನೆ

## ದ್ವಿತೀಯ ಪಿಯುಸಿ ಪರೀಕ್ಷೆ–2 ಹಿನ್ನೆಲೆ ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ

ಚಾಮರಾಜನಗರ, ದ್ವಿತೀಯ ಪಿಯುಸಿ ಪರೀಕ್ಷೆ–2 ಏಪ್ರಿಲ್ 30 ರಿಂದ ಮೇ 13ರವರೆಗೆ ನಡೆಯಲಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕಾರ್ಯ ಸಂಬಂಧ ನಿಯೋಜಿತ ಅಧಿಕಾರಿಗಳು ಯಾವುದೇ ಲೋಪವಿಲ್ಲದೆ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ 4 ಪರೀಕ್ಷಾ ಕೇಂದ್ರಗಳು ಇದ್ದು, ಒಟ್ಟು 1541 ಪುನರಾವರ್ತಿತಾ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಪರೀಕ್ಷೆಗಳು ನಡೆಯುವ ದಿನಾಂಕದಂದು ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತೆಯನ್ನು ಪರೀಕ್ಷಾ ಚಟುವಟಿಕೆಗಳಿಗೆ ಒದಗಿಸಬೇಕು. ಪರೀಕ್ಷಾ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯಕ್ಕೆ ತಕ್ಕಂತೆ ಮಹಿಳಾ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ತಿಳಿಸಿದ್ದಾರೆ.

ಆರೋಗ್ಯ ಇಲಾಖೆಯಿಂದ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಇಬ್ಬರು ಶುಶ್ರೂಷಕರನ್ನು ಪ್ರಥಮ ಚಿಕಿತ್ಸಾ ಕಿಟ್ ನೊಂದಿಗೆ ನೇಮಿಸಬೇಕು. ಪರೀಕ್ಷಾ ದಿನಗಳಂದು ಹಾಗೂ ವಿದ್ಯಾರ್ಥಿಗಳು ಅಭ್ಯಾಸ ಮಾಡಲು ತೊಂದರೆಯಾಗದಂತೆ ವಿದ್ಯುತ್ ಪೂರೈಸಲು ಚೆಸ್ಕಾಂ ಅಧಿಕಾರಿಗಳು ಕ್ರಮವಹಿಸಬೇಕೆಂದು ಸೂಚಿಸಿದ್ದಾರೆ.

ಜಿಲ್ಲೆಯ ತಾಲ್ಲೂಕಿನ ಅಂಚೆ ಕಚೇರಿಯು ಪರೀಕ್ಷಾ ದಿನಗಳಲ್ಲಿ ಪರೀಕ್ಷಾ ಕೇಂದ್ರಗಳಿಂದ ಸ್ವೀಕೃತಗೊಳ್ಳುವ ಗೌಪ್ಯ ವಸ್ತುಗಳನ್ನು ಸ್ವೀಕರಿಸಲು ಸಂಜೆ 5 ಗಂಟೆಯವರೆಗೂ ಕಾರ್ಯನಿರ್ವಹಿಸಬೇಕು. ಪರೀಕ್ಷಾ ದಿನಗಳಂದು ವಿದ್ಯಾರ್ಥಿಗಳು ಪರೀಕ್ಷಾ ಪ್ರವೇಶ ಪತ್ರ ತೋರಿಸಿ ಅವರ ಗ್ರಾಮಗಳಿಂದ ಕೆಎಸ್‌ಆರ್ಟಿಸಿ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಸಲು ಆದೇಶಿಸಲಾಗಿದೆ. ಚಾಮರಾಜನಗರ ಜಿಲ್ಲೆಯ ಎಲ್ಲಾ ಗ್ರಾಮಗಳಿಂದ ಪರೀಕ್ಷಾ ಕೇಂದ್ರಗಳಿಗೆ ಬರುವ ಪರೀಕ್ಷಾರ್ಥಿಗಳಿಗೆ ಉಚಿತವಾಗಿ ಪ್ರಯಾಣ ಸಲು ಬಸ್ಸಿನ ಸೌಲಭ್ಯವನ್ನು ಒದಗಿಸಲು ಕೆಎಸ್‌ಆರ್ಟಿಸಿ



### ದ್ವಿತೀಯ ಪಿಯುಸಿ ಪರೀಕ್ಷೆ–2 : ನಿಷೇಧಾಜ್ಞೆ

ದ್ವಿತೀಯ ಪಿಯುಸಿ ಪರೀಕ್ಷೆ–2 ಏಪ್ರಿಲ್ 30 ರಿಂದ ಮೇ 13ರವರೆಗೆ 4 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕಾರ್ಯವು ನ್ಯಾಯೋಚಿತವಾಗಿ ನಡೆಯಲೆಂಬ ಸದುದ್ದೇಶದಿಂದ ಹಾಗೂ ಪರೀಕ್ಷಾ ಅಕ್ರಮಗಳನ್ನು ತಡೆಯಲು ಅನುಕೂಲವಾಗುವಂತೆ ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀ ವ್ಯಾಪ್ತಿಯ ಪ್ರದೇಶವನ್ನು ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಶ್ರೀರೂಪ ಆದೇಶ ಹೊರಡಿಸಿದ್ದಾರೆ. ಚಾಮರಾಜನಗರ ಪಟ್ಟಣದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಯಳಂದೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು, ಗುಂಡ್ಲುಪೇಟೆ ಪಟ್ಟಣದ ದೊಡ್ಡಹುಂಡಿ ಬೋಗಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ ಪಟ್ಟಣದ ಎಂ.ಜಿ.ಎಸ್.ವಿ ಸರ್ಕಾರಿ ಪದವಿ ಪೂರ್ವ ಕಾಲೇಜು ಪರೀಕ್ಷಾ ಕೇಂದ್ರಗಳಾಗಿವೆ. ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀ ವ್ಯಾಪ್ತಿಯ ಪ್ರದೇಶವನ್ನು ಏಪ್ರಿಲ್ 30 ರಿಂದ ಮೇ 13ರ ಬೆಳಿಗ್ಗೆ 6 ರಿಂದ ಸಂಜೆ 4 ಗಂಟೆಯವರೆಗೆ ಸಾರ್ವಜನಿಕ ನಿ??ಧಿತ ಪ್ರದೇಶವೆಂದು ಘೋಷಿಸಿ ನಿ??ದಾಜ್ಞೆ ಹೊರಡಿಸಲಾಗಿದೆ.

ಸದರಿ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ 200 ಮೀ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಮತ್ತು ಕಂಪ್ಯೂಟರ್ ಅಂಗಡಿಗಳನ್ನು ಸಹ ಬೆಳಿಗ್ಗೆ 6 ರಿಂದ ಸಂಜೆ 4 ಗಂಟೆವರೆಗೆ ಮುಚ್ಚಲು ಆದೇಶಿಸಲಾಗಿದೆ. ನಿಷೇದಾಜ್ಞೆ ಪರೀಕ್ಷಾ ಕೆಲಸಕ್ಕೆ ನಿಯೋಜಿತರಾದ ಸಿಬ್ಬಂದಿ ಹಾಗೂ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಶ್ರೀರೂಪ ಅದೇಶದಲ್ಲಿ ತಿಳಿಸಿದ್ದಾರೆ.

ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರವಾಗುವ ಸುಳ್ಳು ಸುದ್ದಿಗಳಿಗೆ ವಿದ್ಯಾರ್ಥಿಗಳು, ಪೊ?ಷಕರು, ಸಾರ್ವಜನಿಕರು ಕಿವಿ ಕೊಡಬಾರದು. ಪರೀಕ್ಷಾ ಪಾವಿತ್ರತೆಯನ್ನು ಕಾಪಾಡಿಕೊಂಡು ಶಿಸ್ತು ಭದ್ರವಾಗಿ ಪರೀಕ್ಷೆಯನ್ನು ನಡೆಸಲು ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ, ಪ್ರಾಂಶುಪಾಲರಿಗೆ ಜಿಲ್ಲಾಧಿಕಾರಿ ಶ್ರೀರೂಪ ಅವರು ನಿರ್ದೇಶನ ನೀಡಿದ್ದಾರೆ.

# ನ್ಯಾಯಾಧೀಶರಿಗೆ ಬೀಳ್ಕೊಡುಗೆ



ಹಾಸನ : ನಗರದ ಜಿಲ್ಲಾ ವಕೀಲರ ಸಂಘದಲ್ಲಿ ಹಾಸನದ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಸ್.ಎ. ಹಿದಾಯತುಲ್ಲಾ ಶರೀಫ್, 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆನಂದ್, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಮೊಹಮ್ಮದ್ ಅಶ್ರಫ್ ಆರಿಸ್, 6ನೇ ಅಧಿಕ ಸಿವಿಲ್ ನ್ಯಾಯಾಧೀಶರು ಕಿರಿಯ ವಿಭಾಗ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರಾದ ಶಿಶಿರಾ ಇವರುಗಳಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಲತಾ ಅವರು, ಸಂಘದ ಅಧ್ಯಕ್ಷರಾದ ಕಾರ್ಲೆ ಮೊಗಣ್ಣಗೌಡ, ಉಪಾಧ್ಯಕ್ಷರಾದ ತಿಮ್ಮೇಗೌಡ, ಕಾರ್ಯದರ್ಶಿ ಹೆಚ್.ಆರ್ ಒಂಬೇಶ್, ಜಂಟಿ ಕಾರ್ಯದರ್ಶಿ ಎ.ಜೆ ರಘು, ಖಜಾಂಚಿಗಳಾದ ಸುಗುಣ ಸೇರಿದಂತೆ ಹಾಗೂ ಇತರರಿದ್ದರು.

# ಸಿಗ್ಮಾ ನರ್ಸಿಂಗ್ ಕಾಲೇಜು ಪದವಿ ಪ್ರಧಾನ




ಮೈಸೂರು: ನಗರದ ಸಿಗ್ಮಾ ನರ್ಸಿಂಗ್ ಕಾಲೇಜು ಮತ್ತು ಆಲೈಡ್ ಸೈನ್ಸ್ ನಲ್ಲಿ ನಡೆದ ಪದವಿ ಪ್ರಧಾನ ಸಮಾರಂಭದಲ್ಲಿ 102 ಡಿಸ್ಟಿಂಕ್ಷನ್ ಮತ್ತು ಮೂವರು ಜಿಲ್ಲೆಗೆ ರ್ಯಾಂಕ್ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪದವಿ ಪ್ರಧಾನ ಮಾಡಲಾಯಿತು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಡಾ.ಸದಾನಂದ ಮಾತನಾಡಿ ನರ್ಸಿಂಗ್ ಸೇವೆ ಅತ್ಯುತ್ತಮ ಸೇವೆಯಾಗಿದ್ದು, ಸೇವಾ ಮನೋಭಾವದಿಂದ ತಾವೆಲ್ಲರೂ ಮುಂದೆ ಕೆಲಸ ಮಾಡಬೇಕು. ಶಿಸ್ತಿನಿಂದ ಕಲಿತ ಈ ನರ್ಸಿಂಗ್ ಪದವಿ ಮುಂದೆ ನಿಮ್ಮ ಉಜ್ವಲ ಭವಿಷ್ಯಕ್ಕೆ ಸಹಕಾರಿಯಾಗಲಿ ಎಂದರು.

ಅಲೈಡ್ ಹೆಲ್ತ್ ಸೆನ್ಸೆಸ್ ಪ್ರಾಂಶುಪಾಲ ಡಾ.ಕೆ.ಮಾದಪ್ಪ ಮಾತನಾಡಿ, ನಮ್ಮ ಕಾಲೇಜು ಪ್ರತಿ ವರ್ಷ ವಿದ್ಯಾರ್ಥಿಗಳು ಸಂಖ್ಯೆ ಹೆಚ್ಚಾಗುತ್ತಿದ್ದು ಅಷ್ಟೇ ಉತ್ತಮ ಫಲಿತಾಂಶ ಕೊಡುತ್ತಿರುವುದು ಸಂತೋಷ ತಂದಿದೆ. ಇದರಲ್ಲಿ ನಮ್ಮ ಕಾಲೇಜಿನ ಸಿಬ್ಬಂದಿ ವರ್ಗದ ಪರಿಶ್ರಮ ಹಾಗೂ ವಿದ್ಯಾರ್ಥಿಗಳ ಕಲಿಕೆ ತುಂಬಾ ಚೆನ್ನಾಗಿರುವುದರಿಂದಲೇ ಈ ಫಲಿತಾಂಶ ಮೈಸೂರಿನಲ್ಲೇ ಪ್ರಥಮ ಸ್ಥಾನ ಬಂದಿರುವುದು ಕಾಲೇಜಿಗೆ ಹೆಮ್ಮೆ ತಂದಿದೆ ಎಂದರು. ವಿಶ್ವಶಾಂತಿ ಸಂಸ್ಥೆಯ ಕಾರ್ಯದರ್ಶಿ ಎನ್.ಬಿ.ಮಹಾಲಿಂಗಯ್ಯ ಮಾತನಾಡಿ, ವಿಶ್ವಶಾಂತಿ ಸಂಸ್ಥೆ ಮತ್ತು ಸಿಗ್ಮಾ ಫೌಂಡೇಶನ್ ಆರೋಗ್ಯ ಮತ್ತು ಶಿಕ್ಷಣಕ್ಕೆ 2012ರಲ್ಲಿ ಆಸ್ಪತ್ರೆಯನ್ನು ಆರೋಗ್ಯ ಸೇವೆಗೆಂದು ಮಾಡಿ ನಂತರ 2019 ರಲ್ಲಿ ಶಿಕ್ಷಣದ ದೃಷ್ಟಿಯಿಂದ ಸಿಗ್ಮಾ ಮತ್ತು ವಿಎಸ್‌ಎಸ್ ಜೊತೆಗೂಡಿ ನರ್ಸಿಂಗ್ ಕಾಲೇಜನ್ನು ಪ್ರಾರಂಭ ಮಾಡಿದರು. ಈಗ ವಿದ್ಯಾರ್ಥಿಗಳ ಸಾಧನೆಯನ್ನು ನೋಡಿದರೆ ಕಾಲೇಜಿನ ಪ್ರಾಂಶುಪಾಲರು ಹಾಗೂ ಸಿಬ್ಬಂದಿಯನ್ನು ಮೆಚ್ಚಬೇಕು ಎಂದರು.

ಟ್ರಸ್ಟಿಗಳಾದ ಡಾ.ರಾಜೇಶ್ವರಿ ಮಾದಪ್ಪ, ಶೈಲಾ ಶಂಕರ್ ರಾಂಕ್ ಪಡೆದ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

# ಇಬ್ಬರು ಮನೆಗಳ್ಳರ ಬಂಧನ – ಚಿನ್ನಾಭರಣ ವಶ

ಗುಂಡ್ಲುಪೇಟೆ, ಏ.30–ಗುಂಡ್ಲುಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯ ಮನೆ ಕಳವು ಪ್ರಕರಣವನ್ನು ಬೇಧಿಸಿ ಇಬ್ಬರು ಆರೋಪಿಗಳನ್ನು ಬಂಧಿಸಿ, ಚಿನ್ನಾಭರಣ ವಶಪಡಿಸಿಕೊಳ್ಳುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.



ತಾಲೂಕಿನ ಮಾಡ್ರಹಳ್ಳಿ ಗ್ರಾಮದ ಶಿವಸ್ವಾಮಿ (28), ಚಂದ್ರ (31) ಬಂಧಿತ ಆರೋಪಿಗಳು. ಇವರು ಕಳ್ಳತನ ಮಾಡಿದ್ದ ಸುಮಾರು 1,71000 ರೂ. ಮೌಲ್ಯದ 5.9.ಗ್ರಾಂ ಒಂದು ಜೊತೆ ಓಲೆ ಜುಮುಕಿ, 3.1 ಗ್ರಾಂ ಒಂದು ಜೊತೆ ಹರಳಿನ ಚಿನ್ನದ ಓಲೆ, 1.6 ಗ್ರಾಂ ಚಿನ್ನದ ಉಂಗುರ ಹಾಗೂ ಕೃತ್ಯಕ್ಕೆ ಬಳಸಿದ್ದ ಕೆಎ–10 ಎಲ್–6963 ಬೈಕ್ ಮತ್ತು ನಂಜನಗೂಡಿನಲ್ಲಿ ಕಳ್ಳತನ ಮಾಡಿದ್ದ ಬೈಕ್ ನ್ನು ವಶಪಡಿಸಿಕೊಳ್ಳಲಾಗಿದೆ. ಗುಂಡ್ಲುಪೇಟೆ ಪೊಲೀಸ್ ಠಾಣೆಯ ಪಿಐ ಎನ್.ಜಯಕುಮಾರ್, ಪಿಎಸ್ ಐ ನರೇಶ್ ಕುಮಾರ್ ನೇತೃತ್ವದಲ್ಲಿ ಸಿಬ್ಬಂದಿಗಳಾದ ಕಿಶೋರ್, ಶಿವರಾಜು, ಬಂಟಪ್ಪ, ಮಹೇಶ ಪ್ರಕರಣದ ಆರೋಪಿಗಳು ಮತ್ತು ಮಾಲು ಪತ್ತೆ ಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.


### ಗುಂಡ್ಲುಪೇಟೆಯಲ್ಲಿ ಘಟನೆ

# ಕ್ವಾರೆಗೆ ಈಜಲು ಹೋಗಿದ್ದ ಯುವಕ ಸಾವು

ಗುಂಡ್ಲುಪೇಟೆ: ತಾಲ್ಲೂಕಿನ ಮಲ್ಲಯ್ಯನಪುರ ಗ್ರಾಮದ ಶಶಾಂಕ್ ಬಿನ್ ಮಹೇಶ್ ಕುಮಾರ್( 17) ಎಂಬಾತ ಮಡಹಳ್ಳಿ ಗುಡ್ಡದಲ್ಲಿ ಕ್ವಾರೆ ಕುಸಿತವಾಗಿ ಸ್ಥಗಿತವಾಗಿದ್ದ ಕ್ವಾರೆಯಲ್ಲಿ ಈಜಲು ತೆರಳಿರುವ ಸಂದರ್ಭದಲ್ಲಿ ಸಾವಿಗೀಡಾಗಿರುವ ಘಟನೆ ನಡೆದಿದೆ.

ಮೃತ ಯುವಕ ಗುಂಡ್ಲುಪೇಟೆ ಪಟ್ಟಣದ ಮೆಡಿಕಲ್ ಶಾಪ್ ನಲ್ಲಿ ಕೆಲಸ ಮಾಡುತಿದ್ದ ಎನ್ನಲಾಗಿದ್ದು, ಬೇಸಿಗೆ ಬಿಸಲಿನ ಬೇಗೆ ತಣಿಸಿಕೊಳ್ಳಲು ಈಜಲು ಸ್ನೇಹಿತರೊಂದಿಗೆ ಕ್ವಾರೆಗೆ ತೆರಳಿದ್ದ ಈ ಸಂದರ್ಭದಲ್ಲಿ ಮೃತಪಟ್ಟಿರುವ ಘಟನೆ ನಡೆದಿದೆ.

ಬೇಸಿಗೆ ಬಂದಲ್ಲಿ ಮಕ್ಕಳು, ಯುವಕರು ನೀರಿರುವ ಕಡೆಗೆ ಹೋಗಿ ಈಜಲು ಯತ್ನಿಸುವುದು, ಪ್ರತಿಯಾಗಿ ಒಂದಷ್ಟು ಜನ ಪ್ರಾಣ



ಕಳೆದುಕೊಳ್ಳುವುದು ಪ್ರತಿವರ್ಷ ನಡೆದರೂ ಆಡಳಿತ ಎಚ್ಚೆತ್ತುಕೊಳ್ಳದ ಪರಿಣಾಮವಾಗಿ ಗುಂಡ್ಲುಪೇಟೆಯ ಪೂರ್ವಕ್ಕಿರುವ ಗುಂಕಲ್ಲು ಗುಡ್ಡವನ್ನು ಅಗೆದಗೆದು ತೋಡಿರುವ ಆಳದ ಗಣಿಯಲ್ಲಿ ತುಂಬಿನಿಂತ ನೀರಲ್ಲಿ ಈಜಲು ಹೋದ ಯುವಕ ಮುಳುಗಿ ಹೋಗಿದ್ದಾನೆ.

ಈ ಹಿಂದೆ ಈ ಗಣಿಕುಸಿದು ಹತ್ತಾರು ಜನ ಅಡಿಯಲ್ಲಿ ಸಿಕ್ಕಿ ಸತ್ತದ್ದು ನಮ್ಮ ನೆನಪಿನಲ್ಲಿ ಮಾಸಿಲ್ಲ. ಇಂತಹ ಜಾಗಕ್ಕೆ ಯಾರೂ ಕಾವಲಿಲ್ಲ, ಇಲ್ಲಿಗೆ ಹೋಗಲು ಯಾವ ನಿರ್ಬಂಧವೂ ಇಲ್ಲ ಬದಲಾಗಿ ಮೋಜು ಮಾಡುವವರ ತಾಣವಾಗಿದೆ, ಪರಿಣಾಮ ಈ ಸಾವು ಬಾಳಿ ಬದುಕಬೇಕಿದ್ದ 16–17 ರ ಯುವಕನೊಬ್ಬನನ್ನು ಕಳೆದುಕೊಂಡೆವು. ಇನ್ನಾದರೂ ಇಂತಹ ಸ್ಥಳಗಳಿಗೆ ಬೇಲಿ ಹಾಕಿ ನಿರ್ಬಂಧಿಸಲು ಸಂಬಂಧಿಸಿದ ಇಲಾಖೆಗಳು ಗಮನ ಹರಿಸಲಿ ಎಂದು ಜಿಲ್ಲಾ ಕಸಾಪ ಜಿಲ್ಲಾ ಅಧ್ಯಕ್ಷ ಶೈಲಕುಮಾರ್ ಒತ್ತಾಯಿಸಿದ್ದಾರೆ.



> ಇದು ಆಡಳಿತದ ವಿಫಲತೆ ಎದ್ದು ಕಾಣುತ್ತಿದೆ ಸ್ಥಗಿತವಾದ ಕ್ವಾರೆಯಲ್ಲಿ ನೀರು ಸಂಗ್ರಹವಾಗಿದ್ದು ಬೇಸಿಗೆ ಸಂದರ್ಭದಲ್ಲಿ ಸಣ್ಣ ಪುಟ್ಟ ವಯಸ್ಸಿನ ಬಾಲಕರು ಸ್ನೇಹಿತರ ಜೊತೆ ಈಜಲು ಹೋಗಿ ಪ್ರಾಣ ಕಳೆದುಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ, ಆಗಾಗಿ ಇಂತಹ ನಿರ್ಭಂಧಿತ ಪ್ರದೇಶದಲ್ಲಿ ಯಾರು ಹೋಗದ ಹಾಗೆ ತಾಲ್ಲೂಕು ಆಡಳಿತ ಸುತ್ತುಬೇಲಿ ಹಾಕಬೇಕು ಇಂತಹ ಘಟನೆ ಮತ್ತೆ ಮುಂದುವರೆದರೆ ತಾಲ್ಲೂಕು ಆಡಳಿತ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯೇ ಪರಿಹಾರ ನೀಡಬೇಕು.
>
> **ಎಚ್ ಎಂ ನಂದೀಶ್**
> ಯುವ ಮುಖಂಡರು

## ಸಾರ್ವಜನಿಕ ದಾಖಲೆ ಸಂರಕ್ಷಣೆಗೆ ಎಡಿಸಿ ಬಿ.ಸಿ.ಶಿವಾನಂದಮೂರ್ತಿ ಸೂಚನೆ

# ದಾಖಲೆ ಕಾಗದವಲ್ಲ; ಆಡಳಿತದ ಸಾಕ್ಷ್ಯ




**ಮಂಡ್ಯ:** ಸಾರ್ವಜನಿಕ ದಾಖಲೆಗಳ ನಿರ್ವಹಣೆ ಹಾಗೂ ಎಲ್ಲಾ ದಾಖಲೆಗಳನ್ನು ಸಂರಕ್ಷಿಸುವುದು ಅತ್ಯಗತ್ಯವಾಗಿದ್ದು, ಸಾರ್ವಜನಿಕರಿಗೆ ಅಗತ್ಯ ದಾಖಲೆಗಳನ್ನು ಸರಿಯಾದ ಸಮಯದಲ್ಲಿ ನೀಡುವುದು ಮತ್ತು ಮೂಲ ದಾಖಲೆಗಳನ್ನು ಸುರಕ್ಷಿತವಾಗಿ ಉಳಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಹೇಳಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ ಮಂಡ್ಯ ಹಾಗೂ ಕರ್ನಾಟಕ ರಾಜ್ಯ ಪತ್ರಾಗಾರ ಮತ್ತು ಗ್ಯಾಸೆಟಿಯರ್ ಇಲಾಖೆ, ವಿಭಾಗೀಯ ಪತ್ರಾಗಾರ ಕಚೇರಿ ಮೈಸೂರು ಇವರ ಸಹಯೋಗದಲ್ಲಿ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಸಾರ್ವಜನಿಕ ದಾಖಲೆಗಳ ಅಧಿನಿಯಮ ಮತ್ತು ದಾಖಲೆಗಳ ನಿರ್ವಹಣೆ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ಕಚೇರಿಗಳಲ್ಲಿ ದಾಖಲೆಗಳನ್ನು ವ್ಯವಸ್ಥಿತವಾಗಿ ಸಂರಕ್ಷಿಸುವುದು, ಅಗತ್ಯವಿದ್ದಲ್ಲಿ ವಿಲೇವಾರಿ ಮಾಡುವುದು ಹಾಗೂ ಸಾರ್ವಜನಿಕ ದಾಖಲೆಗಳ ಅಧಿನಿಯಮದಡಿ ಸೂಕ್ತ ನಿರ್ವಹಣೆ ಮಾಡಬೇಕು ಎಂದು ಹೇಳಿದರು.

ದಾಖಲೆಗಳು ಕೇವಲ ಕಾಗದಗಳಲ್ಲ, ಅವು ಇತಿಹಾಸ ಮತ್ತು ಆಡಳಿತದ ಸಾಕ್ಷ್ಯಗಳಾಗಿವೆ. ಅವುಗಳನ್ನು ವೈಜ್ಞಾನಿಕವಾಗಿ ನಿರ್ವಹಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಕರ್ತವ್ಯವಾಗಿದೆ ಎಂದು ತಿಳಿಸಿದರು. ಪ್ರಸ್ತುತ ದಿನಗಳಲ್ಲಿ ದಾಖಲೆಗಳು ಡಿಜಿಟಲೀಕರಣ ಗೊಳ್ಳುತ್ತಿರುವ ಹಿನ್ನೆಲೆ ಹಳೆಯ ದಾಖಲೆಗಳ ಸಂರಕ್ಷಣೆಯ ಮಹತ್ವವನ್ನು ಮನಗಂಡು ಕಾರ್ಯಾಗಾರ ಆಯೋಜಿಸಲಾಗಿದೆ. ಇಲಾಖೆವಾರು ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಾಗಾರದ ಮಾಹಿತಿಯನ್ನು ಅರ್ಥೈಸಿಕೊಂಡು ದಾಖಲೆಗಳ ಸಂರಕ್ಷಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು. ಕರ್ನಾಟಕ ರಾಜ್ಯ ಪತ್ರಾಗಾರ ಮತ್ತು ಗ್ಯಾಸೆಟಿಯರ್ ಇಲಾಖೆ ನಿರ್ದೇಶಕ ಡಾ. ಗವಿಸಿದ್ದಯ್ಯ ಮಾತನಾಡಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ದಾಖಲೆಗಳ ಸಂರಕ್ಷಣೆಯಲ್ಲಿ ಎದುರಿಸುತ್ತಿರುವ ತಾಂತ್ರಿಕ ಸವಾಲುಗಳು, ಕಾರ್ಯಾಗಾರದ ಉದ್ದೇಶ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಆಗುವ ಸುಧಾರಣೆಗಳ ಕುರಿತು ಬೆಳಕು ಚೆಲ್ಲಿದರು. ಡಿಜಿಟಲೀಕರಣದ ಯುಗದಲ್ಲಿ ಹಳೆಯ ದಾಖಲೆಗಳನ್ನು ಹೇಗೆ ಸಂರಕ್ಷಿಸಬೇಕು ಎಂಬುದರ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಮೈಸೂರು ವಿಭಾಗೀಯ ಪತ್ರಾಗಾರ ಕಚೇರಿ ಉಪ ನಿರ್ದೇಶಕ ಮಂಜುನಾಥ್ ಹೆಚ್.ಎಲ್., ಕರ್ನಾಟಕ ರಾಜ್ಯ ಪತ್ರಾಗಾರ ಮತ್ತು ಗ್ಯಾಸೆಟಿಯರ್ ಇಲಾಖೆಯ ಜಂಟಿ ನಿರ್ದೇಶಕ ಡಾ. ನೆಲ್ಕುದ್ರಿ ಸದಾನಂದಪ್ಪ, ಮಂಡ್ಯ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ತಹಸೀಲ್ದಾರರಾದ ವಿಶ್ವನಾಥ್, ಚೇತನಾ ಯಾದವ್, ಲೋಕೇಶ್, ಅಶೋಕ್, ಪುರುಷೋತ್ತಮ್ ಸತ್ತಿ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಧನುಷ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗ್ಯಾರಂಟಿ ಯೋಜನೆ ಅಧ್ಯಕ್ಷ ಚಿಕ್ಕಲಿಂಗಯ್ಯ ನುಡಿ

# ಕಾಲೇಜುಗಳಲ್ಲಿ ಯುವನಿಧಿ ಯೋಜನೆ ಅರಿವು ಮೂಡಿಸಿ

**ಮಂಡ್ಯ:** ಯುವನಿಧಿ ಯೋಜನೆ ಕುರಿತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯೋಜನೆಗೆ ಸಂಬಂಧಿಸಿದ ನಾಮಫಲಕಗಳನ್ನು ಶಾಲಾ-ಕಾಲೇಜುಗಳ ಸುತ್ತಮುತ್ತ ಅಳವಡಿಸಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿಕ್ಕಲಿಂಗಯ್ಯ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪಡಿತರ ಚೀಟಿಯನ್ನು ಎಪಿಎಲ್‌ನಿಂದ ಬಿಪಿಎಲ್‌ಗೆ ವರ್ಗಾವಣೆ ಮಾಡುವಂತೆ 704 ಅರ್ಜಿಗಳು ಬಂದಿದ್ದು, ಅವುಗಳಲ್ಲಿ 420 ಅರ್ಜಿಗಳನ್ನು ದಾಖಲೆ ಪರಿಶೀಲನೆಯ ಬಳಿಕ ವರ್ಗಾವಣೆ ಮಾಡಲಾಗಿದೆ. ಉಳಿದ ಅರ್ಜಿಗಳ ದಾಖಲೆಗಳನ್ನು ಪರಿಶೀಲಿಸಿ ಶೀಘ್ರ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗೃಹ ಜ್ಯೋತಿ ಯೋಜನೆಯಡಿ ಕಾನೂನು ನಿಯಮಾನುಸಾರ ಹೊಸ ಮನೆಗಳಿಗೆ 200 ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ರಾಜೇಂದ್ರ ಪ್ರಸಾದ್ ಮಾತನಾಡಿ, ಶಕ್ತಿ ಯೋಜನೆಯಡಿ ಪ್ರಸ್ತುತ ತಿಂಗಳ ಅಂತ್ಯದವರೆಗೆ ಜಿಲ್ಲೆಯಲ್ಲಿ 20 ಕೋಟಿಗೂ ಹೆಚ್ಚು ಪ್ರಯಾಣಿಕರು ಪ್ರಯಾಣಿಸಿದ್ದಾರೆ ಎಂದು ತಿಳಿಸಿದರು.

ಉಪಾಧ್ಯಕ್ಷ ಹನುಮಂತಯ್ಯ ಮಾತನಾಡಿ, ಗೃಹ ಲಕ್ಷ್ಮಿ ಯೋಜನೆಯಡಿ ಜಿಲ್ಲೆಯ ಎಲ್ಲಾ ಫಲಾನುಭವಿಗಳಿಗೆ ಫೆಬ್ರವರಿ 2026ರವರೆಗೆ 28 ಕಂತುಗಳ ಹಣವನ್ನು ತಲುಪಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಉಪಾಧ್ಯಕ್ಷರಾದ ಪ್ರಶಾಂತ್ ಬಾಬು, ಶಿವಣ್ಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಆಶಾ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ವ್ಯವಸ್ಥಾಪಕಿ ರೇಣುಕಾ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಧನುಷ್, ಪ್ರಾಧಿಕಾರದ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.




## ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ಎಂದಿಗೂ ವಿರೋಧವಿಲ್ಲ

# ಮಹಿಳಾ ಮೀಸಲಾತಿ ಮಸೂದೆ ಪ್ರತ್ಯೇಕವಾಗಿ ಮಂಡನೆಯಾಗಲಿ: ಮಂಜುಳಾ ನಾಯ್ಡು ನುಡಿ



**ರಾಮನಗರ:** ಲೋಕಸಭಾ ಕ್ಷೇತ್ರಗಳ ಮರು ವಿಂಗಡಣೆ ಮತ್ತು ವಿಸ್ತರಣೆ ಮಸೂದೆಯ ಜೊತೆಗೆ ಮಹಿಳಾ ಮೀಸಲಾತಿ ಮಸೂದೆಯನ್ನು ಸೇರಿಸಿ ಲೋಕಸಭೆಯಲ್ಲಿ ಮಂಡಿಸಿದ್ದರಿಂದ ಕಾಂಗ್ರೆಸ್ ವಿರೋಧಿಸಿದೆ ಹೊರತು, ಕಾಂಗ್ರೆಸ್ ಎಂದಿಗೂ ಮಹಿಳಾ ಮೀಸಲಾತಿಯನ್ನು ವಿರೋಧಿಸಿಲ್ಲ ಎಂದು ಕೆಪಿಸಿಸಿ ಮಹಿಳಾ ಘಟಕದ ಕಾರ್ಯದರ್ಶಿ ಮಂಜುಳಾ ನಾಯ್ಡು ಹೇಳಿದರು.

ನಗರದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಕೇಂದ್ರ ಸರ್ಕಾರ ಮಹಿಳಾ ಮೀಸಲಾತಿ ಮಸೂದೆಯನ್ನು ಪ್ರತ್ಯೇಕವಾಗಿ ಮಂಡಿಸಲಿ ನಾವು ಅದನ್ನು ಸ್ವಾಗತಿಸುತ್ತೇವೆ ಎಂದರು.

ಮಹಿಳಾ ಮೀಸಲಾತಿ ಮಸೂದೆ ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ 2023ರಲ್ಲಿಯೇ ಅಂಗೀಕಾರವಾಗಿದೆ. ಪ್ರಸ್ತುತ ಲೋಕಸಭಾ ಕ್ಷೇತ್ರಗಳ ಮರುವಿಂಗಡನೆಯನ್ನು ಸೇರಿಸಿ ಮಂಡಿಸಿದ್ದಾರೆ. ನಾವು ಮಹಿಳಾ ಮೀಸಲಾತಿಗೆ ವಿರೋಧಿಸಿಲ್ಲ. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿ, ಸಂವಿಧಾನದ 73, 74 ನೇ ತಿದ್ದುಪಡಿಗಳನ್ನು ರಾಜೀವ್ ಗಾಂಧಿಯವರು ಪ್ರಧಾನ ಮಂತ್ರಿಯಾಗಿದ್ದಾಗ ತಂದಿದ್ದರು ಎಂದರು.

**ಬಿಜೆಪಿ ಎಂದೂ ಒತ್ತಾಯ ಮಾಡಿರಲಿಲ್ಲ**

ಜಿಲ್ಲಾ ಮತ್ತು ತಾಲೂಕು ಪಂಚಾಯಿತಿಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡಬೇಕೆಂದು ಬಿಜೆಪಿ ಎಂದಿಗೂ ಒತ್ತಾಯಿಸಿಲ್ಲ, ಈಗ ಮಾತ್ರ ಮಹಿಳಾ ಮೀಸಲಾತಿಗೆ ಒತ್ತಾಯಿಸಿ ರಾಜಕೀಯ ಮಾಡುತ್ತಿದ್ದಾರೆಂದರು. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕಾಂಗ್ರೆಸ್ ಮಹಿಳಾ ಮೀಸಲಾತಿ ವಿರೋಧಿಗಳು ಎಂದು ಹಸಿಹಸಿ ಸುಳ್ಳು ಹೇಳುತ್ತಿದ್ದಾರೆ. ತಮಿಳುನಾಡು, ಪಶ್ಚಿಮ ಬಂಗಾಳದ ಚುನಾವಣೆ ಇರುವುದರಿಂದ ನಮ್ಮನ್ನು ಮಹಿಳಾ ಮೀಸಲಾತಿ ವಿರೋಧಿಗಳು ಎಂದು ಬಿಂಬಿಸಿ,ರಾಜಕೀಯ ಲಾಭ ಪಡೆಯುವುದು ಅವರ ಉದ್ದೇಶವಾಗಿದೆ ಎಂದು ಹೇಳಿದರು.

**ಕ್ಷೇತ್ರಗಳ ಮರುವಿಂಗಡಣೆ: ದಕ್ಷಿಣ ಭಾರತಕ್ಕೆ ಅನ್ಯಾಯ – ಪುಷ್ಪ ಮಂಜುನಾಥ್**

ಕೆಪಿಸಿಸಿ ಸಾಮಾಜಿಕ ಜಾಲತಾಣ ಘಟಕದ ಕಾರ್ಯದರ್ಶಿ ಪುಷ್ಪ ಮಂಜುನಾಥ ರೆಡ್ಡಿ ಮಾತನಾಡಿ, ಕ್ಷೇತ್ರ ಮರುವಿಂಗಡನೆಯಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗುತ್ತದೆ. ದಕ್ಷಿಣದಲ್ಲಿ 50% ಮಾಡಿದರೆ ಉತ್ತರ ಪ್ರದೇಶದಲ್ಲಿ 80 ಸ್ಥಾನಗಳಿವೆ. ಅಲ್ಲಿಗೆ 120 ಸ್ಥಾನಗಳಾಗುತ್ತವೆ. ಕರ್ನಾಟಕದಲ್ಲಿ 42 ಸ್ಥಾನಗಳಾಗುತ್ತವೆ. ಉತ್ತರ ಭಾರತದಲ್ಲಿ ಸ್ಥಾನಗಳು ಹೆಚ್ಚಾಗುವುದರ ಬಗ್ಗೆ ನಮ್ಮ ವಿರೋಧವೇ ಹೊರತು ಮಹಿಳಾ ಮೀಸಲಾತಿಗೆ ವಿರೋಧವಿಲ್ಲ ಎಂದರು.

ಸಂವಿಧಾನ ತಿದ್ದುಪಡಿಗೆ ಮೂರನೇ ಎರಡರಷ್ಟು ಬಹುಮತ ಲೋಕಸಭೆಯಲ್ಲಿ ಇರಬೇಕು. 50% ರಾಜ್ಯಗಳು ಇದಕ್ಕೆ ಒಪ್ಪಿಗೆ ನೀಡಬೇಕು. ಕ್ಷೇತ್ರ ಮರು ವಿಂಗಡಣೆಗೆ ವಿರೋಧ ಮಾಡಿದ್ದೇವೆ ಹೊರತು ಮಹಿಳಾ ಮೀಸಲಾತಿಗೆ ನಮ್ಮ ವಿರೋಧವಿಲ್ಲ. 2023ರಲ್ಲೇ 450 ಮತಗಳನ್ನು ಪಡೆದು ಅಂಗೀಕಾರವಾಗಿರುವ ಮಸೂದೆಯನ್ನು ನರೇಂದ್ರ ಮೋದಿಯವರು ಏಕೆ ಜಾರಿಮಾಡಲಿಲ್ಲ ಎಂದು ಪ್ರಶ್ನಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್ ಗಂಗಾಧರ್, ಮಾಜಿ ಶಾಸಕ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ರಾಜು, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಕೋಕಿಲಾ ರಾಣಿ, ರಾಮನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ. ಚೇತನ್ ಕುಮಾರ್, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿಎ□□□ರ್ ವೆಂಕಟೇಶ್, ಜಿಲ್ಲಾ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಗುರುಪ್ರಸಾದ್, ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷೆ ಅರ್ಪಿತ ಹರೀಶ್, ತಾಲ್ಲೂಕು ಗ್ಯಾರಂಟಿ ಕಮಿಟಿ ಸದಸ್ಯರಾದ ವಾಣಿ ನಾಗರಾಜು, ಪುಷ್ಪ, ಕೆಡಿಪಿ ಸದಸ್ಯೆ ಅನಿತಾ, ಜಿಲ್ಲಾ ಗ್ಯಾರಂಟಿ ಕಮಿಟಿ ಸದಸ್ಯೆ ಶೋಭಾ, ಚನ್ನಪಟ್ಟಣ ನಗರಸಭೆ ಮಾಜಿ ಅಧ್ಯಕ್ಷೆ ಅಖಿಲ ಬಾನು, ರಾಮನಗರ ಟೌನ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ನಾಗಮ್ಮ, ಮಹಿಳಾ ಮುಖಂಡರಾದ ಸುಮಿತ್ರಾ, ಪದ್ಮಾವತಿ ಮತ್ತಿತರರು ಇದ್ದರು.

## ಹಸ್ತಪ್ರತಿಗಳು ಡಿಜಿಟಲೀಕರಣವಾಗಲಿ: ಎಡಿಸಿ ಆರ್.ಚಂದ್ರಯ್ಯ ಸೂಚನೆ

# ತಂತ್ರಜ್ಞಾನ ಬಳಸಿ ಶಾಶ್ವತವಾಗಿ ಉಳಿಸೋಣ



**ರಾಮನಗರ:** ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ದೇಶದಾದ್ಯಂತ ಇರುವ ಹಸ್ತಪ್ರತಿಗಳ ಮಾಹಿತಿಯನ್ನು ಮೊಬೈಲ್ ಅನ್ವಯಿಕೆಯಲ್ಲಿ ದಾಖಲಿಸಿ ರಾಷ್ಟ್ರೀಯ ಭಂಡಾರದಲ್ಲಿ ಸಂಗ್ರಹಿಸುವ ಮೂಲಕ ಜಗತ್ತಿಗೆ ಹಂಚಿಕೊಳ್ಳುವ ಉದ್ದೇಶದಿಂದ ಯೋಜನೆ ಜಾರಿಗೊಳಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್.ಚಂದ್ರಯ್ಯ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಕಾರ್ಯಯೋಜನೆ ಕುರಿತು ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶತಮಾನಗಳಷ್ಟು ಹಳೆಯ ಕೈಬರಹ ಪತ್ರಗಳು, ಹಸ್ತಪ್ರತಿಗಳು ಹಾಗೂ ದಾಖಲೆಗಳನ್ನು ಇಂದಿನ ತಂತ್ರಜ್ಞಾನ ಬಳಸಿ ಶಾಶ್ವತವಾಗಿ ಉಳಿಸಲು ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಹಾಗೂ ಪ್ರಕಟಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡುವುದೇ ಯೋಜನೆಯ ಉದ್ದೇಶ ಎಂದು ಹೇಳಿದರು.

ಯೋಜನೆಗೆ ಸಂಬಂಧಿಸಿದಂತೆ ಹಾಜರಿದ್ದ ವಿವಿಧ ಸಂಸ್ಥೆಗಳ ಪ್ರತಿನಿಧಿಗಳಿಗೆ ತಮ್ಮ ಸಂಸ್ಥೆಗಳಲ್ಲಿ ಹಸ್ತಪ್ರತಿಗಳು ಅಥವಾ ಹಳೆಯ ದಾಖಲೆಗಳಿದ್ದರೆ ಮಾಹಿತಿ ನೀಡುವಂತೆ ಸೂಚಿಸಿದರು. ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರತಿನಿಧಿ ಪ್ರೇಮಪುರಿ ಶಿವಂ ಮಾತನಾಡಿ, ತಮ್ಮ ಬಳಿ ಕೆಲವು ಹಸ್ತಪ್ರತಿಗಳು ಇರಬಹುದಾದ ಸಾಧ್ಯತೆ ಇದ್ದು, ಪರಿಶೀಲಿಸಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ನೀಡುವುದಾಗಿ ಹೇಳಿದರು.

ಚುಂಚನಗಿರಿ ಮಠ ರಾಮನಗರ ಹಾಗೂ ದೇಗುಲ ಮಠ ಕನಕಪುರದ ಆಡಳಿತಾಧಿಕಾರಿಗಳು ತಮ್ಮ ಬಳಿ ಹಸ್ತಪ್ರತಿಗಳು ಇಲ್ಲವೆಂದು ತಿಳಿಸಿದರು. ಚುಂಚನಗಿರಿ ಮಠದವರು ಕೆಲವು ಹಸ್ತಪ್ರತಿಗಳನ್ನು ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಮಠದಲ್ಲಿ ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿಗಳು, ಯಾವುದಾದರೂ ಹಸ್ತಪ್ರತಿಗಳು ಲಭ್ಯವಾದಲ್ಲಿ ತಕ್ಷಣ ಮಾಹಿತಿ ನೀಡುವಂತೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಜಿಲ್ಲೆಯಲ್ಲಿ ಮರಳೆಗವಿ ಮಠ, ದೇಗುಲ ಮಠ, ಅಬ್ಬೂರು ಮಠ, ವಾದಿರಾಜರ ಮಠ, ಅಪ್ರಮೇಯ ದೇವಾಲಯ, ಹಳೆಯ ಪುರೋಹಿತರ ಮನೆಗಳು ಹಾಗೂ ಹಳೆಯ ದೇವಾಲಯಗಳಲ್ಲಿ ಹಸ್ತಪ್ರತಿಗಳು ಲಭ್ಯವಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಹೇಳಿದರು.

ಜಾನಪದ ಲೋಕದ ಕ್ಯೂರೇಟರ್ ಮಾತನಾಡಿ, ಜಾನಪದ ಲೋಕದಲ್ಲಿ 150ಕ್ಕೂ ಹೆಚ್ಚು ತಾಳೆಗರಿ ಹಸ್ತಪ್ರತಿಗಳು, 5 ಕಡತಗಳು, ನಿವೃತ್ತ ಐಎಎಸ್ ಅಧಿಕಾರಿ ನಾಗೇಗೌಡ ಎಚ್.ಎನ್ ಅವರ ಕೈಬರಹದ 12 ದಿನಚರಿಗಳು ಸೇರಿದಂತೆ ಹಲವು ಅಮೂಲ್ಯ ದಾಖಲೆಗಳು ಲಭ್ಯವಿವೆ ಎಂದು ತಿಳಿಸಿದರು.

ಇದಕ್ಕೆ ಅಪರ ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ, ಈ ದಾಖಲೆಗಳನ್ನು ಯೋಜನೆಗೆ ನೀಡಬೇಕು. ಮಾಸ್ಟರ್ ತರಬೇತುದಾರರು ಹಾಗೂ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಜಾನಪದ ಲೋಕಕ್ಕೆ ಭೇಟಿ ನೀಡಿ ಮುಂದಿನ ಕ್ರಮ ಕೈಗೊಳ್ಳಬೇಕು. ಜಾನಪದ ಲೋಕ ಸಿಬ್ಬಂದಿ ಅಗತ್ಯ ಸಹಕಾರ ನೀಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜ್ಞಾನ ಭಾರತಂ ಮಿಷನ್ ಸದಸ್ಯರು, ವಿವಿಧ ಮಠಗಳ ಆಡಳಿತಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಸತತ ಪರಿಶ್ರಮ, ಆತ್ಮವಿಶ್ವಾಸದಿಂದ ಸಾಧನೆ ಸಾಧ್ಯ: ಡಾ.ಹರ್ಷ ಪ್ರಿಯಂವದ




ಮೈಸೂರು: ಸತತ ಪ್ರಯತ್ನದ ಪರಿಶ್ರಮ ಮತ್ತು ಆತ್ಮ ವಿಶ್ವಾಸದಿಂದ ನೀವು ಮಾಡುವ ಪ್ರತಿಯೊಂದು ಕೆಲಸ ನಿಮ್ಮಿಂದ ಸಾಧನೆ ಸಾಧ್ಯ ಆಗಲಿದೆ ಎಂಬುದನ್ನು ತೋರಲಿದೆ ಎಂದು ನಗರ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿ.ಸಿ.ಪಿ ಡಾ. ಹರ್ಷ ಪ್ರಿಯಂವದ ಹೇಳಿದರು.

ನಗರದ ಜಯಲಕ್ಷ್ಮೀಪುರಂನಲ್ಲಿರುವ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿ ಸಂಸತ್ ಮತ್ತು ಪ್ರತಿಭಾ ವೇದಿಕೆಯ ಸಮಾರೋಪ ಸಮಾರಂಭ ಹಾಗೂ ಪ್ರತಿಭಾ ಪುರಸ್ಕಾರ, ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದ ಸಮಾರೋಪದಲ್ಲಿ ಮಾತನಾಡಿದರು. ನಾನು ಜಾರ್ಖಂಡ್ ಒಂದು ಸಣ್ಣ ಹಳ್ಳಿಯ ಸರ್ಕಾರಿ ಶಾಲೆಯಲ್ಲಿ ಓದಿದವಳು. ನನ್ನ ಆರಂಭಿಕ ದಿನಗಳಲ್ಲಿ ನನಗೆ ಇಂಗ್ಲಿಷ್ ಭಾಷೆಯ ಜ್ಞಾನವೇ ಇರಲಿಲ್ಲ ಮತ್ತು ನನ್ನ ಕಲಿಕೆಯ ಬಗ್ಗೆ ನನಗೆ ಯಾವುದೇ ಆತ್ಮವಿಶ್ವಾಸವಿರಲಿಲ್ಲ. ಆದರೆ, ಆ ಕೀಳರಿಮೆಯನ್ನು ಮೀರಿ ನಿಲ್ಲುವ ಛಲ ನನ್ನಲ್ಲಿತ್ತು. ಇಂದು ನಾನು ಎಂಬಿಬಿಎಸ್ ವಿದ್ಯಾರ್ಹತೆ ಹೊಂದಿದ್ದೂ, ಐಪಿಎಸ್ ಅಧಿಕಾರಿಯಾಗಿ ನಿಮ್ಮ ಮುಂದೆ ನಿಂತಿದ್ದೇನೆಂದರು.

ನೀವು ಓದಿದ ಶಾಲೆಯು ನಿಮ್ಮ ಭವಿಷ್ಯವನ್ನು ನಿರ್ಧರಿಸುವುದಿಲ್ಲ, ಬದಲಾಗಿ ನಿಮ್ಮ ಪರಿಶ್ರಮ ಮಾತ್ರ ನಿಮ್ಮನ್ನು ಗುರಿ ಮುಟ್ಟಿಸುತ್ತದೆ. ನಗರದ ವಿದ್ಯಾರ್ಥಿಗಳು ಇಂಗ್ಲಿಷ್ನಲ್ಲಿ ಸುಲಲಿತವಾಗಿ ಮಾತನಾಡುವುದನ್ನು ಕಂಡಾಗ ನನಗೆ ಒಂದು ರೀತಿಯ ಭಯ ಮತ್ತು ಕೀಳರಿಮೆ ಕಾಡುತ್ತಿತ್ತು. ನನ್ನ ಕಲಿಕೆಯ ಬಗ್ಗೆ ನನಗೆ ಕಿಂಚಿತ್ತೂ ಆತ್ಮವಿಶ್ವಾಸವಿರಲಿಲ್ಲ. ಆದರೆ, ನನ್ನೊಳಗಿದ್ದ ಸಣ್ಣ ಛಲ ಮತ್ತು 'ನಾನು ಏಕೆ ಪ್ರಯತ್ನಿಸಬಾರದು?' ಎಂಬ ಪ್ರಶ್ನೆ ನನ್ನನ್ನು ಮುನ್ನಡೆಸಿತು. ನಾನು ಇಂದು ನಿಮ್ಮ ಮುಂದೆ ಒಬ್ಬ ಐಪಿಎಸ್ ಅಧಿಕಾರಿಯಾಗಿ ನಿಂತಿದ್ದೇನೆ ಎಂದರೆ ಅದಕ್ಕೆ ಕಾರಣ ಕೇವಲ ಅದೃಷ್ಟವಲ್ಲ, ಭಾಷೆ ಮತ್ತು ಪರಿಸರದ ಮಿತಿಗಳು ನನ್ನನ್ನು ಕಟ್ಟಿಹಾಕಲು ಪ್ರಯತ್ನಿಸಿದವು. ಆದರೆ ನಾನು ಆ ಮಿತಿಗಳನ್ನು ಮೀರಿ ನಿಲ್ಲಲು ನಿರ್ಧರಿಸಿದೆ. ನನ್ನ ಕಠಿಣ ಪರಿಶ್ರಮದ ಫಲವಾಗಿ ನಾನು ಸಮಾಜದಲ್ಲಿ ದೊಡ್ಡ ಮಟ್ಟದ ಬದಲಾವಣೆ ತರಲು ನನಗೆ ಇನ್ನೂ ದೊಡ್ಡದಾದ ವೇದಿಕೆ ಬೇಕು ಎನಿಸಿದ್ದರಿಂದ ನಾನು ಐಪಿಎಸ್ ಅಧಿಕಾರಿಯಾಗುವ ಕನಸು ಕಂಡು ಅದನ್ನು ನನಸಾಗಿಸಿಕೊಂಡೆ ಎಂದರು.

ನಟಿ ಸಿರಿ ಪ್ರಭಾಕರ್ ಮಾತನಾಡಿ, ಮಹಾಜನ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಬದುಕನ್ನು ಹಸನುಗೊಳಿಸುವಲ್ಲಿ ಉತ್ತಮ ವೇದಿಕೆಗಳ ಮೂಲಕ ಅನೇಕ ಅವಕಾಶಗಳನ್ನು ಕಲ್ಪಿಸಿಕೊಡುತ್ತಿದೆ ಎಂದು ಪ್ರಶಂಸಿಸಿದರು. ಸಿ.ಕೆ.ನಿಹಾರಿಕ ಹೆಗಡೆರನ್ನು ಕಾಲೇಜಿನ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು. ಕನ್ನಡ ವಿಭಾಗದ ಮುಖ್ಯಸ್ಥ ಡಾ.ಎಚ್.ಆರ್.ತಿಮ್ಮೇಗೌಡ ಮಾತನಾಡಿದರು. ಸಮಾರಂಭದಲ್ಲಿ ಸಾಂಸ್ಕೃತಿಕ, ಎನ್ಸಿಸಿ, ಎನ್‌ಎಸ್‌ಎಸ್ ಮತ್ತು ಕ್ರೀಡೆ ಸೇರಿ ವಿವಿಧ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ಸುಮಾರು 35ಕ್ಕೂ ಹೆಚ್ಚು ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಫಲಕ ನೀಡಿ ಗೌರವಿಸಲಾಯಿತು. ಕಾಲೇಜಿನ ಪ್ರಾಂಶುಪಾಲೆ ಡಾ.ಬಿ.ಆರ್. ಜಯಕುಮಾರಿ ಸ್ವಾಗತಿಸಿದರು. ವೇದಿಕೆಯಲ್ಲಿ ಆಡಳಿತಾಧಿಕಾರಿ ಪ್ರೊ.ಪಿ.ಸರೋಜಮ್ಮ, ಸಿ.ಇ.ಒ ಡಾ.ಎಸ್.ಆರ್.ರಮೇಶ್, ಪ್ರತಿಭಾ ವೇದಿಕೆಯ ಸಂಚಾಲಕ ಎಂ.ನಾಗೇಶ, ಹಂಸವೇಣಿ, ವಿದ್ಯಾರ್ಥಿ ಸಂಸತ್ ಸಂಚಾಲಕರಾದ ಡಾ.ಪಿ.ಜಿ.ಪುಷ್ಪಾರಾಣಿ, ರೋಷನ್ ಇನ್ನಿತರರು ಉಪಸ್ಥಿತರಿದ್ದರು.

# ಸಿಗ್ಮಾ ನರ್ಸಿಂಗ್ ಕಾಲೇಜು ಮತ್ತು ಆಲೈಡ್ ಸೈನ್ಸ್ ನಿಂದ ಪದವಿ ಪ್ರಧಾನ

**ಮೈಸೂರು:** ನಗರದ ಸಿಗ್ಮಾ ನರ್ಸಿಂಗ್ ಕಾಲೇಜು ಮತ್ತು ಆಲೈಡ್ ಸೈನ್ಸ್ ನಲ್ಲಿ ನಡೆದ ಪದವಿ ಪ್ರಧಾನ ಸಮಾರಂಭದಲ್ಲಿ 102 ಡಿಸ್ಟಿಂಕ್ಷನ್ ಮತ್ತು ಮೂವರು ಜಿಲ್ಲೆಗೆ ರ್‍ಯಾಂಕ್ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪದವಿ ಪ್ರಧಾನ ಮಾಡಲಾಯಿತು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಡಾ.ಸದಾನಂದ ಮಾತನಾಡಿ ನರ್ಸಿಂಗ್ ಸೇವೆ ಅತ್ಯುತ್ತಮ ಸೇವೆಯಾಗಿದ್ದು, ಸೇವಾ ಮನೋಭಾವದಿಂದ ತಾವೆಲ್ಲರೂ ಮುಂದೆ ಕೆಲಸ ಮಾಡಬೇಕು.




ಶಿಸ್ತಿನಿಂದ ಕಲಿತ ಈ ನರ್ಸಿಂಗ್ ಪದವಿ ಮುಂದೆ ನಿಮ್ಮ ಉಜ್ವಲ ಭವಿಷ್ಯಕ್ಕೆ ಸಹಕಾರಿಯಾಗಲಿ ಎಂದರು. ಅಲೈಡ್ ಹೆಲ್ತ್ ಸೈನ್ಸ್ ಪ್ರಾಂಶುಪಾಲ ಡಾ.ಕೆ.ಮಾದಪ್ಪ ಮಾತನಾಡಿ, ನಮ್ಮ ಕಾಲೇಜು ಪ್ರತಿ ವರ್ಷ ವಿದ್ಯಾರ್ಥಿಗಳು ಸಂಖ್ಯೆ ಹೆಚ್ಚಾಗುತ್ತಿದ್ದು ಅಷ್ಟೇ ಉತ್ತಮ ಫಲಿತಾಂಶ ಕೊಡುತ್ತಿರುವುದು ಸಂತೋಷ ತಂದಿದೆ. ಇದರಲ್ಲಿ ನಮ್ಮ ಕಾಲೇಜಿನ ಸಿಬ್ಬಂದಿ ವರ್ಗದ ಪರಿಶ್ರಮ ಹಾಗೂ ವಿದ್ಯಾರ್ಥಿಗಳ ಕಲಿಕೆ ತುಂಬಾ ಚೆನ್ನಾಗಿರುವುದರಿಂದಲೇ ಈ ಫಲಿತಾಂಶ ಮೈಸೂರಿನಲ್ಲೇ ಪ್ರಥಮ ಸ್ಥಾನ ಬಂದಿರುವುದು ಕಾಲೇಜಿಗೆ ಹೆಮ್ಮೆ ತಂದಿದೆ ಎಂದರು.

# "ಯಶಸ್ಸಿಗಿಂತ ಸಂಸ್ಕಾರ ದೊಡ್ಡದು"


ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 10

ಜಗತ್ತಿನಾದ್ಯಂತ ಕೋಟ್ಯಂತರ ಅಭಿಮಾನಿಗಳಿಂದ ಕ್ರಿಕೆಟ್ ದೇವರು ಎಂದೇ ಆರಾಧಿಸಲ್ಪಡುವ ದಂತಕಥೆ ಸಚಿನ್ ತೆಂಡೂಲ್ಕರ್. ಶತಮಾನದ ಸಾಧನೆ,ನೂರಾರು ದಾಖಲೆಗಳು ಮತ್ತು ಭಾರತರತ್ನದಂತಹ ಅತ್ಯುನ್ನತ ಗೌರವಗಳು ಅವರ ಮುಡಿಗೇರಿವೆ. ಆದರೆ,ಇತ್ತೀಚೆಗೆ ಆಂಧ್ರ ವಿಶ್ವವಿದ್ಯಾಲಯದ ಶತಮಾನೋತ್ಸವದ ವೇದಿಕೆಯ ಮೇಲೆ ಅವರು ತೋರಿದ ಒಂದು ನಡೆ, ಅವರ ಬ್ಯಾಟಿಂಗ್‌ಗಿಂತಲೂ ಹೆಚ್ಚು ಸ್ಫೂರ್ತಿದಾಯಕವಾಗಿತ್ತು. ಮುಖ್ಯಮಂತ್ರಿಗಳಿಂದ ವೇಂಕಟೇಶ್ವರ ಸ್ವಾಮಿಯ ಮೂರ್ತಿಯನ್ನು ಸ್ವೀಕರಿಸುವ ಮುನ್ನ, ಸಚಿನ್ ತಮ್ಮ ಪಾದರಕ್ಷೆಗಳನ್ನು ಕಳಚಿ ಪಕ್ಕಕ್ಕಿಟ್ಟು ಮೌನವಾಗಿ ನಮಿಸಿದರು. ಆ ಕ್ಷಣ ಸಾರಿದ ಸಂದೇಶವೊಂದೇ ಸಾಧನೆಗಿಂತ ಸಂಸ್ಕಾರ ಶ್ರೇಷ್ಠ.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಗೆಲುವಿನ ಬೆನ್ನತ್ತಿರುವ ಯುವ ಪೀಳಿಗೆಗೆ ಈ ಸನ್ನಿವೇಶವು ಒಂದು ದಿವ್ಯ ದರ್ಶನ.ಯಶಸ್ಸಿನ ಉತ್ತುಂಗದಲ್ಲಿರುವಾಗ ಮನುಷ್ಯನಿಗೆ ಅಹಂಕಾರ ಆವರಿಸುವುದು ಸಹಜ. ಆದರೆ, ಸಚಿನ್ ಅವರು ಅಷ್ಟೊಂದು ಎತ್ತರಕ್ಕೆ ಬೆಳೆದಿದ್ದರೂ,ಸಂಪ್ರದಾಯ ಮತ್ತು ದೈವಿಕತೆಯ ಮುಂದೆ ತಮ್ಮ ವಿನಯವನ್ನು ಪ್ರದರ್ಶಿಸಿದರು. ನಾವು ಎಷ್ಟೇ ಎತ್ತರಕ್ಕೆ ಹಾರಿದರೂ ನಮ್ಮ ಪಾದಗಳು ನೆಲದ ಮೇಲಿರಬೇಕು ಎಂಬ ಜೀವನ ಸತ್ಯಕ್ಕೆ ಅವರು ಕನ್ನಡಿ ಹಿಡಿದರು.


ಯುವ ಕಣ್ಮಣಿಗಳೇ ಗಮನಿಸಿ

ಕೇವಲ ಪದವಿಗಳು ಅಥವಾ ಬ್ಯಾಂಕ್ ಬ್ಯಾಲೆನ್ಸ್ ನಿಮ್ಮ ವ್ಯಕ್ತಿತ್ವವನ್ನು ನಿರ್ಧರಿಸುವುದಿಲ್ಲ.



ಬದಲಾಗಿ,ನೀವು ನೀಡುವ ಗೌರವ ಮತ್ತು ಪಾಲಿಸುವ ಸಂಸ್ಕಾರಗಳು ನಿಮ್ಮನ್ನು ಮಹಾಪುರುಷರನ್ನಾಗಿ ಮಾಡುತ್ತವೆ. ಆಧುನಿಕತೆಯ ಹೆಸರಿನಲ್ಲಿ ನಮ್ಮ ಬೇರುಗಳನ್ನು ಕತ್ತರಿಸಿಕೊಳ್ಳುವುದು ಪ್ರಗತಿಯಲ್ಲ. ಸಚಿನ್ ಅವರ ಈ ಸರಳತೆ ನಮಗೆ ಕಲಿಸುವುದು ಏನೆಂದರೆ ವಿನಯವೇ ನಿಜವಾದ ವಿಜಯದ ಸಂಕೇತ.

ನೀವು ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಿ,ಆ ಸಾಧನೆಯ ಶಿಖರದಲ್ಲೂ ತಲೆಬಾಗುವ ಗುಣ ನಿಮ್ಮದಾಗಿರಲಿ.ಅಹಂಕಾರವನ್ನು ಕಳಚಿ ಸಂಸ್ಕಾರವನ್ನು ಮೈಗೂಡಿಸಿಕೊಂಡಾಗ ಮಾತ್ರ ನೀವು ಸಮಾಜದಲ್ಲಿ ಅಳಿಸಲಾಗದ ಛಾಪು ಮೂಡಿಸಲು ಸಾಧ್ಯ. ನೆನಪಿಡಿ,ಯಶಸ್ಸು ತಾತ್ಕಾಲಿಕ, ಆದರೆ ಸಂಸ್ಕಾರವಂತ ವ್ಯಕ್ತಿತ್ವ ಶಾಶ್ವತ.



# ಅಣ್ಣ from Mexico' ಟೀಸರ್ ರಿಲೀಸ್



ನಟ ಡಾಲಿ ಧನಂಜಯ್ ನಟಿಸುತ್ತಿರುವ 'ಅಣ್ಣ from Mexico' ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಟೀಸರ್ ಬಿಡುಗಡೆಗೊಳಿಸಿದರು.

ಟೀಸರ್ ಥ್ರಿಲ್ಲಿಂಗ್ ಆಗಿದೆ. ಹೊಸತನದಿಂದ ಕೂಡಿದೆ. ಶ್ರೀಮಂತಿಕೆಯಿಂದ ಕಾಣಿಸುತ್ತಿದೆ. ಧನಂಜಯ್ ಆಕ್ಟಿಂಗ್ ಸೂಪರ್. ಅದ್ರಲ್ಲೂ ಕರ್ನಾಟಕ ಲಾಕೆಟ್ ಬಹಳಷ್ಟು ಇಷ್ಟವಾಯ್ತು. ಮನಸ್ಸಿಗೆ ಸಮಾಧಾನವಾಯ್ತು. ಟೀಸರ್ ನೋಡಿದರೆ ಸಿನಿಮಾ ಹೇಗಿರಲಿದೆ ಎಂಬ ಕ್ಯೂರಿಯಾಸಿಟಿ ಹೆಚ್ಚಿಸುತ್ತದೆ. ನಾವು ಚಿತ್ರರಂಗಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂಬ ಉದ್ದೇಶದಿಂದ ಚಿತ್ರ ನಿರ್ಮಾಣಕ್ಕಿಳಿದಿದ್ದೇವೆ. ಕನ್ನಡ ಚಲನಚಿತ್ರಗಳನ್ನು ನೋಡಿಕೊಂಡು ಬೆಳೆದಿದ್ದೇವೆ. ಕನ್ನಡ ಚಿತ್ರರಂಗ ಸಾಕಷ್ಟು ಶ್ರೀಮಂತವಾಗಿದೆ. ಈ ಚಿತ್ರದ ಕಥೆ ಕೇಳಿದೆವು ಇಷ್ಟವಾಯ್ತು. ಚಿತ್ರದಲ್ಲಿ ಒಂದೊಳ್ಳೆ ಪ್ರಯೋಗ ಮಾಡುವ ಉದ್ದೇಶದಿಂದ ಚಾಮುಂಡಿ ಆಶೀರ್ವಾದ ಪಡೆದು ಈ ಜರ್ನಿ ಶುರು ಮಾಡಿದೆವು ಎಂದರು. ಹೆಬ್ಬಾಳ್ಕರ್..

ಡಾಲಿ ಧನಂಜಯ್ ಮಾತನಾಡಿ, ಈ ಸಿನಿಮಾ ಶುರುವಾದ ಪ್ರೊಸೆಸ್ ನನಗೆ ಬಹಳ ಖುಷಿ. ಹೊಯ್ಸಳ ಸಿನಿಮಾ ಬೆಳಗಾವಿಯಲ್ಲಿ ನಡೆಯುವಾಗ ಲಕ್ಷ್ಮೀ ಅವರ ಮನೆಗೆ ಹೋಗಿ ಊಟ ಮಾಡ್ಕೊಂಡು ಬರುವಾಗ ನಮ್ಮ ಬ್ರದರ್ ಗೆ ಸಿನಿಮಾ ಮಾಡುವ ಇಂಟ್ರೆಸ್ಟ್ ಇದೆ. ಏನು ಮಾಡಬಹುದು ನೋಡಿ ಎಂದಿದ್ದರು. ಆ ಬಳಿಕ ಈ ಜರ್ನಿ ಶುರುವಾಯ್ತು. ಚೆನ್ನಾರಾಜು ಅವರು ಪ್ರೊಡಕ್ಷನ್ ಮಾಡಿದ್ದಾರೆ ಎಂಬುವುದು ಗೊತ್ತಾಯ್ತು. ಅವರಿಗೆ ಸಖತ್ ಸ್ಟೈಲೀಶ್ ಆಗಿ, ಆಕ್ಷನ್ ಈ ರೀತಿ ನನ್ನನ್ನು ತೋರಿಸಬೇಕು ಎಂದುಕೊಂಡಿದ್ದರು. ಆದರೆ ಮೇಡಂ ಬರ್ತಾರೆ ಎಂದಾಗ ಆಕ್ಷನ್. ಮಾತ್ರವಲ್ಲ ಫ್ಯಾಮಿಲಿ ಎಂಟರ್ಟೈನ್ಮೆಂಟ್ ಇರಬೇಕು ಎಂದುಕೊಂಡೆವು. ಯಾಕೆಂದರೆ ಅವರು ಜವಾಬ್ದಾರಿಯುವ ಸ್ಥಾನದಲ್ಲಿ ಇದ್ದಾರೆ. ಹೀಗಾಗಿ ನಾವು ಬಡವ ರಾಸ್ಕಲ್ ಡೈರೆಕ್ಟರ್ ಅವರನ್ನು ಆಯ್ಕೆ ಮಾಡಿದೆವು. ಹೀಗೆ ಒಳ್ಳೆ ಟೀಂ ಆಯ್ತು ಎಂದರು.

ಚಿತ್ರಕ್ಕೆ ನಿರ್ದೇಶಕ ಶಂಕರ್ ಗುರು ಆಕ್ಷನ್ ಕಟ್ ಹೇಳಿದ್ದಾರೆ. ನಾಯಕಿಯಾಗಿ ರೀಷ್ಮಾ ನಾಣಯ್ಯ ನಟಿಸುತ್ತಿದ್ದು, ಸಿನಿಮಾದಲ್ಲಿದ್ದ ರಂಗಾಯಣ ರಘು, ನಾಗಭೂಷಣ, ಪೂರ್ಣ ಮೈಸೂರು ಈ ಚಿತ್ರದ ಮುಖ್ಯ ತಾರಾಗಣದಲ್ಲಿದ್ದು, ವಾಸುಕಿ ವೈಭವ್ ಸಂಗೀತ, ಅಜಯ್ ಸಂಕಲನ , ಗುಣ ಕಲಾ ನಿರ್ದೇಶನ ಚಿತ್ರಕ್ಕಿದೆ. ಐರಾ ಫಿಲ್ಮ್ಸ್ ಹಾಗೂ ರಾಯಲ ಸ್ಟುಡಿಯೋಸ್‌ಬ್ಯಾನರ್ ಅಡಿ ಚಿತ್ರ ನಿರ್ಮಾಣವಾಗುತ್ತಿದೆ.

ಈ ಹಿಂದೆ ಬಡವ ರಾಸ್ಕಲ್ ನಂತಹ ಸೂಪರ್ ಹಿಟ್ ಚಿತ್ರ ಕೊಟ್ಟಿರುವ ಅದೇ ತಂಡ 'ಅಣ್ಣ ಜಿಡಿಠಟ ಒಜಥುಛಿಠ'ಗಾಗಿ ಒಂದಾಗಿದೆ. ಬಹಳ ಅದ್ದೂರಿಯಾಗಿ ಚಿತ್ರವನ್ನು ಕಟ್ಟಿಕೊಡುತ್ತಿದೆ.

ಟೀಸರ್ ಬಿಡುಗಡೆ ಕಾರ್ಯಕ್ರಮದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಸಹೋದರ ಹಾಗೂ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ್ ಹಟ್ಟಿಹೊಳಿ,ಶಾಸಕಿ ನಯನಾ ಮೋಟಮ್ಮ, ನಟ ಡಾಲಿ ಧನಂಜಯ್, ನಟಿ ರೀಷ್ಮಾ ನಾಣಯ್ಯ, ಚಿತ್ರದ ನಿರ್ದೇಶಕರಾದ ಶಂಕರ್ ಗುರು, ಸಹ ನಿರ್ಮಾಪಕರಾದ ಸತ್ಯ ರಾಯಲ, ದಿವ್ಯಾ, ಆನಂದ್ ಆಡಿಯೋದ ಶ್ಯಾಮ್, ಸಂಗೀತ ನಿರ್ದೇಶಕ ವಾಸುಕಿ ವೈಭವ್, ನಟ ನಾಗಭೂಷಣ್ ಸೇರಿದಂತೆ ಚಿತ್ರತಂಡದ ಸದಸ್ಯರು ಉಪಸ್ಥಿತರಿದ್ದರು.

# ಶಿವಣ್ಣ ಬೇಲ್ ಫಸ್ಟ್ ಲುಕ್ ಅನಾವರಣ




ದಕ್ಷಿಣ ಭಾರತದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಕೆವಿಎನ್ ಮೊದಲ ಬಾರಿಗೆ ಶಿವರಾಜ್ ಕುಮಾರ್ ಅವರ ಜೊತೆ ಕೈ ಜೋಡಿಸಿರುವುದು ಗೊತ್ತೇ ಇದೆ. ನಿರ್ದೇಶಕ ಪವನ್ ಒಡೆಯರ್ ಸಾರಥ್ಯದಲ್ಲಿ ಮೂಡಿ ಬರ್ತಿರುವ ಈ ಸಿನಿಮಾದ ಫಸ್ಟ್ ಲುಕ್ ಹಾಗೂ ಟೈಟಲ್ ಅನಾವರಣ ಮಾಡಲಾಗಿದೆ.

ವೆಂಕಟ್ ಕೆ ನಾರಾಯಣ್, ಶಿವಣ್ಣ ಹಾಗೂ ಪವನ್ ಒಡೆಯರ್ ಸಂಯೋಗದ ಈ ಸಿನಿಮಾಗೆ ಬೇಲ್ ಎಂಬ ಟೈಟಲ್ ಇಡಲಾಗಿದೆ. ಮಳೆಯಲ್ಲಿ ಛತ್ರಿ ಹಿಡಿದು ಶಿವಣ್ಣ ನಿಂತಿರುವ ಪೋಸ್ಟರ್ ಅಭಿಮಾನಿಗಳಲ್ಲಿ ಕುತೂಹಲ ಹೆಚ್ಚುವಂತೆ ಮಾಡಿದೆ.

ಈ ಮಹತ್ವಾಕಾಂಕ್ಷೆ ಪ್ರಾಜೆಕ್ಟ್ ನ್ನು ವೆಂಕಟ್ ಕೆ ನಾರಾಯಣ್ ಅವರು ತಮ್ಮದೇ ಕೆವಿಎನ್ ಪ್ರೊಡಕ್ಷನ್ ಬ್ಯಾನರ್ ನಡಿ ನಿರ್ಮಾಣ ಮಾಡುತ್ತಿದ್ದಾರೆ. ಗೋವಿಂದಾಯ ನಮಃ, ಗೂಗ್ಲಿ, ರಣವಿಕ್ರಮ, ನಟಸಾರ್ವಭೌಮ, ರೇಮೋ ಸೇರಿದಂತೆ ಅನೇಕ ಸೂಪರ್ ಹಿಟ್ ಚಿತ್ರ ಕೊಟ್ಟಿರುವ ಪವನ್ ಒಡೆಯರ್ ನಿರ್ದೇಶನ ಮಾಡುತ್ತಿದ್ದಾರೆ. ಈ ಮೂಲಕ ಪವನ್ ಶಿವಣ್ಣಗೆ ಆಕ್ಷನ್ ಕಟ್ ಹೇಳಬೇಕೆಂಬ ಬಹುದಿನಗಳ ಕನಸನ್ನು ಈಡೇರಿಸಿಕೊಳ್ಳುತ್ತಿದ್ದಾರೆ.

ಈ ಬಗ್ಗೆ ಮಾತನಾಡಿರುವ ನಿರ್ದೇಶಕ ಪವನ್ ಒಡೆಯರ್, "ಇದು ನನಗೂ ಮತ್ತು ನಿರ್ಮಾಣ ಸಂಸ್ಥೆಗೂ ಅತ್ಯಂತ ವಿಶೇಷವಾದ ಸಿನಿಮಾವಾಗಲಿದೆ. ನಿಮಗಾಗಿ ನಾವು ಬಹಳಷ್ಟು ಕಾಯ್ದಿರಿಸಿದ್ದೇವೆ ಮತ್ತು ಶೀಘ್ರದಲ್ಲೇ ಟೀಸರ್ ಅನ್ನು ಘೋಷಿಸುತ್ತೇವೆ. ಶಿವಣ್ಣ ಅವರೊಂದಿಗೆ ಕೆಲಸ ಮಾಡುವುದು



ನನ್ನ ಕನಸು ನನಸಾಗಿದೆ. ಅವರು ದಶಕಗಳಿಂದ ಐಕಾನ್ ಆಗಿದ್ದಾರೆ ಮತ್ತು ಹಿಂದೆಂದೂ ಮಾಡದ ರೀತಿಯಲ್ಲಿ ಅವರನ್ನು ಪ್ರಸ್ತುತಪಡಿಸುತ್ತಿರುವುದು ನನಗೆ ತುಂಬಾ ಸಂತೋಷ ತಂದಿದೆ" ಎಂದರು.

'ಬೇಲ್' ನಮಗೆ ಬಹಳ ವಿಶೇಷವಾದ ಯೋಜನೆಯಾಗಿದ್ದು, ಇದು ಬಲವಾದ ಕಥೆ ಹೇಳುವಿಕೆಯನ್ನು ವಿಶಿಷ್ಟ ಸಿನಿಮೀಯ ದೃಷ್ಟಿಕೋನದೊಂದಿಗೆ ಸಮತೋಲನಗೊಳಿಸುತ್ತದೆ. ಪವನ್ ಒಡೆಯರ್ ಅವರಂತಹ ಸಾಬೀತಾದ ಕಥೆಗಾರರೊಂದಿಗೆ ಕೈ ಜೋಡಿಸುವುದು ಮತ್ತು ಶಿವಣ್ಣ ಅವರಂತಹ ಐಕಾನ್ ಜೊತೆಗೆ ಕೆಲಸ ಮಾಡುವುದು ಸಂಪೂರ್ಣ ಗೌರವವಾಗಿದೆ ಮತ್ತು ಅರ್ಥಪೂರ್ಣ ಸಿನಿಮಾವನ್ನು ನೀಡುವ ನಮ್ಮ ಉದ್ದೇಶದೊಂದಿಗೆ ಸಂಪೂರ್ಣವಾಗಿ ಹೊಂದಿಕೆಯಾಗುತ್ತದೆ. ಪ್ರೇಕ್ಷಕರು ಇಲ್ಲಿಯವರೆಗೆ ನೋಡಿರದ ಹೊಸ ದೃಷ್ಟಿಕೋನದಲ್ಲಿ ಶಿವಣ್ಣ ಅವರನ್ನು ಪ್ರಸ್ತುತಪಡಿಸಲು ನಾವು ವಿಶೇಷವಾಗಿ ಎದುರು ನೋಡುತ್ತಿದ್ದೇವೆ' ವೆಂಕಟ್ ಕೆ ಕೊನಂಕಿ ಹೇಳಿದ್ದಾರೆ.



ವಿಷ್ಣುವರ್ಧನ್ ಅವರಿಗೆ ಮರಣೋತ್ತರವಾಗಿ ಘೋಷಿಸಲಾಗಿರುವ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಮೇ ತಿಂಗಳಲ್ಲಿ ನಡೆಯಲಿದೆ ಎಂದು ತಮ್ಮನ್ನು ಭೇಟಿ ಮಾಡಿದ ನಟ ಅನಿರುದ್ಧ ಜತಕರ ಅವರಿಗೆ ಮುಖ್ಯಮಂತ್ರಿ ತಿಳಿಸಿದ್ದಾರೆ



ಉಡುಪಿ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿದ ನಟಿ ತಾರಾ ಅನುರಾಧ ದೇವರ ದರ್ಶನದ ಬಳಿಕ ಪರ್ಯಾಯ ಶ್ರೀ ಶೀರೂರು ಮಠಾಧೀಶರಿಂದ ಪ್ರಸಾದ ಸ್ವೀಕರಿಸಿದರು

# ಕೇಡಿ ಇಂದು ಬಿಡುಗಡೆ

ಧ್ರುವ ಸರ್ಜಾ ನಟನೆಯ 'KD' ಚಿತ್ರ ಇಂದು ತೆರೆ ಕಾಣುತ್ತಿದೆ. ಜೋಗಿ ಪ್ರೇಮ್ ನಿರ್ದೇಶನದ ಚಿತ್ರ 'ಸರ್ಸೆ ನಿನ್ನ ಸೆರಗ ಸರ್ಸೆ' ಹಾಡಿನ ವಿವಾದದಿಂದ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ಇದರಿಂದಾಗಿ ಚಿತ್ರಕ್ಕೆ ಸೆನ್ಸಾರ್ ಸಮಸ್ಯೆಯೂ ಎದುರಾಗಿತ್ತು. ಎಲ್ಲ ಅಡ್ಡಿಗಳನ್ನು ದಾಟಿ ಚಿತ್ರ ತೆರೆಗೆ ಬಂದಿದೆ.

ಕೆವಿಎನ್ ಪ್ರೊಡಕ್ಷನ್ ನಿರ್ಮಾಣದ ಸಿನಿಮಾ ಮೂರು ವರ್ಷಗಳ ಹಿಂದೆ ಸೆಟ್ಟೇರಿತ್ತು. ಎಲ್ಲವೂ ಅಂದುಕೊಂಡಂತೆ ಆಗಿದ್ದರೆ ಕಳೆದ ವರ್ಷ ಡಿಸೆಂಬರ್‌ನಲ್ಲಿಯೇ ಚಿತ್ರ ಬಿಡುಗಡೆಗೊಳ್ಳಬೇಕಿತ್ತು. ರೀಷ್ಮಾ ನಾಣಯ್ಯ ಚಿತ್ರದ ನಾಯಕಿ. ಸಂಜಯ್ ದತ್, ಶಿಲ್ಪಾ ಶೆಟ್ಟಿ, ರವಿಚಂದ್ರನ್, ರಮೇಶ್ ಅರವಿಂದ್ ಮುಂತಾದವರು ಚಿತ್ರದಲ್ಲಿದ್ದಾರೆ. ಸುದೀಪ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಚಿತ್ರಕ್ಕೆ ಅರ್ಜುನ್ ಜನ್ಯ ಸಂಗೀತ, ವಿಲಿಯಂ ಡೇವಿಡ್ ಛಾಯಾಚಿತ್ರಗ್ರಹಣವಿದೆ.



# ಸಮಾಜಕ್ಕೆ ಸಂದೇಶ ತರುವ `ಧೃತಿ'

ಚಿತ್ರ ನಿರ್ದೇಶನ ಹಲವು ಪ್ರತಿಭೆಗಳ ಕನಸು. ಅದು ಕೆಲವರಿಗೆ ನನಸಾಗುತ್ತದೆ. ಕೆಲವರಿಗೆ ಕನಸಾಗಿಯೇ ಉಳಿಯುತ್ತದೆ. ಉದ್ಯಮಿ ಜಗದೀಶ್ ಕೂಡ ಚಿಕ್ಕಂದಿನಿಂದಲೂ ನಿರ್ದೇಶಕನಾಗುವ ಕನಸು ಹೊತ್ತವರು. ಆ ಕನಸನ್ನು "ಧೃತಿ" ಚಿತ್ರವನ್ನು ನಿರ್ದೇಶಿಸುವ ಮೂಲಕ ನನಸಾಗಿಸಿಕೊಂಡಿದ್ದಾರೆ ಜಗದೀಶ್. ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುವ "ಧೃತಿ" ಚಿತ್ರದ ಕುರಿತು ನಿರ್ದೇಶಕ ಜಗದೀಶ್ ಹಾಗೂ ಚಿತ್ರತಂಡದವರು ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದು ಹೀಗೆ.

ನಾನೊಬ್ಬ ಉದ್ಯಮಿ. ಚಿಕ್ಕಂದಿನಿಂದಲೂ ಚಿತ್ರ ನಿರ್ದೇಶನ ಮಾಡಬೇಕೆಂಬ ಆಸೆ ನನಗೆ. ಅದು ಈಗ ಈ ಚಿತ್ರದ ಮೂಲಕ ಈಡೇರಿದೆ. ಆರು ವರ್ಷಗಳ ಹಿಂದೆ ಈ ಚಿತ್ರದ ಸ್ಕ್ರಿಪ್ಟ್ ವರ್ಕ್ ಆರಂಭವಾಗಿದ್ದು. ಬಂಡವಾಳ ಹೆಚ್ಚು ಇರದ ಕಾರಣ ಮೊಬೈಲ್ ನಲ್ಲೇ ಚಿತ್ರೀಕರಣ ಮಾಡುವ ಯೋಜನೆ ಇತ್ತು. ಆನಂತರ ನನ್ನ ಪತ್ನಿ ಹಾಗೂ ಸಹೃದಯಿ ಸ್ನೇಹಿತರು ಸಹಕಾರ ನೀಡಿದರು. ಆನಂತರ ಈ ಚಿತ್ರವನ್ನು ಕ್ಯಾಮೆರಾದಲ್ಲಿ ಚಿತ್ರಿಸಲಾಯಿತು. ಚಿತ್ರೀಕರಣ ಪ್ರಾರಂಭವಾದ ಕೆಲವೇ ದಿನಗಳಲ್ಲಿ ಛಾಯಾಗ್ರಾಹಕರು ವಿಧಿವಶರಾದರು. ಆಗ ನಾನೇ ಛಾಯಾಗ್ರಹಣದ ಬಗ್ಗೆ ತಿಳಿದುಕೊಂಡು ಆ ಜವಾಬ್ದಾರಿಯನ್ನು ನಿರ್ವಹಿಸಿದ್ದೆ. ನಮ್ಮ ಸುತ್ತಮುತ್ತ ನಡೆಯುವ ಹಾಗೂ ನಡೆದಿರುವ ಹೆಣ್ಣಿನ ಮೇಲಿನ ಶೋಷಣೆಯ ಬಗ್ಗೆ ಈ ಚಿತ್ರದ ಕಥೆ ಇದೆ. ಹಾಗಂತ ನಮ್ಮ ಚಿತ್ರದಲ್ಲಿ ಬರೀ ಶೋಷಣೆಯನ್ನೇ ತೋರಿಸಿಲ್ಲ. ಅದಕ್ಕೆ ಪರಿಹಾರವನ್ನು ತೋರಿಸಿದ್ದೇವೆ. ಪ್ರಶಾಂತ್ ಈ ಚಿತ್ರದ ನಾಯಕ. ಆಂಚಲ್ ನಾಯಕಿ. ಹಲವಾರು ನೂತನ ಪ್ರತಿಭೆಗಳು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಪ್ರಸನ್ನ ಕುಮಾರ್ ಅವರ ಸಂಗೀತ ಈ ಚಿತ್ರದ ಹೈಲೆಟ್. ಕಥೆ, ಚಿತ್ರಕಥೆ, ಸಂಭಾಷಣೆ, ಗೀತರಚನೆ ಹಾಗೂ ನಿರ್ಮಾಣ ಕೂಡ ನನ್ನದೆ. ಮೇ 8 ರಂದು ನಮ್ಮ ಚಿತ್ರ ತೆರೆಗೆ ಬರುತ್ತಿದೆ. ದಯವಿಟ್ಟು ಎಲ್ಲರೂ ಚಿತ್ರಮಂದಿರಗಳಲ್ಲೇ ನಮ್ಮ ಚಿತ್ರ ನೋಡಿ ಎಂದರು ನಿರ್ದೇಶಕ ಹಾಗೂ ನಿರ್ಮಾಪಕ ಜಗದೀಶ್ .

ಇದು ನನ್ನ ಮೊದಲ ಚಿತ್ರ. ಮೊದಲ ಚಿತ್ರದಲ್ಲೇ ಇಂತಹ ಒಳ್ಳೆಯ ಪಾತ್ರ ಸಿಕ್ಕಿರುವುದು ಖುಷಿಯಾಗಿದೆ. "ಧೃತಿ" ನನ್ನ ಪಾತ್ರದ ಹೆಸರು. ಸಾಕಷ್ಟು ಸಮಸ್ಯೆ ಎದುರಾದರೂ "ಧೃತಿಗೆಡದೆ" ಎಲ್ಲವನ್ನು ಎದುರಿಸುವ ಪಾತ್ರ ನನ್ನದು ಎಂದು ನಾಯಕಿ ಆಂಚಲ್ ಹೇಳಿದರು.

ನಾನು ಮೂಲತಃ ನೃತ್ಯ ಕಲಾವಿದ ಹಾಗೂ ನೃತ್ಯ ನಿರ್ದೇಶಕ. ರಂಗಭೂಮಿ ಕಲಾವಿದನೂ ಹೌದು. ಯಾವ ರೀತಿಯ ಪಾತ್ರದ ಮೂಲಕ ನಾನು ನಟನಾಗಿ ಚಿತ್ರರಂಗ ಪ್ರವೇಶಿಸಬೇಕೆಂದು ಕೊಂಡಿದ್ದೆನೊ ಅದೇ ತರಹದ ಪಾತ್ರ ನನಗೆ ಸಿಕ್ಕಿರುವುದು ಖುಷಿಯಾಗಿದೆ ಎಂದು ನಾಯಕ ಪ್ರಶಾಂತ್ ತಿಳಿಸಿದರು.

ಸಂಗೀತದ ಕುರಿತು ಪ್ರಸನ್ನ ಕುಮಾರ್ ಮಾಹಿತಿ ನೀಡಿದರು. ನಟರಾದ ಮನೋಜ್ ಕುಮಾರ್ ಹಾಗೂ ಮಧು ಮಂದಗೆರೆ ತಮ್ಮ ಪಾತ್ರದ ಕುರಿತು ಮಾತನಾಡಿದರು.





# ಎಜುಕೇಟಡ್ ಬುಲ್ಸ್ ಟ್ರೈಲರ್

ಕಳೆದ ನಾಲ್ಕು ದಶಕಗಳಿಂದ ಡಾ.ಅಂಬರೀಷ್, ದೇವರಾಜ್, ಜಗ್ಗೇಶ್ ಶಶಿಕುಮಾರ್ ಮುಂತಾದ ಸ್ಟಾರ್ ನಟರ ಚಿತ್ರಗಳಿಗೆ ಆ?ಯಕ್ಷನ್ ಕಟ್ ಹೇಳಿರುವ ಹಿರಿಯ ತಂತ್ರಜ್ಞ ಜಿ.ಕೆ. ಮುದ್ದುರಾಜ್ ಅವರು ಹತ್ತು ವರ್ಷಗಳ ನಂತರ ನಿರ್ದೇಶಿಸಿರುವ ಚಿತ್ರ ಎಜುಕೇಟಡ್ ಬುಲ್ಸ್. ಈ ಚಿತ್ರದ ಚಿತ್ರಕತೆ ಬರೆದು ಆಕ್ಷನ್ ಕಟ್ ಹೇಳುವ ಜತೆಗೆ ಎಂ.ಎಸ್. ಎಂಟರ್‌ಪ್ರೈಸಸ್ ಲಾಂಛನದಲ್ಲಿ ನಿರ್ಮಾಣ ಮಾಡಿದ್ದಾರೆ. ಮುದ್ದುರಾಜ್ ಅವರ ನಿರ್ದೇಶನದ 41ನೇ ಚಿತ್ರ ಇದಾಗಿದ್ದು ಇದರ ಟ್ರೈಲರ್ – ಹಾಡುಗಳ ಬಿಡುಗಡೆ ಸಮಾರಂಭ ನಡೆಯಿತು.

ನೀರಜ್, ಪೂರ್ವಿಕಾ (ಸ್ವಪ್ನ) ಚಿತ್ರದ ನಾಯಕ, ನಾಯಕಿಯಾಗಿ ನಟಿಸಿದ್ದು, ಅಜಯ್ ಕುಮಾರ್, ತೇಜಸ್‌ಕುಮಾರ್, ರಾಕೇಶ್ ಅಲ್ಲದೆ ಪಾಪ ಪಾಂಡು ಖ್ಯಾತಿಯ ಚಿದಾನಂದ್, ಹಿರಿಯ ನಟಿ ಭವ್ಯ ಉಳಿದ ಪಾತ್ರಗಳಲ್ಲಿ ನಟಿಸಿದ್ದಾರೆ.

ಈ ಸಂದರ್ಭದಲ್ಲಿ ನಿರ್ದೇಶಕ ಮುದ್ದುರಾಜ್ ಮಾತನಾಡಿ ಎಜುಕೇಟೆಡ್ ಬುಲ್ಸ್ ಎಂದರೆ

ವಿದ್ಯಾವಂತ ಗೂಡೆಗಳು ಎಂದರ್ಥ. ಎಲ್ಲಾ ಕಲಾವಿದರು ಹೊಸಬರು ಅನಿಸದ ಹಾಗೆ ಅಭಿನಯಿಸಿದ್ದಾರೆ. 4 ವರ್ಷಗಳ ಹಿಂದೆ ಇದೇ ಹೆಸರಿನಲ್ಲಿ ಸಿನಿಮಾ ಆರಂಭಿಸಿದ್ದೆ. ಆ ನಿರ್ಮಾಪಕರು ಹಿಂದೆ ಸರಿದು ಚಿತ್ರ ನಿಂತು ಹೋಯಿತು. ಆಮೇಲೆ ಬೇರೊಂದು ಕಥೆ ತೆಗೆದುಕೊಂಡು ನಿರ್ದೇಶಿಸಿ ನಾನೇ ನಿರ್ಮಾಣ ಸಹ ಮಾಡಿದ್ದೇನೆ. 4 ಜನ ವೆಲ್ ಎಜುಕೇಟೆಡ್ ಯುವಕರು, ಅವರಿಗೆ ಸಮಾಜದಲ್ಲಿ ನಮ್ಮನ್ನು ನಾವು ಗುರುತಿಸಿಕೊಳ್ಳಬೇಕು, ಹೀಗೇ ಇರಬೇಕು ಎಂಬ ಕನಸಿರುತ್ತದೆ. ಇವರ ಆಸೆಯನ್ನು ಕೆಲವರು ದುರುಪಯೋಗಪಡಿಸಿಕೊಳ್ಳುತ್ತಾರೆ. ಹೀಗೇ ಸಂಕಷ್ಟಕ್ಕೆ ಸಿಕ್ಕಿ ಹಾಕಿಕೊಳ್ತಾನೇ ಹೋಗ್ತಾರೆ. ವಿದ್ಯೆಯ ಜತೆ ಬುದ್ದಿ ಸ್ವಲ್ಪ ಜಾಸ್ತಿನೇ ಇರಬೇಕು ಎಂಬ ಕಾನ್ಸೆಪ್ಟ್ ಇಟ್ಟುಕೊಂಡು ಮಾಡಿದ ಚಿತ್ರವಿದು. ಸೆನ್ಸಾರ್ ಯು/ಎ ಕೊಟ್ಟಿದ್ದಾರೆ. ಸಾಂಗ್, ಡೈಲಾಗ್, ಕ್ಯಾಮೆರಾ ವರ್ಕ್ ತುಂಬಾ ಚೆನ್ನಾಗಿ ಬಂದಿದೆ. ಜನ ಇಷ್ಟಪಡುತ್ತಾರೆ ಎಂಬ ನಂಬಿಕೆಯಿದೆ. ನಿರ್ಮಾಪಕನಿಗೆ 50% ಆದರೂ ರಿಟರ್ನ್ ಆಗಬೇಕು, ಜನ ಕೊಡೋ 100 ರೂಪಾಯಿಗೆ ನ್ಯಾಯ ಒದಗಿಸಬೇಕು ಎನ್ನುವುದು ನನ್ನ ಪಾಲಿಸಿ. ನಾನು ಬಕೆಟ್ ಹಿಡಿದಿದ್ದರೆ 150 ಸಿನಿಮಾ ಮಾಡ್ತಿದ್ದೆ, ಒಂದಷ್ಟು ಜನರಿಗೆ ಸಿನಿಮಾ ತೋರಿಸಿದಾಗ ಎದ್ದುನಿಂತು ಕ್ಲಾಪ್ ಮಾಡಿದರು ಎಂದು ಹೇಳಿದರು.

ಸಂಗೀತ ನಿರ್ದೇಶಕ ಸೂರಜ್ ಜೋಯಿಸ್ ಮಾತನಾಡುತ್ತ ಕಂಗ್ರಾಚುಲೇಶನ್ಸ್ ಬ್ರದರ್ಸ್, ಬಿಚ್ಚುಗತ್ತಿ ಸೇರಿದಂತೆ 15 ಚಿತ್ರಗಳಿಗೆ ಮ್ಯೂಸಿಕ್ ಮಾಡಿದ್ದೇನೆ. ಇದು 16ನೇ ಚಿತ್ರ. 2 ಹಾಡುಗಳ ಜತೆ ಮೆಸೇಜ್, ಎಂಟರ್ ಟೈನ್ ಮೆಂಟ್ ಇರೋ ಚಿತ್ರವಿದು, ಹಿನ್ನೆಲೆ ಸಂಗೀತವನ್ನೂ ಮಾಡಿದ್ದೇನೆ ಎಂದರು.

ನಟ ಚಿದಾನಂದ್ ಮಾತನಾಡಿ ಭಾಗ್ಯಲಕ್ಷ್ಮಿಗಾಗಿ ನಾವೆಲ್ಲ ಆಗ ಬರುತ್ತೆ, ಈಗ ಬರುತ್ತೆ ಅಂತ ಕಾಯ್ತಾ ಇರ್ತೇವೆ. ಈ ಚಿತ್ರ 25 ಕೋಟಿಯ ಆಸೆಯನ್ನು ಉಳಿಸುತ್ತೆ ಎಂದರು.

ನಾಯಕಿ ಪೂರ್ವಿಕಾ ಮಾತನಾಡಿ ಹಳ್ಳಿಯ ಸಾಮಾನ್ಯ ಹುಡುಗಿಯಾಗಿ ನಟಿಸಿದ್ದೇನೆ. ಯೂಥ್ ಗೆ ಮೋಟಿವೇಶನ್ ಆಗೋ ಚಿತ್ರವಿದು ಎಂದರು. ಉಳಿದ ಕಲಾವಿದರೆಲ್ಲ ತಂತಮ್ಮ ಪಾತ್ರಗಳ ಕುರಿತಂತೆ ಸಂಕ್ಷಿಪ್ತವಾಗಿ ಹೇಳಿಕೊಂಡರು.

ರತಿಂದ್ ಗೌಡ ಅವರ ಛಾಯಾಗ್ರಹಣ , ಸಂಜೀವರೆಡ್ಡಿ ಅವರ ಸಂಕಲನ, ಎಂ.ಪಿ.ಅರುಣ್‌ಕುಮಾರ್ ಅವರ ಕಥೆ, ಹರೀಶ್ ಅವರ ಸಂಭಾಷಣೆ, ರಾಮ್ ನಾರಾಯಣ್ ಅವರ ಸಾಹಿತ್ಯ, ಥ್ರಿಲ್ಲರ್ ಮಂಜು ಅವರ ಸಾಹಸ, ಬಾಬು ಖಾನ್ ಅವರ ಕಲೆ, ಸಫೈರ್ ರವಿ ಅವರ ನಿರ್ಮಾಣ ನಿರ್ವಹಣೆ ಈ ಚಿತ್ರಕ್ಕಿದೆ. ಬೆಂಗಳೂರು ಸುತ್ತಮುತ್ತ ಈ ಚಿತ್ರದ ಚಿತ್ರೀಕರಣ ನಡೆಸಲಾಗಿದೆ.

# ಬೆಂಗಳೂರಿನಲ್ಲಿ ಕಾಶ್ಮೀರ ಮುಖ್ಯಮಂತ್ರಿ ಕನ್ನಡ ಚಿತ್ರರಂಗದ ಭೇಟಿ



ಜಮ್ಮು – ಕಾಶ್ಮೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು ಇತ್ತೀಚೆಗೆ ಬೆಂಗಳೂರಿಗೆ ಆಗಮಿಸಿದ್ದರು.

ಈ ಸಂದರ್ಭದಲ್ಲಿ ಹಿರಿಯ ನಿರ್ಮಾಪಕ ರಾಕ್ಲೈನ್ ವೆಂಕಟೇಶ್, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಎಂ.ಜಿ ರಾಮಮೂರ್ತಿ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಉಪಾಧ್ಯಕ್ಷರಾದ ಸುಂದರರಾಜ್, ನಿರ್ಮಾಪಕ ಎನ್ ಎಸ್ ರಾಜಕುಮಾರ್, ಇನ್ನೋವೇಟಿವ್ ಪ್ರಸಾದ್, ನಿರ್ಮಾಪಕರ ಸಂಘದ ಜಂಟಿ ಕಾರ್ಯದರ್ಶಿ ರಮೇಶ್ ಯಾದವ್ ಸೇರಿದಂತೆ ಕನ್ನಡ ಚಿತ್ರರಂಗದ ಗಣ್ಯರು ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಿದ್ದಾರೆ. ನಿರ್ಮಾಪಕ ಎನ್ ಎಸ್ ರಾಜಕುಮಾರ್ ಈ ಭೇಟಿಯ ವ್ಯವಸ್ಥೆಯನ್ನು ಮಾಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು, ಕನ್ನಡ ಚಿತ್ರಗಳ ಚಿತ್ರೀಕರಣಕ್ಕೆ ಜಮ್ಮು – ಕಾಶ್ಮೀರದಲ್ಲಿ ಸೂಕ್ತ ವ್ಯವಸ್ಥೆ ಹಾಗೂ ಭದ್ರತೆ ನೀಡುವುದರ ಜೊತೆಗೆ ಇನ್ಸೆಂಟಿವ್ ಸಹ ನೀಡುವುದಾಗಿ ಹೇಳಿದ್ದಾರೆ. ಜೊತೆಗೆ ಕನ್ನಡ ಚಿತ್ರರಂಗದ ಪ್ರಮುಖರ ತಂಡ ಸದ್ಯದಲ್ಲೇ ಜಮ್ಮು – ಕಾಶ್ಮೀರಕ್ಕೆ ಬನ್ನಿ ಎಂದು ಆಹ್ವಾನ ಕೂಡ ನೀಡಿದ್ದಾರೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,